₹ 4 | ಪುಟ: 4 | ಸಂಪುಟ: 4 | ಸಂಚಿಕೆ 73 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 73 | Wednesday, 03, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

# ಕಾಂಗ್ರೆಸ್‌ನಿಂದ ಪ್ರಣಾಳಿಕೆ ರಿಲೀಸ್

## 5 ಗ್ಯಾರಂಟಿ ಯೋಜನೆ ಜತೆಗೆ ಭರವಸೆಗಳ ಘೋಷಣೆ

ಬೆಂಗಳೂರು: ಎಸ್ಸಿ ಸಮುದಾಯಕ್ಕೆ ಶೇ. 15 ರಿಂದ 17ಕ್ಕೆ, ಎಸ್ಟಿ ಸಮುದಾಯಕ್ಕೆ ಶೇ. 3 ರಿಂದ 7ಕ್ಕೆ, ಅಲ್ಪಸಂಖ್ಯಾತ–ರಿಗೆ ಶೇ. 4ರ ಮರುಸ್ಥಾಪನೆ, ಲಿಂಗಾಯತ,ಒಕ್ಕಲಿಗ ಮತ್ತಿತರ ಸಮುದಾಯಗಳ ಆಶೋತ್ತರಗಳನ್ನು ಈಡೇರಿಸಲು ಮೀಸಲಾತಿಯನ್ನು ಶೇ. 50ರಿಂದ 75ರವರೆಗೆ ಹೆಚ್ಚಿಸಲು ಸೂಕ್ತ ಕ್ರಮ ಕೈಗೊಳ್ಳುತ್ತೇವೆ. ಇದರ ಜೊತೆಗೆ ಭಜರಂಗ ದಳವನ್ನು ನಿಷೇಧಿಸುತ್ತೇವೆ ಎಂದು ಕಾಂಗ್ರೆಸ್ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದೆ.

ರಾಜ್ಯ ವಿಧಾನಸಭೆ ಚುನಾವಣೆಗೆ ಇನ್ನೇನು ಕೆಲವೇ ದಿನಗಳು ಬಾಕಿಯಿದೆ. ಈ ಹಿನ್ನೆಲೆಯಲ್ಲಿ ಂಖಅಅ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪ್ರಣಾಳಿಕೆ ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ,ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಬಿ ಕೆ ಹರಿಪ್ರಸಾದ್, ಪ್ರಣಾಳಿಕೆ ಸಮಿತಿ ಅಧ್ಯಕ್ಷ ಡಾ ಜಿ ಪರಮೇಶ್ವರ್ ಸೇರಿ ಹಲವರು ಭಾಗಿಯಾಗಿದ್ದರು.




ಪ್ರಣಾಳಿಕೆಯಲ್ಲಿ ಏನಿದೆ?: ಬಿಜೆಪಿ ಜಾರಿಗೆ ತಂದ ಎಲ್ಲಾ ಜನ ವಿರೋಧಿ ಕಾನೂನುಗಳು ಒಂದು ವರ್ಷದಲ್ಲಿ ರದ್ದುಗೊಳಿಸುವುದರ ಜೊತೆಗೆ ಧರ್ಮ ಮತ್ತು ಜಾತಿಯ ಹೆಸ–ರಿನಲ್ಲಿ ಸಮಾಜದಲ್ಲಿ ದ್ವೇಷವನ್ನು ಬಿತ್ತಿ ವಿಭಜನೆಗೆ ಕಾರಣವಾಗುವ, ವ್ಯಕ್ತಿಗಳು ಮತ್ತು ಸಂಘಟನೆಗಳ ವಿರುದ್ಧ ಕಠಿಣ ಮತ್ತು ನಿರ್ಣಾಯಕ ಕಾನೂನು ಕ್ರಮವನ್ನು ತೆಗೆದುಕೊಳ್ಳಲು ಕಾಂಗ್ರೆಸ್ ಪಕ್ಷ ಬದ್ಧವಾಗಿದೆ.

ಸಂವಿಧಾನವೇ ಪವಿತ್ರ ಎಂದು ನಂಬಿರುವ ನಾವು ಯಾವುದೇ ವ್ಯಕ್ತಿಗಳಾಗಲಿ ಭಜರಂಗದಳ ಮತ್ತು ಪಿಎಫ್ಐಗಳು ಸೇ–ರಿದಂತೆ ಬಹುಸಂಖ್ಯಾತ ಅಥ–ವಾ ಅಲ್ಪಸಂಖ್ಯಾತ ಇತರರಾಗಲಿ, ಸಂವಿಧಾನದ ವಿಧಿಗಳನ್ನು ಉಲ್ಲಂಘಿ–ಸುವುದನ್ನು ಸಹಿಸುವುದಿಲ್ಲ. ಆದ ಕಾರಣ ಇಂತಹ ವ್ಯಕ್ತಿಗಳು ಮತ್ತು ಸಂಘಟನೆಗಳ ನಿಷೇಧವೂ ಸೇರಿದಂತೆ ಬಲವಾದ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಲಾಗುವುದು.

ಈಗಾಗಲೇ ಘೋಷಿಸಿರುವ ಗೃಹಶಕ್ತಿ ಯೋಜನೆಯಡಿ 200 ಯೂನಿಟ್ ವಿದ್ಯುತ್ ಉಚಿತ ನೀಡಲಾಗುವುದು. ಜೊತೆಗೆ ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆ 3000ರೂ. ಪದವೀಧರರಿಗೆ, 1500 ರೂ, ಡಿಪ್ಲೊಮಾ ಪದವೀಧರರಿಗೆ ನೀಡುತ್ತೇವೆ. ಅನ್ನಭಾಗ್ಯ ಯೋಜನೆಯಡಿ ಪ್ರತಿ ವ್ಯಕ್ತಿಗೆ ಉಚಿತ 10 ಕೆಜಿ ಅಕ್ಕಿ ಹಾಗೂ ಗೃಹಲಕ್ಷ್ಮಿ ಯೋಜನೆಯಡಿ 2,000 ರೂ. ಪ್ರತಿ ಮನೆಯ ಯಜಮಾನಿಗೆ ನೀಡಲಾಗುವುದು. ಜೊತೆಗೆ ಎಲ್ಲಾ ಮಹಿಳೆಯರಿಗೆ ಸರ್ಕಾರಿ ಬಸ್ನಲ್ಲಿ ಉಚಿತ ಪ್ರಯಾಣ ಮಾಡಲಾಗುವುದು.

ರಾಷ್ಟ್ರೀಯ ಶಿಕ್ಷಣ ನೀತಿ (ಎನ್ಇಪಿ) ರದ್ದುಗೊಳಿಸುತ್ತೇವೆ ಎಂದು ಘೋಷಣೆ ಮಾಡಿದ್ದಾರೆ. ಜೊತೆಗೆ ಪಠ್ಯಪುಸ್ತಕ ಮರಳಿ ಪರಿಷ್ಕರಣೆಗೊಳಿಸಲಾಗುವುದು. ಪಿಯುಸಿಯಿಂದ ಪಿಜಿವರೆಗೂ ವಿದ್ಯಾರ್ಥಿನಿಯರಿಗೆ ಉಚಿತ ಲ್ಯಾಪ್ ಟಾಪ್, ಡಿಜಿಟಲ್ ನೋಟ್ ಪ್ಯಾಡ್ ಉಚಿತವಾಗಿ ನೀಡಲಾಗುವುದು. ಎರಡು ವರ್ಷಗಳಿಗೊಮ್ಮೆ ಹಿರಿಯ ನಾಗರಿಕರಿಗೆ ರಾಜ್ಯದ 15, ದೇಶದ 10 ಪ್ರವಾಸಿ ತಾಣಗಳಿಗೆ ಉಚಿತ ಯಾತ್ರಾ ಪ್ರವಾಸ ಮಾಡಲಾಗುವುದು.

ಬಿಜೆಪಿ ಒಳ ಮೀಸಲಾತಿ ರದ್ದುಗೊಳಿಸಿ, ಮೊದಲ ಅಧಿವೇಶನದಲ್ಲಿ ಸದಾಶಿವ ಆಯೋಗದ ವರದಿ ಮಂಡನೆ ಮಾಡಲಾಗುತ್ತದೆ. ಎಸ್ಸಿ–ಎಸ್ಟಿ ಒಳ ಮೀಸಲಾತಿಗೆ ನ್ಯಾಯ ಕೊಡಿಸಲು ಕಾಂಗ್ರೆಸ್ ಬದ್ಧವಾಗಿದೆ.

ಸರ್ಕಾರಿ, ಅನುದಾನಿತ ಶಾಲೆಯಲ್ಲಿ ಓದಿ ಪಿಯುಸಿಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸ್ ಆದ ಬಾಲಕಿಂ–ಯರಿಗೆ ಉಚಿತ ಎಲೆಕ್ಟ್ರಿಕ್ ವಾಹನ ಹಾಗೂ ಬುಡಕಟ್ಟು ಸಮುದಾಯದ 100 ಸಾಧಕರಿಗೆ ತಲಾ ಒಂದು ಲಕ್ಷ ಮೊತ್ತದ ಆದಿವಾಸಿ ಸಿರಿ ಗೌರವ ನೀಡಲಾಗುವುದು. ನಾರಾಯಣ ಗುರು ಅಭಿವೃದ್ಧಿ ನಿಗಮ ಸ್ಥಾಪನೆ ಹಾಗೂ ವರ್ಷಕ್ಕೆ 500 ಕೋಟಿ ಅನುದಾನ ನೀಡುತ್ತೇವೆ. ನೇಕಾರರಿಗೆ 10 ಗಂಟೆ ತಡೆ ರಹಿತ ಉಚಿತ ವಿದ್ಯುತ್ ಹಾಗೂ ವಿಧವೆ ಪಿಂಚಣಿ 2500 ಹೆಚ್ಚಳ ಮಾಡಲಾಗುವುದು. ದುಡಿಯುವ ಮಹಿಳೆಯರಿಗಾಗಿ 100 ಹಾಸ್ಟಲ್ ನಿರ್ಮಾಣ ಮಾಡಲಾಗುವುದು. ನಿರ್ಭಯ ವಾಹಿನಿ ಯೋಜನೆ ಮೂಲಕ ಹೈಸ್ಕೂಲ್, ಪಿಯುಸಿ ಬಿಟ್ಟವರಿಗೆ ಉಚಿತ ವಾಹನ ತರಬೇತಿ ಹಾಗೂ ಸಬ್ಸಿಡಿಯಲ್ಲಿ ಆಟೋ, ಮತ್ತು ಕಾರ್ ನೀಡಲಾಗುತ್ತದೆ.

ಒಂದು ಬಾರಿಯ ನೆರವಿನ ರೂಪದಲ್ಲಿ ಬೀದಿ ವ್ಯಾಪಾರಿಗಳಿಗೆ 20 ಸಾವಿರ ಅನುದಾನ ಮಾಡಲಾಗುವುದು, ಹಿರಿಯ ನಾಗರಿಕರಿಗೆ ಎರಡು ವರ್ಷಕ್ಕೊಮ್ಮೆ ರಾಜ್ಯದ 15 ದೇಶದ 10 ಪವಿತ್ರ ಸ್ಥಳಗಳಿಗೆ ಉಚಿತ ಪ್ರವಾಸ ನೀಡುತ್ತೇವೆ. ಕಾಶಿ, ಮಥುರ, ಕೈಲಾಸ, ಮಾನಸ ಸರೋವರ ಯಾತ್ರೆಯ ಸಬ್ಸಿಡಿ ಹೆಚ್ಚಳಗೊಳಿಸುತ್ತೇವೆ. ವಿಶೇಷ ಚೇತನರಿಗೆ ಪ್ರತಿ ಜಿಲ್ಲೆಯಲ್ಲಿ ವಿಶೇಷ ಶಾಲೆ ಸ್ಥಾಪನೆ ಹಾಗೂ ಅಂಗವಿಕಲ ಮಹಿಳೆಯರಿಗೆ ಸ್ವ ಉದ್ಯೋಗಕ್ಕೆ 3 ಲಕ್ಷದವರೆಗೂ ಬಡ್ಡಿ ರಹಿತ ಸಾಲ ನೀಡಲಾಗುವುದು. ಫೀಲ್ಡ್ ಮಾರ್ಷಲ್ ಕಾರ್ಯಪ್ಪ ನಿವೃತ್ತಿ ಸೈನಿಕ ಅಭಿವೃದ್ಧಿ ನಿಗಮ ಸ್ಥಾಪನೆ ಹಾಗೂ ವಾರ್ಷಿಕ 250 ಕೋಟಿ ಅನುದಾನ ನೀಡಲಾಗುವುದು. ಸ್ವ ಉದ್ಯೋಗಕ್ಕಾಗಿ ಶೇ 5% ಬಡ್ಡಿಯಲ್ಲಿ 10 ಲಕ್ಷದವರೆಗೆ ಸಾಲ ಹಗೂ ಪತ್ರಕರ್ತರ ಕಲ್ಯಾಣ ನಿಧಿ ಸ್ಥಾಪನೆ 500 ಕೋಟಿ ಅನುದಾನ ನೀಡುತ್ತೇವೆ. ವಕೀಲರ ಸಂರಕ್ಷಣಾ ಕಾಯ್ದೆ ಅಕ್ಷರಶಃ ಜಾರಿ ಹಾಗೂ ಅನಿವಾಸಿ ಕನ್ನಡಿಗರ ವ್ಯವಹಾರಕ್ಕಾಗಿ ಪ್ರತ್ಯೇಕ ಸಚಿವಾಲಯ ಸ್ಥಾಪನೆ ಮಾಡಲಾಗುವುದು. ಅನಿವಾಸಿ ಕನ್ನಡಗರು ರಾಜ್ಯದಲ್ಲಿ ಉದ್ಯಮ ನಡೆಸಲು 1 ಸಾವಿರ ಕೋಟಿ ಅವರ್ತನ ನಿಧಿ ನೀಡಲಾಗುತ್ತದೆ ಎಂದು ತಿಳಿಸಿದೆ.

# ದಗಲಬಾಜಿ ಪ್ರಣಾಳಿಕೆ: ಬೊಮ್ಮಾಯಿ ವಾಗ್ದಾಳಿ



ಕಾಂಗ್ರೆಸ್ ನವರ ಉಚಿತ ಭರವಸೆಗಳ ಈಡೇರಿಕೆಗೆ ?6 ಲಕ್ಷ ಕೋಟಿ ಬೇಕು. ರಾಜ್ಯ ದಿವಾಳಿಯಾದರೂ ಚಿಂತೆ ಇಲ್ಲ. ಹೇಗಾದರೂ ಮಾಡಿ ಅಧಿಕಾರಕ್ಕೆ ಬರಬೇಕು ಎಂದು ಅವರು ಹವಣಿಸುತ್ತಿದ್ದಾರೆ. ಬಿಜೆಪಿ ಅಭಿವೃದ್ಧಿ, ದೇಶಭಕ್ತಿಯ ಆಧಾರದ ಮೇಲೆ ಮತ ಕೇಳುತ್ತಿದೆ. ಕಾಂಗ್ರೆಸ್ ನವರು ಸಮಾಜ ಒಡೆದು, ದೇಶದ್ರೋಹಿಗಳಿಗೆ ಪರೋಕ್ಷವಾಗಿ ಸಹಾನುಭೂತಿ ತೋರುತ್ತಾ ಮತ ಕೇಳುತ್ತಿದ್ದಾರೆ. ಹಾಗಾಗಿ, ಅವರನ್ನು ಮನೆಗೆ ಕಳಿಸಿ.

**–ಬಸವರಾಜ ಬೊಮ್ಮಾಯಿ, ಮುಖ್ಯಮಂತ್ರಿ**

ಕುಂದಗೋಳ: ಕಾಂಗ್ರೆಸ್ ನವರದ್ದು ಭಾಗ್ಯವಲ್ಲ, ದೌರ್ಭಾಗ್ಯ. ನಾವು ಈಗಾಗಲೇ ಮಾಡಿರುವ ಕೆಲಸಗಳನ್ನೇ ತಿರುಚಿ, ತಮ್ಮ ಪ್ರಣಾಳಿಕೆಯಲ್ಲಿ ನಮೂದಿಸಿದ್ದಾರೆ. ಇವರದ್ದು ದಗಲಬಾಜಿ ಪ್ರಣಾಳಿಕೆ. ಮೇ 13ರವರೆಗೆ ಮಾತ್ರ ಇವರ ಗ್ಯಾರಂಟಿ. ಆಮೇಲೆ ಬರೀ ಗಳಗಂಟೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಪಟ್ಟಣದಲ್ಲಿ ಮಂಗಳವಾರ ಕುಂದಗೋಳ ಕ್ಷೇತ್ರದ ಅಭ್ಯರ್ಥಿ ಎಂ.ಆರ್. ಪಾಟೀಲ ಪರ ರೋಡ್ ಶೋ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ನವರದ್ದು ಅನ್ನಭಾಗ್ಯವಲ್ಲ. ಬದಲಿಗೆ, ಕನ್ನಭಾಗ್ಯ. ಬಡವರ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿ ವಂಚಿಸುತ್ತಿದ್ದಾರೆ ಎಂದರು.

ನಮ್ಮ ಸರ್ಕಾರ ಈಗಾಗಲೇ ನಾಲ್ಕು ಲಕ್ಷ ಮನೆಗಳನ್ನು ನಿರ್ಮಾಣ ಮಾಡಿದೆ. ಒಂದು ಲಕ್ಷ ಉದ್ಯೋಗ ನೇಮಕಾತಿಗೆ ಆದೇಶ ಕೊಟ್ಟಿದ್ದೇನ. ಮಹದಾಯಿ ಯೋಜನೆಗೆ ಅನುಷ್ಠಾನಕ್ಕೆ ಟೆಂಡರ್ ಕರೆದಿದ್ದು, ಒಂದೂವರೆ ವರ್ಷದೊಳಗೆ ಈ ಭಾಗಕ್ಕೆ ನೀರು ಕೊಡುತ್ತೇವೆ. ಶಿಕ್ಷಣ, ಉದ್ಯೋಗ, ಸಾಮಾಜಿಕ ಸಾಮರಸ್ಯಕ್ಕೆ ನಾವು ಒತ್ತು ಕೊಟ್ಟಿದ್ದೇವೆ. ಕುಂದಗೋಳದಲ್ಲಿ 20 ಸಾವಿರ ಜನರಿಗೆ ಕಿಸಾನ್ ಸಮ್ಮಾನ್ ಯೋಜನೆ ತಲುಪಿದೆ. ಸುಖ ಸಂಸಾರಕ್ಕೆ ಬೇಕಾದ ಎಲ್ಲವನ್ನೂ ಕೊಟ್ಟಿದ್ದೇವೆ. ಅದಕ್ಕಾಗಿ, ಚುನಾವಣೆಯಲ್ಲಿ ಬಿಜೆಪಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು.

## ಭಾರಿ ಅಪಘಾತ ಸ್ಥಳದಲ್ಲೆ ಇಬ್ಬರ ಧಾರುಣ ಸಾವು



ಹುಕ್ಕೇರಿ: ಭಾರಿ ಅಪಘಾತ ಸ್ಥಳದಲ್ಲೆ ಇಬ್ಬರ ಧಾರುಣ ಸಾವು, ಹುಕ್ಕೇರಿ ಸಮೀಪ ಹುಕ್ಕೇರಿ ಬೆಳಗಾವಿ ರಸ್ತೆಯಲ್ಲಿ ಸರಿಸುಮಾರು 5 ಗಂಟೆಗೆ ಬಸ್ ಒಂದನ್ನು ಓವರಟೇಕ ಮಾಡಲು ಹೋಗಿ ಅಪಘಾತ ಸಂಭವಿಸಿದೆ,

ಬೆಳಗಾವಿಯಿಂದ ಅಥಣಿ ತಾಲೂಕಿನ ನಂದಗಾವ ಗ್ರಾಮಕ್ಕೆ ತೆರಳುತ್ತಿದ್ದ ಕಾರ್ ಹಾಗೂ ಹುಕ್ಕೇರಿಯಿಂದ ಬೆಳಗಾವಿಕಡೆಗೆ ಹೊಗುವ ಕಾರ್ ನಡುವೆ ಮುಖಾಮುಖಿ ಡಿಕ್ಕಿಯಾಗಿ, ವಾಹನಗಳು ನುಜ್ಜುಗುಜ್ಜಾಗಿವೆ, ಅದ್ರಷ್ಟವಶಾತ ಅಜ್ಜಿ ಮೊಮ್ಮಗ ಹಾಗೂ ಚಾಲಕ ಮೂರು ಜನರಿಗೆ ಗಂಭಿರವಾದ ಗಾಯವಾಗಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಇನ್ನೂ ಸ್ಥಳದಲ್ಲಿ ಒರ್ವ ವ್ಯಕ್ತಿ ಜಯಪಾಲ್ ಸಕಲಕ್ಕನವರ,ಹಾಗೂ ಜೈಯಶ್ರೀ ಎನ್ನುವ ಮಹಿಳೆ ಸ್ಥಳದಲ್ಲೆ ಸಾವನ್ನಪ್ಪಿದ್ದಾರೆ.

ಇನ್ನೂ ಹುಕ್ಕೇರಿಯಿಂದ ಬೆಳಗಾವಿ ಕಡೆಗೆ ಹೊಗುವ ಎಕ್ಸ ಯು ವಿ 500 ಎಂಬ ಕಾರು ಅತಿ ವೇಗವಾಗಿ ಬರುತ್ತಿತ್ತು.ಇನ್ನೂ ಬೆಳಗಾವಿ ಕಡೆಯಿಂದ ಅಥಣಿ ತಾಲೂಕಿನ ನಂದಗಾವ ಗ್ರಾಮಕ್ಕೆ ಹೋಗುವ ಸ್ವಿಪ್ಟ ಡಿಜೈರ ಕಾರಿಗೆ ಡಿಕ್ಕಿ ಹೊಡೆದ ಪರಿಣಾಮ ಸ್ವಿಪ್ಟ ಕಾರನಲ್ಲಿದ್ದವರು ಮ್ರತರಾಗಿದ್ದಾರೆ. ಸ್ವಿಪ್ಟ ಕಾರು ಏಂ 59 0946 ಇದ್ದು. ಎಕ್ಸ ಯ ವಿ 500 ವಾಹನ ಸಂಖ್ಯೆಏಂ49 ಒ 4244 ಇನ್ನೂ ಗಂಭಿರವಾಗಿ ಗಾಯಕ್ಕೊಳಗಾದವರನ್ನ ಸಮೀಪದ ಹುಕ್ಕೇರಿ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲು ಮಾಡಲಾಗಿದೆ. ಸ್ಥಳಕ್ಕೆ ಹುಕ್ಕೇರಿ ಪೋಲಿಸರು ಭೆಟಿ ನೀಡಿ ಪರಿಶಿಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಉತ್ತರದಲ್ಲಿ ವಿಭಿನ್ನ ರೀತಿಯಲ್ಲಿ ಮತ ಯಾಚಿಸಿದ ಪ್ರವೀಣ



ಬೆಳಗಾವಿ: ಬೆಳಗಾವಿ ಉತ್ತರ ಮತ ಕ್ಷೇತ್ರದಲ್ಲಿ ವಿಭಿನ್ನ ರೀತಿಯಲ್ಲಿ ಮತ ಯಾಚಿಸುತ್ತಿರುವ ಪ್ರವೀಣ ಹಿರೇಮಠ ಮನೆ ಮನೆಗೆ ತೆರಳಿ ಗುರು ಹಿರಿಯರನ್ನು ಭೇಟಿಯಾಗಿ ಮತಯಾಚಿಸುತಿದ್ದಾರೆ.

ಗಾಲಿ ಜನಾರ್ಧನ ರೆಡ್ಡಿಯವರ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಪ್ರವೀಣ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಪ್ರಣಾಳಿಕೆ ಮತ್ತು ಅದರ ಮುಂದಿನ ಯೋಜನೆಗಳ ಬಗ್ಗೆ ತಿಳಿಹೇಳಿ ಮತಯಾಚಿಸಿದ್ದಾರೆ. ಇನ್ನು ಐಟಿ ಬಿಟಿ ಫುಲ್ ಹೈಲೈಟ್ ಮಾಡಿದ ಪ್ರವೀಣ ಮುಂಬರುವ ದಿನಗಳಲ್ಲಿ ಬೆಳಗಾವಿಯಲ್ಲಿ ಐಟಿ ಬಿಟಿ ಹಾಗು ಅನೇಕ ಉದ್ಯೋಗ ಸೃಷ್ಟಿಸುವುದಾಗಿ ಹೇಳಿದ್ದಾರೆ.

ಇನ್ನು ಓಖಖ ಕ್ಯಾಂಡಿಡೇಟ ಎಂದೇ ಪ್ರಖ್ಯಾತಿ ಪಡೆದಿರುವ ಪ್ರವೀಣ ತಮ್ಮ ವಿಚಾರ ಧಾರೆ ಮತ್ತು ನಡೆ ನುಡಿಗಳ ಮೂಲಕ ಜನ ಮನ ಗೆಲ್ಲುತ್ತಿರುವ ಪ್ರವೀಣ ಮತಾಧಾನ ನಿಮ್ಮದು ಅಭಿವೃದ್ಧಿ ನಮ್ಮದು ಎಂದು ಹೇಳಿ ತಮ್ಮ ಪಕ್ಷದ ಚಿನ್ಹೆ ಫುಟ್ಬಾಲ ಹಾಗು ಕ್ರಮ ಸಂಖ್ಯೆ 6ಕ್ಕೆ ಮತ ಚಲಾಯಿಸುವಂತೆ ಮತದಾರರಲ್ಲಿ ಕೋರಿದ್ದಾರೆ.

## ಬಿಜೆಪಿಯಿಂದ ಮಾರುಕಟ್ಟೆ ಪ್ರದೇಶದಲ್ಲಿ ಭರ್ಜರಿ ಪ್ರಚಾರ



ಬೆಳಗಾವಿ: ಉತ್ತರ ಮತ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ ರವಿ ಪಾಟೀಲ್ ಮಾರುಕಟ್ಟೆ ಕ್ಯಾಂಪ್ ಏರಿಯಾದಲ್ಲಿ ಬಿರುಸಿನ ಪ್ರಚಾರ ಕೈಕೊಂಡರು.

ನಗರದಲ್ಲಿ ಮಂಗಳವಾರ ಬಿಜೆಪಿ ಬೆಳಿಗ್ಗೆ ಇಂದಲೇ ಮತ ಭೇಟಿಗೆ ಇಳಿದಿದೆ.

ಉತ್ತರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಕ್ಯಾಂಪ್ ಮಾರುಕಟ್ಟೆ ಏರಿಯಾದಲ್ಲಿ ಅಭೂತಪೂರ್ವವಾದ ಬೆಂಬಲ ವ್ಯಕ್ತವಾಗಿದ್ದು ಮಾರುಕಟ್ಟೆ ಅಂಗಡಿಗಳಲ್ಲಿ ಕೂಡ ಪ್ರಚಾರ ಮಾಡಲಾಯಿತು.ಸಿಹಿ ಹಂಚುವುದರ ಮೂಲಕ ವಾಗಿ ಕಾರ್ಯಕ್ರರಲ್ಲಿ ಮತ್ತಷ್ಟು ಉತ್ಸಾಹ ತುಂಬಲಾಯಿತು.ಹೂ ಮಳೆ ಗೈದು ಸ್ವಾಗತಿಸಿದ ಬೆಂಬಲಿಗರು ಈ ಬಾರಿ ಕಮಲ ವನ್ನು ಮತ್ತೆ ಅರಳಿಸುವುದಾಗಿ ಹರ್ಷ ವ್ಯಕ್ತಪಡಿಸಿದರು.ಗಲ್ಲಿ ಗಲ್ಲಿ ಮನೆ ಮನೆಗೆ ತೆರಳಿ ಮತಯಾಚನೆ ಮಾಡಲಾಯಿತು.

ಬಿಜೆಪಿಯ ಅಭ್ಯರ್ಥಿ ರವಿ ಪಾಟೀಲ್ ಈಗಾಗಲೇ ಹಲವಾರು ಸೇವೆ ಸಲ್ಲಿಸಿದ್ದು ಬೆಳಗಾವಿ ನಗರದ ಎಲ್ಲ ಸಮಸ್ಯೆಗಳಾದ ನೀರು ನೈರ್ಮಲ್ಯ ಹಾಗೂ ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಾರೆ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.ಈ ಬಾರಿ ಬಿಜೆಪಿ ಸ್ಪಷ್ಟ ಬಹುಮತದಿಂದ ಉತ್ತರ ಮತ ಕ್ಷೇತ್ರದ ಡಾ ರವಿ ಪಾಟೀಲ್ ಅವರನ್ನ ಗೆಲ್ಲಿಸುವುದು ನಮ್ಮ ಗುರಿ ಎಂದು ಹೇಳಿದರು.ಇನ್ನು ಪ್ರಚಾರದಲ್ಲಿ ವಿಶಾಲ್ ಕಿಲ್ಲೆದಾರ್ ಹಾಗೂ ಡಾ.ರವಿ ಪಾಟೀಲ್ ಧರ್ಮಪತ್ನಿ ಸೇರಿದಂತೆ ಅನೇಕ ಕಾರ್ಯಕರ್ತರು ಪ್ರಚಾರದಲ್ಲಿ ಭಾಗವಹಿಸಿದ್ದರು.

## ಡಿಕೆಶಿ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ಗೆ ಬಡಿದ ರಣಹದ್ದು: ವಿಂಡೋ ಗ್ಲಾಸ್ ಪುಡಿಪುಡಿ



ಕೋಲಾರ: ರಾಜ್ಯ ವಿಧಾನಸಭಾ ಚುನಾವಣೆಗೆ ಕೇವಲ 8 ದಿನಗಳು ಮಾತ್ರ ಬಾಕಿ ಇವೆ. ಹೀಗಾಗಿ ರಾಜ್ಯಕೀಯ ನಾಯಕರು ಭರ್ಜರಿ ಪ್ರಚಾರದಲ್ಲಿ ತೊಡಗಿದ್ದಾರೆ. ಜೊತೆಗೆ ಮಂಗಳವಾರ ಕಾಂಗ್ರೆಸ್ನ ಪ್ರಣಾಳಿಕೆ ಬಿಡುಗಡೆ ಮಾಡಿದ ಬಳಿಕ ಡಿ.ಕೆ. ಶಿವಕುಮಾರ್ ಮುಳುಬಾಗಿಲಿಗೆ ತೆರಳಲು ಹೆಚ್ಎಎಲ್ ಏರ್ಪೋರ್ಟ್ಗೆ ಬಂದಿದ್ದರು.

ಇಲ್ಲಿಂದ ಮುಳುಬಾಗಿಲಿಗೆ ಡಿ.ಕೆ.ಶಿವಕುಮಾರ್ ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ತುರ್ತು ಭೂಸ್ಪರ್ಶವಾಗಿದೆ. ಹಾರಾಟ ವೇಳೆ ಹೆಲಿಕಾಪ್ಟರ್ ಮುಂಭಾಗದ ವಿಂಡೋ ಗಾಜು ಪುಡಿಪುಡಿಯಾಗಿದೆ. ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಹೆಚ್ಎಎಲ್ನಿಂದ ಮುಳಬಾಗಿಲಿಗೆ ತೆರಳುತ್ತಿದ್ದರು.

ಈ ವೇಳೆ ಹೆಲಿಕಾಪ್ಟರ್ಗೆ ರಣಹದ್ದು ಬಡಿದಿದೆ. ಇದರಿಂದ ಹೆಲಿಕಾಪ್ಟರ್ ವಿಂಡೋ ಗ್ಲಾಸ್ಪುಡಿಪುಡಿಯಾಗಿದ್ದು ಹೆಲಿಕಾಪ್ಟರ್ ತುರ್ತು ಭೂಸ್ಪರ್ಶವಾಗಿದೆ. ಇದರಿಂದ ಡಿಕೆ ಶಿವಕುಮಾರ್ ಗಾಭ–ರಿಯಾಗಿದ್ದಾರೆ. ಸದ್ಯ ಯಾವುದೇ ಹಾನಿಯಾಗಿಲ್ಲ. ಡಿ.ಕೆ.ಶಿವಕುಮಾರ್ ಹೆಚ್ಎಎಲ್ ಏರ್ಪೋರ್ಟ್ಗೆ ಹಿಂದಿರುಗಿದ್ದಾರೆ.

## ಹಣ ಕೊಟ್ಟು ಜನಸಾಗರ ಕೂಡಿಸಿದ ಬಸವರಾಜ ಹುಂದ್ರಿ



ಯಮಕನಮರಡಿ: ಹಣ ಕೊಟ್ಟು ಜನ ಸೇರಿಸಿದ ಬಸವರಾಜ ಹುಂದ್ರಿ ಬಿಜೆಪಿ ಪ್ರಚಾರದ ಕಾರ್ಯಕ್ರಮದಲ್ಲಿ ಕಂತೆ ಕಂತೆ ಹಣ ಕೊಟ್ಟು ಜನಸಾಗರ ಕೂಡಿಸಿದ ಬಸವರಾಜ ಹುಂದ್ರಿ ಹೌದು ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಉಳ್ಳಾಗಡ್ಡಿ ಗ್ರಾಮದಲ್ಲಿ ವಿಧಾನಸಭೆ ಚುನಾವಣೆ ಹಿನ್ನಲೆ ಪ್ರಭಲ ಪಕ್ಷಗಳು ಭರ್ಜರಿ ಪ್ರಚಾರ ನಡೆಸಿದೆ.

ಆದರೆ ಇಂದು ಬಸವರಾಜ ಹುಂದ್ರಿ ಬಿಜೆಪಿ ಪರ ಮತಯಾಚಿಸಲು ಬಸನಗೌಡ ಯತ್ನಾಳ ಹಾಗೂ ಈರಣ್ಣ ಕಡಾಡಿ ಹೀಗೆ ಹಲವು ಮುಖಂಡರು ಭಾಗವಹಿಸಿ ಅದ್ದೂರಿ ಪ್ರಚಾರ ನಡೆಸಿದ್ದರು.

ಆದರೆ ಕಾರ್ಯಕ್ರಮ ಮುಗಿಯುತ್ತಿದ್ದಂತೆ ಬಿಜೆಪಿ ಜನ–ರಿಗೆ ಕಂತೆ ಕಂತೆ ನೋಟುಗಳನ್ನು ಹಂಚುವ ವಿಡಿಯೋ ಇದೀಗ ವೈರಲ್ ಪ್ರತಿ ಜೀಪಗೆ ಮೂರುಸಾವಿರ ಹಣ, ಮತದಾರರಿಗೆ ಐದುನೂರು ರೂಪಾಯಿ ಹಣ ಕೊಡುವ ವಿಡಿಯೋಂದು ಪತ್ರಿಕೆಗೆ ಲಭ್ಯವಾಗಿದೆ.

ಅಂತೂ ಇಂತೂ ಹಣ ಕೊಟ್ಟು ಜನರನ್ನ ಸೇರಿಸಿ ಬಿಜೆಪಿ ಪ್ರಚಾರ ನಡೆಸಿದೆ ಆದರೆ ಮತದಾರ–ರಿಗೆ ಹಣದ ಆಮೀಷ ಒಡ್ಡಿ ಬಿಜೆಪಿ ಗೆಲುವು ಸಾಧಿಸಲು ರಣತಂತ್ರ ನಡೆಸಿದೆ. ಆದರೆ ಮತದಾರ–ರಿಗೆ ಹಣ ಹಂಚುವ ವಿಡಿಯೋ ಆಧರಿಸಿ ಚುನಾವಣೆ ಇಲಾಖೆ ಪ್ರಕರಣ ದಾಖಲಿಸುತ್ತಾರೆಯೆ ಕಾದು ನೋಡಬೇಕಿದೆ. ಮುಕ್ತ ನಿರ್ಭಯ ಚುನಾವಣೆ ನಡೆಸಲು ಜಿಲ್ಲಾಡಳಿತ ಸಕಲ ಸಿದ್ದತೆ ಮಾಡಿಕೊಂಡಿದೆ ಆದ–'ರೆ ಯಾವೂದೆ ಪಕ್ಷದ ಪ್ರಚಾರದಲ್ಲಿ ಚುನಾವಣೆ ವೀಕ್ಷಕರಿದ್ದರೂ ಕೂಡಾ ಕ್ಯಾರೆ ಎಂದಿಲ್ಲ ಚುನಾವಣಾಧಿಕಾ–ರಿಗಳು. 500 ನೂರು ರೂಪಾಯಿಗಳಿಗೆ ಜನ ಹುಂದ್ರಿಗೆ ಜೈ ಅನ್ನುವದು ಸಹಜವಾಗಿದೆ ಆದ–'ರೆ ವಿರೋದ ಪಕ್ಷದ ಅಭ್ಯರ್ಥಿಗಳು ಚುನಾವಣೆಯಲ್ಲಿ ಯಾವ ರೀತಿ ಕ್ರಮ ಕೈಗೊಳ್ಳುತ್ತಾರೆಂದು ಕಾದು ನೊಡಬೇಕಿದೆ.

## ಕಾಂಗ್ರೆಸ್ಸಿನಿಂದ 24 ಬಂಡಾಯ ಅಭ್ಯರ್ಥಿಗಳ ಉಚ್ಚಾಟನೆ



ಬೆಂಗಳೂರು: ವಿಧಾನಸಭಾ ಚುನಾವಣೆ ಅಖಾಡ ರಂಗೇ–ರಿದ್ದು, ಟಿಕೆಟ್ ಕೈತಪ್ಪಿದ ಕಾರಣಕ್ಕೆ ಪಕ್ಷದ ವಿರುದ್ಧ ಬಂಡಾಯವೆದ್ದು ಪಕ್ಷೇತರರಾಗಿ ಕಣಕ್ಕಿಳಿದ ಮಾಜಿ ಶಾಸಕರಾದ ರಾಮಕೃಷ್ಣ ದೊಡ್ಡಮನಿ (ಶಿರಹಟ್ಟಿ), ಬಿ.ಬಿ. ರಾಮಸ್ವಾಮಿಗೌಡ (ಕುಣಿಗಲ್), ಎಚ್.ಪಿ. ಈ 24 ಮಂದಿಯಷ್ಟೇ ಅಲ್ಲದೆ, ಇನ್ಯಾರಾದರು ಪಕ್ಷದ ಅಧಿಕೃತ ಅಭ್ಯರ್ಥಿಗಳ ವಿರುದ್ಧ ಪಕ್ಷೇತರರಾಗಿ ( ಬಂಡಾಯ) ಸ್ಪರ್ಧಿಸಿದ್ದರೆ ಅವರಿಗೂ ಈ ಉಚ್ಚಾಟನೆ ಆದೇಶ ಅನ್ವಯಿಸಲಿದೆ.

ಅಲ್ಲದೆ, ಈ ಅಭ್ಯರ್ಥಿಗಳ ಜೊತೆ ಪ್ರಚಾರದಲ್ಲಿ ಭಾಗವಹಿಸಿದರೆ ಅಂಥವರ ವಿರುದ್ಧವೂ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು' ಎಂದು ಸಮಿತಿಯ ಅಧ್ಯಕ್ಷ ಕೆ. ರೆಹಮಾನ್ ಖಾನ್ ಅವರು ಆದೇಶದಲ್ಲಿ ಎಚ್ಚರಿಕೆ ನೀಡಿದ್ದಾರೆ.

ಉಚ್ಚಾಟನೆಗೊಂಡ ಇತರರು: ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಪಿ. ಲತಾ ಮಲ್ಲಿಕಾರ್ಜುನ (ಹರಪನಹಳ್ಳಿ), ಕಾಂಗ್ರೆಸ್ ನಾಯಕ ಕೃಷ್ಣೇಗೌಡ (ಅರಕಲಗೂಡು), ಕೆಪಿಸಿಸಿ ಸಂಯೋಜ–ಕ ಚಂದ್ರಾ ಸಿಂಗ್ (ಬೀದರ್ ದಕ್ಷಿಣ), ಚಿಕ್ಕಮಗಳೂರು ಡಿಸಿಸಿ ಉಪಾಧ್ಯಕ್ಷ ಗೋಪಿಕೃಷ್ಣ (ತ–ರೀಕೆರೆ), ಬೆಳಗಾವಿ ಯುವ ಕಾಂಗ್ರೆಸ್ ಮುಖಂಡ ಇರ್ಫಾನ್ ತಾಳಿಕೋಟೆ (ಖಾನಾಪುರ), ಕಿಸಾನ್ ಸೆಲ್ ಉಪಾಧ್ಯಕ್ಷ ಪದ್ಮಜಿತ್ ನಾಡಗೌಡ (ತೇರದಾಳ), ಬಸವರಾಜ್ ಮಲ್ಕಾರಿ ( ಹುಬ್ಬಳ್ಳಿ–ಧಾರವಾಡ ಪಶ್ಚಿಮ), ಉಮಾದೇವಿ (ನೆಲಮಂಗಲ), ಯೂಸುಫ್ ಅಲಿ ಜಾಮದಾರ್ (ಬೀದರ್ ದಕ್ಷಿಣ), ನಾರಾಯಣ ಬಂಗಿ (ಬೀದರ್ ದಕ್ಷಿಣ), ವಿಜಯಕುಮಾರ್ ಬರೂರು (ಬೀದರ್ ದಕ್ಷಿಣ), ಸವಿತಾ ಮಲ್ಲೇಶ್ ನಾಯಕ್ (ಮಾಯಕೊಂಡ), ಪಿ.ಎಚ್. ಚಂದ್ರಶೇಖರ್ (ಶ್ರೀರಂಗಪಟ್ಟಣ), ಪುಟ್ಟ ಆಂಜನಪ್ಪ (ಶಿಡ್ಲಘಟ್ಟ), ಶಂಭು ಕೋಲ್ಕರ್ (ರಾಯಬಾಗ್), ಬಿ.ಎಚ್. ಭೀಮಪ್ಪ (ಶಿವಮೊಗ್ಗ ಗ್ರಾಮಾಂತರ), ಎಸ್.ಪಿ. ನಾಗರಾಜಗೌಡ (ಶಿಕಾರಿಪುರ), ದೋರ್ನಲ್ ಪರಮೇಶ್ವರಪ್ಪ (ತರೀಕೆರೆ), ಶಶಿ ಚೌಧಿ (ಬೀದರ್), ಲಕ್ಷ್ಮಣ ಸೊರಳಿ (ಔರಾದ್), ಮುಜೀಬುದ್ದೀನ್ (ರಾಯಚೂರು ನಗರ).



**ತೀರ್ಥಹಳ್ಳಿಯಲ್ಲಿ ನಡೆದ ಪಕ್ಷದ ಪ್ರಚಾರ ಸಭೆಯಲ್ಲಿ ಕಾಂಗ್ರೆಸ್ ವರಿಷ್ಠ ರಾಹುಲ್ ಗಾಂಧಿ ಮತ್ತು ಚಿತ್ರನಟ ಶಿವರಾಜ್ ಕುಮಾರ್ ಪರಸ್ಪರ ಹಸ್ತಲಾಘವ ಮಾಡಿದರು. ಗೀತಾ ಶಿವರಾಜ್ ಕುಮಾರ್ ಮತ್ತು ಮಧು ಬಂಗಾರಪ್ಪ ಇದ್ದರು.**

## ಬಜರಂಗದಳ ನಿಷೇಧ: ಹರಿಪ್ರಸಾದ್

ಮಡಿಕೇರಿ: ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಬಜರಂಗದಳ ಸೇ–ರಿದಂತೆ ಭಯೋತ್ಪಾದನಾ ಚಟುವಟಿಕೆಗಳಿಗೆ ಬೆಂಬಲ ನೀಡುವ ಎಲ್ಲ ಸಂಘಟನೆಗಳನ್ನು ನಿಷೇಧಿಸಲಾಗುವುದು ಎಂದು ವಿಧಾನಪ–ರಿಷತ್ತಿನ ಪ್ರತಿ ಪಕ್ಷದ ನಾಯಕ ಬಿ.ಕೆ.ಹರಿಪ್ರಸಾದ್ ತಿಳಿಸಿದರು.

ಚಾಮರಾಜನಗರದಲ್ಲಿ ಆಮ್ಲಜನಕದ ಕೊರತೆಯಿಂದ ಜನರು ಮೃತಪಟ್ಟಾಗ ಬಾರದ ಪ್ರಧಾನಮಂತ್ರಿ ನರೇಂದ್ರ ಮೋದಿ ಈಗ ಹುಲಿ ನೋಡಲು ಬಂದರು.

ಈಗಲೂ ಅವರು ಮೃತಪಟ್ಟವರ ಕುಟುಂಬಗಳತ್ತ ಸುಳಿಯಲಿಲ್ಲ. ಎಲ್ಲಿ ಕಣ್ಣಿಗೆ ಸಿಕ್ಕರೆ ಅದಾನಿಗೆ ಮಾರಾಟ ಮಾಡುತ್ತಾರೋ ಎಂಬ ಭಯದಿಂದ ಹುಲಿಗಳೂ ಇವರ ಕಣ್ಣಿಗೆ ಬೀಳಲಿಲ್ಲ ಎಂದು ಅವರು ಮಂಗಳವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ರಾಜ್ಯ ಮತ್ತು ಕೇಂದ್ರದಲ್ಲಿರುವುದು ಡಬಲ್ ಎಂಜಿನ್ ಸರ್ಕಾರ ಅಲ್ಲ, ಡಬಲ್ ದೋಖಾ ಸರ್ಕಾರ ಎಂದು ಹರಿಹಾಯ್ದರು.

ಮೊನ್ನೆಯಷ್ಟೆ ಉಚಿತ ಕೊಡುಗೆ ಕುರಿತು ಪ್ರಧಾನಿ ಟೀಕಿಸಿದ್ದರು. ಈಗ ಅವರು ಉಚಿತ ಕೊಡುಗೆಗಳನ್ನು ಘೋಷಿಸಿದ್ದಾರೆ.

ಇಂದಿರಾ ಕ್ಯಾಂಟೀನ್ ಮುಚ್ಚಿ ಅಟಲ್ ಕ್ಯಾಂಟೀನ್ ತಂದಿದ್ದಾರೆ. ಇದು ಇವರ ರಾಜಕೀಯ ದಿವಾಳಿತನಕ್ಕೆ ಸಾಕ್ಷಿ ಎಂದರು.

## ಜಿಎಸ್‌ಟಿ ಸಂಗ್ರಹ ವಾಸ್ತವ ಮುಂದಿಡಲು ಕುಮಾರಸ್ವಾಮಿ ಒತ್ತಾಯ




ರಾಯಚೂರು: ದೇಶದಲ್ಲಿ ಜಿಎಸ್‌ಟಿ ತೆರಿಗೆ ದಾಖಲೆ ಪ್ರಮಾಣದಲ್ಲಿ ಸಂಗ್ರಹ ಆಗುತ್ತಿದೆ. ಇಂತಹ ಪರಿಸ್ಥಿತಿಯಲ್ಲೂ ಜನರು ತೆರಿಗೆ ಕಟ್ಟುತ್ತಿದ್ದಾರೆ. ಈ ಹಣದಿಂದ ಬಡವರ ಬದುಕು ಕಟ್ಟಲಾಗುತ್ತಿದೆಯೋ ಅಥ–'ವಾ ಒಂದೆರಡು ಕಂಪೆನಿಗಳನ್ನು ಉದ್ದಾರ ಮಾಡಲು ಬಳಕೆಯಾಗು ತ್ತಿದೆಯೋ ಎಂಬುದನ್ನು ಜನರ ಮುಂದಿಡಬೇಕು ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಒತ್ತಾಯಿಸಿದರು.

ಮಂಗಳವಾರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಮಂತ್ರಿ ರಾಯಚೂರು ಜಿಲ್ಲೆಯ ಸಿಂಧನೂರಿಗೆ ಬರುತ್ತಿದ್ದಾರೆ. ಕರ್ನಾಟಕದ 10 ಜಿಲ್ಲೆಯಲ್ಲಿ ಬಡತನವಿದೆ ಎಂದು ಕೇಂದ್ರದ ವರದಿಯಲ್ಲಿದೆ. ರಾಯಚೂರು ಜಿಲ್ಲೆಯ ಅಪೌಷ್ಟಿಕತೆ ಸಮಸ್ಯೆಗೆ ಬಿಜೆಪಿ ಸರ್ಕಾರ ಏನು ಪರಿಹಾರ ಕಲ್ಪಿಸಿದೆ ಎನ್ನುವುದನ್ನು ಹೇಳಬೇಕು ಎಂದರು.

ಬಿಜೆಪಿ ಮತ್ತು ಕಾಂಗ್ರೆಸ್ ಎರಡೂ ರಾಷ್ಟ್ರೀಯ ಪಕ್ಷಗಳ ಉತ್ತರ ಭಾರತದ ನಾಯಕರಿಗೆ ಕರ್ನಾಟಕದ ಮೇಲೆ ಇತ್ತೀಚೆಗೆ ಪ್ರೀತಿ ಹೆಚ್ಚಾಗಿದೆ. ಪ್ರಧಾನಮಂತ್ರಿ ಹಾಗೂ ಕೇಂದ್ರ ಗೃಹ ಸಚಿವರು ರಾಜ್ಯ ಬಿಟ್ಟು ಅಲಗಾಡುತ್ತಿಲ್ಲ. ಈ ಬಾರಿ ಕರ್ನಾಟಕದ ಜನರು ಹಣಬಲಕ್ಕಿಂತ ಜನಬಲ ಗೆಲ್ಲುತ್ತದೆ ಎಂಬುದನ್ನು ತೋರಿಸಲಿದ್ದಾರೆ ಎಂದು ಹೇಳಿದರು.

ಬಿಜೆಪಿಯವರು 70 ಸೀಟು ಪಡೆಯಲು ಬೆವರು ಹ–ರಿಸಬೇಕಾಗುತ್ತದೆ.ಈ ಸಲ ಪ್ರತಿ ಜಿಲ್ಲೆಯಲ್ಲಿ ಜೆಡಿಎಸ್ ಖಾತೆ ತೆರೆಯಲಿದೆ.

ಉತ್ತರ ಕರ್ನಾಟಕ ಭಾಗದಲ್ಲಿಯೇ ಕನಿಷ್ಠ 35 ಸ್ಥಾನಗಳನ್ನು ಪಡೆಯುತ್ತಿದ್ದೇವೆ. ದೇವೇಗೌಡರನ್ನು ಭೇಟಿ ಮಾಡಿದ ಧೂತರು ಯಾರು ಎಂಬುದು ಚುನಾವಣೆ ಬಳಿಕ ಬಹಿರಂಗವಾಗಲಿದೆ ಎಂದು ತಿಳಿಸಿದರು.

ಸಮೀಕ್ಷೆಗಳನ್ನು ಹಣ ಕೊಟ್ಟು ಮಾಡಿಸುತ್ತಾರೆ. ಈ ಮೂಲಕ ಜನರ ಭಾವನೆಗಳನ್ನು ಕದಡುವ ಯತ್ನ ಮಾಡುತ್ತಿದ್ದಾರೆ. ಬಿಜೆಪಿ ಪ್ರಣಾಳಿಕೆಯಲ್ಲಿ ಜೆಡಿಎಸ್ ಪಂಚರತ್ನ ಯೋಜನೆಗಳನ್ನೇ ಬಹುತೇಕ ನಕಲು ಮಾಡಿಕೊಂಡಿದ್ದಾರೆ ಎಂದರು.

ಜೆಡಿಎಸ್ ರಾಜ್ಯಾಧ್ಯಕ್ಷ ಸಿ.ಎಂ. ಇಬ್ರಾಹಿಂ ಮಾತನಾಡಿ, ಬಿಜೆಪಿಯವರ ಹೆಲಿಕಾಪ್ಟರ್ ಹಾರಿದ ನಂತರ ಬೇರೆ ಪಕ್ಷದವರ ಹೆಲಿಕಾಪ್ಟರ್ ಹಾರಲು ಅನುಮತಿ ನೀಡುತ್ತಿದ್ದಾರೆ. ಚುನಾವಣೆ ಆಯೋಗ ಈ ಬಗ್ಗೆ ಗಮನ ಹರಿಸಬೇಕಾಗಿತ್ತು. ಆದರೆ ಅದು ಆಗುತ್ತಿಲ್ಲ ಎಂದರು.

# ಜನರ ದಿಕ್ಕು ತಪ್ಪಿಸಲು ಬಿಜೆಪಿಯ ಬಂಡಲ್ ಪ್ರಣಾಳಿಕೆ ಬಿಡುಗಡೆ

ಗೋಕಾಕ: ಜನರ ಮತ ಪಡೆಯಲು ಬಿಜೆಪಿ ಬಂಡಲ್ ಪ್ರಣಾಳಿಕೆ ಬಿಡುಗಡೆ ಮಾಡಿದೆ. ಇದನ್ನ ಜಾರಿ ಮಾಡಲು ಅವರಿಗೆ ಇಚ್ಛಾಶಕ್ತಿಯೂ ಇಲ್ಲ, ಜಾರಿ ಮಾಡಲು ಅವರಿಗೆ ಆಗೋದು ಇಲ್ಲ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಹೇಳಿದರು. ನಗರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸದ್ಯ ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದರೂ, ಬಿಜೆಪಿ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ಈ ಪ್ರಣಾಳಿಕೆ ಈಗಲೇ ಜಾರಿ ಮಾಡಿ ಚುನಾವಣೆಗೆ ಹೋಗಬಹುದಾಗಿತ್ತು. ಆದರೆ ಬಿಜೆಪಿಯವರದು ಬರಿ ಭರವಸೆಗಳ ಬಂಡಲ್ ಪಕ್ಷ ಎಂದ ಅವರು, 4 ವರ್ಷದಲ್ಲಿ 10 ಲಕ್ಷ ಮನೆ ಕಟ್ಟಿ ಕೊಡುತ್ತವೆ ಎಂದು ಬಿಜೆಪಿಯವರು ಹೇಳಿದರು. ಇನ್ನೂವರೆಗೆ ಯಾವುದೇ ಮನೆ ಕಟ್ಟಿಲ್ಲ. ಮನೆ ಕಟ್ಟುವುದು ದೂರಿನ ಮಾತು, ನಾವು ಅಧಿಕಾರದಲ್ಲಿದ್ದಾಗ ಕಟ್ಟಿದ ಮನೆಗಳಿಗೆ ಇವರ ಸರ್ಕಾರ ಇನ್ನೂ ಬಿಲ್ ಕೊಟ್ಟಿಲ್ಲ ಎಂದು ಬಿಜೆಪಿ ವಿರುದ್ಧ ವ್ಯಂಗ್ಯ ವಾಡಿದರು.

ಕಾಂಗ್ರೆಸ್ ಐದು ಪ್ರಣಾಳಿಕೆ ಬಿಡುಗಡೆ: ಕಾಂಗ್ರೆಸ್ ಪಕ್ಷ ಈಗಾಗಲೇ ಐದು ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ. ನಮ್ಮದು ನುಡಿದಂತೆ ನಡೆದ ಪಕ್ಷ. ಈ ಪ್ರಣಾಳಿಕೆ ಜಾರಿ ಮಾಡಲು ಸುಮಾರು 50 ಸಾವಿರ ಕೋಟಿ ರೂ. ವೆಚ್ಚವಾಗಬಹುದು. ಈ ಪ್ರಣಾಳಿಕೆ ಜಾರಿಗೆ ಹಣ ಎಲ್ಲಿಂದ ತರಬೇಕು ಎಂಬುವುದು ನಮ್ಮ ಪಕ್ಷ ಈಗಾಗಲೇ ಸಿದ್ದತೆ ಮಾಡಿಕೊಂಡಿದೆ. ಬಿಜೆಪಿ ತರಹ ಬಂಡಲ್ ಪ್ರಣಾಳಿಕೆ ನಮ್ಮದಲ್ಲ. ಈಗಾಗಲೇ ನಮ್ಮ ನಾಯಕರು



ಕಾಂಗ್ರೆಸ್ ಪ್ರಣಾಳಿಕೆ ಬಿಡುಗಡೆ ಮಾಡಿರುವ ಕುರಿತು ಲಿಖಿತ ರೂಪದಲ್ಲಿ ಭರವಸೆ ನೀಡಿದ್ದಾರೆ. ನಮ್ಮ ಪಕ್ಷದಿಂದ ಜಾರಿ ಮಾಡಿದ ಪ್ರಣಾಳಿಕೆಗಳೆಲ್ಲವು 100ಕ್ಕೆ 100ರಷ್ಟು ರಾಜ್ಯದಲ್ಲಿ ಜಾರಿಗೆ ತರಲಾಗುವುದು ಎಂದು ಹೇಳಿದರು.

ಬಿಜೆಪಿಯ ಮೇಲಿಲ್ಲ ಜನರ ವಿಶ್ವಾಸ: ಬೆಂಗಳೂರಿನಲ್ಲಿ ಹತ್ತು ಲಕ್ಷ ಉದ್ಯೋಗ ಸೃಷ್ಟಿ, ಸರ್ಕಾರಿ ಶಾಲೆಗಳಿಗೆ ಉನ್ನತಿಮಟ್ಟದ ಶಿಕ್ಷಣ ನೀಡಲಾಗುವುದು ಎಂದು ಹೇಳಿದ್ದ ಬಿಜೆಪಿಯವರು ಬೆಂಗಳೂರಿನಲ್ಲಿ ಯಾವುದೇ ಉದ್ಯೋಗ ಸೃಷ್ಟಿಯಾಗಿಲ್ಲ. ಅಲ್ಲದೇ ಸರ್ಕಾರಿ ಶಾಲೆಗಳಿಗೆ ಉನ್ನತ್ತಮಟ್ಟದ ಶಿಕ್ಷ ಎಂದು ಹೇಳಿ ಸುಮಾರು ಐದು ಸಾವಿರ ಶಾಲೆಗಳನ್ನು ಮುಚ್ಚಿದ್ದಾರೆ. ನೀರಾವರಿಗೆ ಯೋಜನೆ ಬಗ್ಗೆ ಈಗ ಮಾತನಾಡುವ ಬಿಜೆಪಿಗರು ನಾಲ್ಕು ವರ್ಷ ಏನು ಮಾಡಿದರು. ಬಿಜೆಪಿಯವರು ಹಿಂದೆ 600 ಭರವಸೆಗಳನ್ನು ಕೊಟ್ಟಿದ್ದರು. ಅದರಲ್ಲಿ ಪೂರೈಸಿದ್ದು ಬರೀ 50ರಷ್ಟು ಮಾತ್ರ. ಹೀಗಾಗಿ ಬಿಜೆಪಿ ಮೇಲೆ ಜನರಿಗೆ ವಿಶ್ವಾಸವಿಲ್ಲ. ಈ ಭಾರಿ ರಾಜ್ಯದ ಜನ ಕಾಂಗ್ರೆಸ್ನತ್ತ ಮುಖ ಮಾಡಿದ್ದಾರೆ ಎಂದರು.

ಭರವಸೆ ಈಡೇರಿಸದ ಬಿಜೆಪಿ: ವಿದೇಶಿ ಖಾತೆಗಳಲ್ಲಿ ಜಮೆಯಾಗಿರುವ ಕಪ್ಪುಹಣವನ್ನು ವಾಪಸ್ ತಂದು ಸಾರ್ವಜನಿಕರ ಖಾತೆಗಳಿಗೆ 15 ಲಕ್ಷ ಹಣ ಜಮೆ ಮಾಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಭರವಸೆ ನೀಡಿದ್ದರು. ಆದರೆ ಅಧಿಕಾರಕ್ಕೆ ಬಂದ ಮೇಲೆ ಈ ಭರವಸೆಯನ್ನೇ ಅವರು ಮರೆತಿದ್ದಾರೆ. ಅಲ್ಲದೇ 2014ರಲ್ಲಿ ಬಿಜೆಪಿ ಸಾಕಷ್ಟು ಭರವಸೆಗಳನ್ನು ನೀಡಿತ್ತು . ಆದರೆ ಅವು ಜಾರಿಯಾಗದೇ ಕೇವಲ ಹುಸಿ ಭರವಸೆಗಳಾಗಿಯೇ ಉಳಿದಿವೆ. ಇದೇ ರೀತಿ ಈಗಲೂ ಬಿಜೆಪಿ ಹಲವು ಪ್ರಣಾಳಿಕೆ ಬಿಡುಗಡೆ ಮಾಡುತ್ತಿದ್ದು. ಇವೇಲ್ಲವು ಜನರ ದಿಕ್ಕು ತಪ್ಪಿಸಲು ಬಿಜೆಪಿ ಮಾಡುವ ನಾಟಕೀಯ ಪೊಳ್ಳು ಭರವಸೆಗಳಾಗಿವೆ ಎಂದು ಬಿಜೆಪಿ ವಿರುದ್ಧ ಚಾಟಿ ಬೀಸಿದರು.

# ಶ್ರೀಮಂತ ಪಾಟೀಲ ಮನವಿಗೆ ಸ್ಪಂದಿಸಿ

## ಕೊಯ್ನಾದಿಂದ ಕೃಷ್ಣಾ ನದಿಗೆ 3 ಟಿಎಮ್ ನೀರು ಬಿಡುಗಡೆ



ಕಾಗವಾಡ: ಶಾಸಕ ಶ್ರೀಮಂತ ಪಾಟೀಲ ಅವರ ಮನವಿಗೆ ಸ್ಪಂದಿಸಿದ ಮಹಾರಾಷ್ಟ್ರ ಸರ್ಕಾರ ಕೊಯ್ನಾ ಆಣೆಕಟ್ಟೆಯಿಂದ ಕೃಷ್ಣಾ ನದಿಗೆ ಹರಿದು 3 ಟಿ.ಎಂ.ಸಿ ನೀರು ಬಿಡುಗಡೆ ಮಾಡಿದ್ದು ಅದು ರಾಜಾಪುರ ಆಣೆಕಟ್ಟೆವರೆಗೆ ತಲುಪಿದ್ದು, ಇಂದು ಕಾಗವಾಡ ಶಾಸಕರು ಹಾಗೂ ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲ ಹಾಗೂ ಅವರ ಕಾರ್ಯಕರ್ತರು ರಾಜಾಪುರ ಆಣೆಕಟ್ಟೆಗೆ ಭೇಟಿ ನೀಡಿ ನೀರಿಗೆ ಪೂಜೆ ಸಲ್ಲಿಸಿ ಸಂತಸ ಹಂಚಿಕೊಂಡರು. ಬೇಸಿಗೆ ಅವಧಿಯಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಕಾಗವಾಡ ಬಿಜೆಪಿ ಅಭ್ಯರ್ಥಿ ಶ್ರೀಮಂತ ಪಾಟೀಲರು ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ದೇವೇಂದ್ರ ಫಡ್ನವೀಸ್ ಅವರನ್ನು ಭೇಟಿಮಾಡಿ ನೀರಿನ ಸಮಸ್ಯೆಯ ಬಗ್ಗೆ ಮಾಹಿತಿ ನೀಡಿದ್ದರು. ಇದನ್ನು ಗಮನಿಸಿ ಮಹಾರಾಷ್ಟ್ರ ಸರಕಾರ ರಾಜಾಪುರ ಬ್ಯಾರೇಜ್ ಮೂಲಕ ಕೃಷ್ಣಾ ನದಿಗೆ 3 ಟಿ.ಎಮ್.ಸಿ ನೀರು ಹರಿಸಿದೆ.

ಶ್ರೀಮಂತ ಪಾಟೀಲರು ಮನವಿ ಮಾಡಿದ ಕೆಲವೇ ಕೆಲವು ದಿನಗಳಲ್ಲಿಯೇ ಕೃಷ್ಣಾ ನದಿಗೆ ನೀರು ಬಿಡುಗಡೆ ಮಾಡಲು ಪ್ರಮುಖವಾಗಿ ಮಹಾರಾಷ್ಟ್ರದಲ್ಲಿ ಬಿಜೆಪಿ ನೇತೃತ್ವದ ಸಮ್ಮಿಶ್ರ ಸರಕಾರ ಅಸ್ತಿತ್ವದಲ್ಲಿರುವುದು ಹಾಗೂ ಈ ಸರಕಾರದಲ್ಲಿ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ನೀರಾವರಿ ಸಚಿವರಾಗಿ

ಕಾರ್ಯಹಿಸುತ್ತಿರುವುದು ಮತ್ತು ಇವರೊಂದಿಗೆ ಶ್ರೀಮಂತ ಪಾಟೀಲರ ಉತ್ತಮ ಭಾಂದವ್ಯ ಹೊಂದಿರುವುದೇ ಮುಖ್ಯ ಕಾರಣವಾಗಿದೆ.. ನೀರು ಬಿಡುವ ವಿಷಯ ತಿಳಿದ ಶ್ರೀಮಂತ ಪಾಟೀಲ ರಾಜಾಪುರದಿಂದ ಕರ್ನಾಟಕ ವ್ಯಾಪ್ತಿಯ ನದಿಗೆ ನೀರು ಬರುವ ಸ್ಥಳಕ್ಕೆ ಭೇಟಿನೀಡಿ ನೆರೆದಿದ್ದ ರೈತರೊಂದಿಗೆ ಹಾಗೂ ಕಾರ್ಯಕರ್ತರೊಂದಿಗೆ ಸಂತೋಷ ಹಂಚಿಕೊಂಡರು.

ಈ ವೇಳೆ ಶ್ರೀಮಂತ ಪಾಟೀಲ ಮಾತನಾಡಿ, ಕೃಷ್ಣಾ ನದಿಯಲ್ಲಿ ಬೇಸಿಗೆ ಅವಧಿಯಲ್ಲಿ ನೀರಿನ ಕೊರತೆ, ಉಂಟಾಗುತ್ತಿರುವುದನ್ನು ಗಮನಿಸಿದ ನಾನು ಮಹಾರಾಷ್ಟ್ರ ಸರಕಾರದೊಂದಿಗೆ ಪತ್ರ ವ್ಯವಹಾರ ಮಾಡಿ ನೀರು ಬಿಡಲು ಆಗ್ರಹಿಸಿದ್ದ. ಜೊತೆಗೆ ಮಹಾರಾಷ್ಟ್ರ ಸರಕಾರದ ಉಪಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಇವರನ್ನು ವಿಜಯಪುರದ ಇಂಡಿಯಲ್ಲಿ ಭೇಟಿಮಾಡಿ ಅವರೊಂದಿಗೆ ಚರ್ಚಿಸಿ ನೀರು ಬಿಡಲು ಆಗ್ರಹಿಸಿದ ಪರಿಣಾಮ ಅವರು ತಕ್ಷಣ ನೀರು ಬಿಡಲು ಕ್ರಮ ಕೈಗೊಂಡಿದ್ದು, ಅವರಿಗೆ ಕರ್ನಾಟಕದ ಗಡಿಭಾಗದ ಕಾಗವಾಡ, ಚಿಕ್ಕೋಡಿ, ಅಥಣಿ, ರಾಯಬಾಗ ತಾಲೂಕುಗಳ ಜನರ ಹಾಗೂ ರೈತರ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದರು, ಈ ವೇಳೆ ಅರುಣ ಗಣೇಶವಾಡಿ, ಶಿವಾನಂದ ಬುರ್ಲಿ, ಅಮಿತ್ ಪಾಟೀಲ್, ಸುಭಾಷ ಅಥಣಿ, ರಾಮಗೌಡಾ ಪಾಟೀಲ್, ಸುರೇಶ ಪಾಟೀಲ್ ಹಾಗೂ ಜುಗೂಳ, ಮಂಗಾವತಿ, ಉಗಾರ ಬುದ್ರುಕ್, ಕುಸನಾಳ, ಮೊಳವಾಡ ಗ್ರಾಮಗಳ ಕಾರ್ಯಕರ್ತರು ನದಿಯಲ್ಲಿ ಹರಿದು ಹೋಗುವ ನೀರನ್ನು ಗಮನಿಸಿ ಸಂತಸದಿಂದ ಶಾಸಕರ ಹೆಸರಿನಲ್ಲಿ ಜೈಕಾರ ಹಾಕಿದರು.

# ಬೆಳಗಾವಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷರಾಗಿ ಎಲ್. ಎಸ್. ಶಾಸ್ತ್ರಿ ನೇಮಕ



ಬೆಳಗಾವಿ: ಬೆಳಗಾವಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಮುಂದಿನ ನಾಲ್ಕು ವರ್ಷಗಳ ಅವಧಿಗೆ ಹಿರಿಯ ಸಾಹಿತಿ ಎಲ್. ಎಸ್. ಶಾಸ್ತ್ರಿ ಅವರನ್ನು ನೇಮಕ ಮಾಡಲಾಗಿದೆ ಎಂದು ಚುಸಾಪ ರಾಜ್ಯ ಸಂಚಾಲಕರಾದ ಡಾ. ಎಂ. ಜಿ. ಆರ್. ಅರಸ್ ಅವರಿಂದಿಲ್ಲಿ ಘೋಷಿಸಿದರು. ಕಳೆದ ನಾಲ್ಕು ವರ್ಷ ಚುಸಾಪ ಅಧ್ಯಕ್ಷರಾಗಿದ್ದ ಅಶೋಕ ಮಳಗಲಿ ಅವರ ಸ್ಥಾನದಲ್ಲಿ ಶಾಸ್ತ್ರಿಯವರು ನೇಮಕವಾಗಿದ್ದು , ಶಾಸ್ತ್ರಿಯವರು 1987 ರಲ್ಲಿ ಜಿಲ್ಲಾ ಘಟಕ ಸ್ಥಾಪಿಸಿ 21 ವರ್ಷಗಳ ಕಾಲ ಮುನ್ನಡೆಸಿ ಎರಡು ರಾಜ್ಯ ಸಮ್ಮೇಳನ, ಎರಡು ಜಿಲ್ಲಾ ಸಮ್ಮೇಳನಗಳ ಸಹಿತ ನೂರಾರು ಕಾರ್ಯಕ್ರಮ ನಡೆಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸ್ತ್ರಿಯವರು ಪ್ರಸ್ತುತ ವರ್ಷ ನವೆಂಬರದಲ್ಲಿ ಚುಸಾಪ ಬೆಳ್ಳಿ ಹಬ್ಬ ಆಚರಿಸಲಿರುವದಾಗಿ ಪ್ರಕಟಿಸಿದರು.

# ಈ ಬಾರಿಯ ಚುನಾವಣೆ ದೇಶದಲ್ಲಿಯ ಮಹತ್ವಪೂರ್ಣ ಚುನಾವಣೆಯಾಗಲಿದೆ



ಬೆಳಗಾವಿ: ನಗರದ ಬೆಳಗಾವಿ ಜಿಲ್ಲಾ ಗ್ರಾಮೀಣ ಕಾಂಗ್ರೆಸ್ ಸಮಿತಿಯ ಕಚೇರಿಯಲ್ಲಿ ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಪೃಥ್ವಿರಾಜ್ ಚವ್ಹಾಣ್ ಸುದ್ದಿಗೋಷ್ಠಿಯಲ್ಲಿ ನಡೆಸಿದರು. ನಾನು ಮೊದಲ ಬಾರಿ ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡುತ್ತಿದ್ದೇನೆ ಎಂದು ಹೇಳಿದರು. ಆರ್ಥಿಕ ಸುದಾರಣೆಯಲ್ಲಿ ಕರ್ನಾಟಕ ಮಹತ್ವ ಪೂರ್ಣ ರಾಜ್ಯ ವಾಗಿದೆ.ಭ್ರಷ್ಟಾಚಾರದಲ್ಲಿ ತೊಡಗಿದ ಡಬಲ್ ಇಂಜಿನ್ ಸರ್ಕಾರ ವನ್ನು ಇಂದು 40%ನಿಂದ ಗುರುತಿಸಲಾಗುತ್ತದೆ ಎಂದು ಹೇಳಿದರು. ರಾಹುಲ್ ಗಾಂಧಿಯವರನ್ನು ಸಂಸದೀಯ ಸ್ಥಾನನದಿಂದ ಅನರ್ಹ ಗೊಳಿಸಿ ಬಿಜೆಪಿ ಅದಾನಿ ಅಂತಹ ಶ್ರೀಮಂತರ ಪರವಾಗಿದೆ ಅಲ್ಲದೆ ಸರ್ಕಾರಿ ಉದ್ಯೋಗಗಳನ್ನು ಖಾಸಗೀಕರಣ ಗೊಳಿಸುವುದರ ಮೂಲಕ ಸರ್ಕಾರಿ ನೌಕರಿಯನ್ನು ಕಸಿದುಕೊಂಡಿದೆ ಎಂದರು.ನೋಟ್ ಬ್ಯಾನ್,ಜಿಎಸ್ ಟಿ,ಹಾಗೂ ಲಾಕ್ ಡೌನ್ ಹೇರುವುದರಿಂದ ಬಡವರ ಹೊರೆ ಹಾಕಿದ್ದಾರೆ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.ಕಾಂಗ್ರೆಸ್ ಈ ಬಾರಿ 130 ಅದಿಕ್ ಕ್ಷೇತ್ರ ಗೆಲ್ಲುವ ಮೂಲಕ ಬಾರಿ ಬಹುಮತದಿಂದ ಅಧಿಕಾರ ಚುಕ್ಕಾಣಿ ಹಿಡಿಯಲಿದೆ ಎಂದರು.ಸಿದ್ದರಾಮಯ್ಯ ಅವದಿಯಲ್ಲಿ ನೀಡಲಾಗಿದ್ದ ಎಲ್ಲ ಯೋಜನೆಗಳನ್ನು ಮರಳಿ ನೀಡಲಾಗುವುದು ಎಂದು ಭರವಸೆ ನೀಡಿದರು.ನಂತರ ಗಡಿವಿವಾದದ ಕುರಿತು ಮಾತನಾಡಿ ಬೆಳಗಾವಿ ಗಡಿ ವಿವಾದ ಸುಪ್ರೀಂ ಕೋರ್ಟ್ ನಲ್ಲಿದೆ ಯಾವುದೇ ತೀಪು ಬಂದರು ಸಹ ಜನರು ಸಹಮತದಿಂದ ಸ್ವೀಕರಿಸಬೇಕು ಎಂದು ಹೇಳಿದರು.ಈ ಬಾರಿ ಕಾಂಗ್ರೆಸ್ ಮತದಾನ ನೀಡುವ ಮೂಲಕ ಬೆಳಗಾವಿಯಲ್ಲಿ ಕಾಂಗ್ರೆಸ್ ಅಧಿಕಾರ ಹಿಡಿಯುವಲ್ಲಿ ಸಹಾಯ ಮಾಡಬೇಕು ಎಂದು ಮನವಿ ಮಾಡಿಕೊಂಡರು.ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ವಿನಯ ನಾವಲ್ಲಗಟ್ಟಿ, ಸುನಿಲ್ ಹನುಮಣ್ಣವರ್ ಸಲೀಮ್ ಕತೀಬ್ ಉಪಸ್ಥಿತರಿದ್ದರು.

# ಪಿಯುಸಿ ವಿದ್ಯಾರ್ಥಿಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: ಚಿಕ್ಕೋಡಿ ತಾಲೂಕಿನ ಯಕ್ಸಂಬಾ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು 2023–24 ನೇ ಶೈಕ್ಷಣಿಕ ಸಾಲಿನ ಪಿಯುಸಿ ಪ್ರಥಮ ಹಾಗೂ ದ್ವಿತಿಯ ವರ್ಷಕ್ಕಾಗಿ ವಿದ್ಯಾರ್ಥಿ/ನಿಯರಿಗೆ ಸರಕಾರಿ ಸೌಲಭ್ಯವನ್ನು ಪಡೆದುಕೊಳ್ಳಲು ತಿಳಿಸಲಾಗಿದೆ. ಕಾಲೇಜಿನಲ್ಲಿರುವ ವಿಶೇಷ ಸೌಲಭ್ಯ ಎಸ್.ಸಿ/ಎಸ್.ಟಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿ/ನಿಯರಿಗೆ ವಿಶೇಷ ಸೌಲಭ್ಯ ಮತ್ತು ಬಡ ವಿದ್ಯಾರ್ಥಿಗಳಿದ್ದಲ್ಲಿ ಸರಕಾರಿ ವಸತಿ ನಿಲಯ ವ್ಯವಸ್ಥೆ ಮಾಡಿಕೊಡಲಾಗುವುದು.

ಸರಕಾರಿ ನಿಯಮಾನುಸಾರ ಕಡಿಮೆ ಪ್ರವೇಶ ಫೀ, ವಿದ್ಯಾರ್ಥಿನಿಯರಗಾಗಿ ಬೋಧನಾ ಶುಲ್ಕದಿಂದ ವಿನಾಯತಿ, ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ, ಬೇರೆ ಊರೂಗಳಿಂದ ಬರುವ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯ ಹಾಗೂ ವಿದಾರ್ಥಿನಿಯರಿಗೆ ಮತ್ತು ವಿಜ್ಞಾನ, ವಾಣಿಜ್ಯ ಮತ್ತು ಕಲಾ ವಿಭಾಗದ ಕಠಿಣ ವಿಷಯಗಳ ಉಚಿತ ಕೋಚಿಂಗ್ ಕ್ಲಾಸಿಸ್ ಮತ್ತು ಇನ್ನಿತರ ಸೌಲಭ್ಯಗಳನ್ನು ನೀಡಲಾಗುವುದು. ವಿದ್ಯಾರ್ಥಿಗಳು ಮೂಲ ಶೈಕ್ಷಣಿಕ ದಾಖಲೆಗಳೊಂದಿಗೆ ಪ್ರಾಚಾರ್ಯರು, ಸರಕಾರಿ ಪದವಿ ಪೂರ್ವ ಕಾಲೇಜು ಯಕ್ಸಂಬಾ ತಾ: ಚಿಕ್ಕೋಡಿ (ಮೊ.ಸಂ 9611085144) ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಾಚಾರ್ಯರಾದ ಟಿ.ಬಿ. ವರಾಳೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬೆಳಗಾವಿ: ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ತಾಲೂಕಿನ ಮಾವಿನಕಟ್ಟಿ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಿ ಮಂದಿರದ ಕಳಸಾರೋಹಣ ಹಾಗೂ ನೂತನ ಕಟ್ಟಡದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ದೇವಿಯ ದರ್ಶನದ ಪಡೆದ ನಂತರದಲ್ಲಿ ಅವರು ಎಲ್ಲ ಭಕ್ತರೊಂದಿಗೆ ಪ್ರಸಾದ ಸ್ವೀಕರಿಸಿದರು. ಕಾರ್ಯಕ್ರಮದಲ್ಲಿ ದೇವಸ್ಥಾನ ಕಮಿಟಿ ವತಿಯಿಂದ ಚನ್ನರಾಜ ಹಟ್ಟಿಹೊಳಿ ಅವರನ್ನು ಸತ್ಕರಿಸಲಾಯಿತು. ಗ್ರಾಮದ ಹಿರಿಯರು, ದೇವಸ್ಥಾನದ ಟ್ರಸ್ಟ್ ಕಮಿಟಿಯವರು, ನಾಗೇಶ ದೇಸಾಯಿ, ಶಂಕರಗೌಡ ಪಾಟೀಲ, ಮಹೇಶ ಸುಗೆಣ್ಣವರ ಹಾಗೂ ಗ್ರಾಮದ ಭಕ್ತಾದಿಗಳು ಉಪಸ್ಥಿತರಿದ್ದರು.

# ಮನೆ, ಮನೆ ತೆರಳಿ ಪ್ರಚಾರ ನಡೆಸಿದ ರಾಜಕುಮಾರ ಟೋಪಣ್ಣವರ



ಬೆಳಗಾವಿ: ಉತ್ತರ ಮತಕ್ಷೇತ್ರದ ಆಮ್ ಆದ್ಮಿ ಪಕ್ಷದ ಅಭ್ಯರ್ಥಿ ರಾಜಕುಮಾರ ಟೋಪಣ್ಣವರ ಬೆಳಗ್ಗೆಯಿಂದಲೇ ಮಹಾಂತೇಶ ನಗರದಿಂದ ತಮ್ಮ ಅಪಾರ ಬೆಂಬಲಿಗರೊಂದಿಗೆ ಮಂಗಳವಾರ ಮನೆ ಮನೆಗೆ ತೆರಳಿ ಮತಯಾಚನೆ ಮಾಡಿದರು.

ಆಮ್ ಆದ್ಮಿ ಜನರ ಸಮಸ್ಯೆಗೆ ಸ್ಪಂದಿಸುವ ಪಕ್ಷ. ಅಭಿವೃದ್ಧಿಯಿಂದ ವಂಚಿತವಾಗಿರುವ ಉತ್ತರ ಮತಕ್ಷೇತ್ರವನ್ನು ಐದೇ ವರ್ಷದಲ್ಲಿ ಅಭಿವೃದ್ಧಿ ಮಾಡಿ ತೋರಿಸುವೆ ಒಂದು ಬಾರಿ ಆಮ್ ಆದ್ಮಿ ಪಕ್ಷಕ್ಕೆ ಅವಕಾಶ ಕೊಟ್ಟು ನನಗೆ ಮತದಾರರು ಆಶೀರ್ವಾದ ಮಾಡಬೇಕೆಂದು ಮನವಿ ಮಾಡಿಕೊಂಡರು.

ನಗರದಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿದೆ. ಹಲವಾರು ಬಾರಿ ಕಾಂಗ್ರೆಸ್ ಹಾಗೂ ಬಿಜೆಪಿಗೆ ಬೆಂಬಲಿಸಿದ್ದೇವೆ. ಆದರೆ ಆಯ್ಕೆಯಾದ ಶಾಸಕರಾರೂ ನಮ್ಮ ಸಮಸ್ಯೆ ಈಡೇರಿಸಿಲ್ಲ. ಆದ್ದರಿಂದ ಈ ಬಾರಿ ಆಮ್ ಆದ್ಮಿ ಪಕ್ಷಕ್ಕೆ ಬೆಂಬಲಿಸುವುದಾಗಿ ಕ್ಷೇತ್ರದ ಜನರು ಟೋಪಣ್ಣವರಗೆ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಶಿವಾನಂದ ಕಾರಿ, ರವೀಂದ್ರ ಬೆಲ್ಲದ, ಶಂಕರ ಹೆಗಡೆ, ಎಂ.ಕೆ.ಸೈಯದ್ ಸೇರಿದಂತೆ ಹಲವಾರು ಉಪಸ್ಥಿತರಿದ್ದರು.

# ವಾಕರಸಾ ಸಂಸ್ಥೆಯ ಮಾಸಿಕ ಬಸ್ ಪಾಸುಗಳಿಗೆ ಹೆಚ್ಚುವರಿ ಪ್ರಯಾಣ ಅವಧಿ

ಬೆಳಗಾವಿ: ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬೆಳಗಾವಿ ವಿಭಾಗ ವಿಭಾಗದಲ್ಲಿ ಮಾಸಿಕ ಬಸ್ ಪಾಸುಗಳ ಅವಧಿಯನ್ನು ಒಂದು ತಿಂಗಳಿಗೆ 02ದಿನ, ಎರಡು ತಿಂಗಳಿಗೆ 05 ದಿನ, ಮೂರು ತಿಂಗಳಿಗೆ 10 ದಿನಗಳನ್ನು ಹೆಚ್ಚುವರಿಯಾಗಿ ಪ್ರಯಾಣ ಅವಧಿಯನ್ನು ನೀಡಲಾಗಿದೆ.

ಹೆಚ್ಚುವರಿಯಾದ ಅವಧಿ ದಿನಗಳ ವಿವರ :

ಮಾಸಿಕ ಬಸ್ ಪಾಸ್ ರಜತ–1, 30 ದಿನಗಳು : ಮಾಸಿಕ ಬಸ್ ಪಾಸ್ 30 ದಿನಗಳ ಬದಲಾಗಿ 32 ದಿನಗಳು ಪ್ರಯಾಣಿಸಲು ಅವಕಾಶದ್ವಿ ಮಾಸಿಕ ಬಸ್ ಪಾಸ ರಜತ–2

ದ್ವಿ ಮಾಸಿಕ ಬಸ್ ಪಾಸ್ ರಜತ–2, 60 ದಿನಗಳು : ದ್ವಿ ಮಾಸಿಕ ಬಸ್ ಪಾಸ್ 60 ದಿನಗಳ ಬದಲಾಗಿ ಬದಲಾಗಿ 65 ದಿನಗಳು ಪ್ರಯಾಣಿಸುವ ಅವಕಾಶ

ತ್ರೈಮಾಸಿಕ ಬಸ್ ಪಾಸ ರಜತ–3, 90 ದಿನಗಳು : ತ್ರೈಮಾಸಿಕ ಬಸ್ ಪಾಸ್ 90 ದಿನಗಳ ಬದಲಾಗಿ 100 ದಿನಗಳು ಪ್ರಯಾಣಿಸುವ ಅವಕಾಶವಿದೆ ಎಂದು ವಾಕರಸಾ ಸಂಸ್ಥೆಯ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಥಣಿ ಮತಕ್ಷೇತ್ರದಲ್ಲಿ ಬಿಜೆಪಿ ಗೆಲುವು ಖಚಿತ



ಅಥಣಿ : ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶಾಸಕ ಮಹೇಶ ಕುಮಠ್ಳಿಯವರ ಪರ ಅವರ ನಾದನಿ (ತಮ್ಮನ ಪತ್ನಿ) ಡಾ, ಜ್ಯೋತಿ ಕುಮಠಳ್ಳಿ ಮತಕ್ಷೇತ್ರದ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಸೋಮವಾರ ಪಾದಯಾತ್ರೆ ಮೂಲಕ ಮತಯಾಚಿಸಿದರು,

ಈ ವೇಳೆ ಡಾ, ಜ್ಯೋತಿ ಕುಮಠಳ್ಳಿ ಮಾತನಾಡಿ ಅಥಣಿ ಕ್ಷೇತ್ರದಲ್ಲಿ ಬಿಜೆಪಿ ಪರ ಉತ್ತಮ ವಾತಾವರಣವಿದೆ. ಸುಮಾರು 25 ವರ್ಷಗಳಿಂದ ನಮ್ಮ ಕುಟುಂಬ ಸಾಮಾಜಿಕ, ವೈದ್ಯಕೀಯ ಕ್ಷೇತ್ರದಲ್ಲಿ ಜನಪರವಾಗಿ ಸೇವೆ ಮಾಡುತ್ತಾ ಬಂದಿದೆ. ಬಾವ ಮಹೇಶ ಕುಮಠಳ್ಳಿಯವರು ಕ್ಷೇತ್ರದ ಅಭಿವೃದ್ಧಿಗೆ ಅನೇಕ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದಾರೆ. ರಾಜ್ಯ ಮತ್ತು ಕೇಂದ್ರದಲ್ಲಿ ಬಿಜೆಪಿ ಸರ್ಕಾರದ ಉತ್ತಮ ಆಡಳಿತ ಗೆಲುವಿನತ್ತ ಕರೆದುಕೊಂಡು ಹೋಗುವದು ಎಂಬ ಭರವಸೆ ಇದೆ ಎಂದರು.

ಈ ವೇಳೆ ಬಂಗಾರೆವ್ವ ಮುಡಶಿ, ಚಿನ್ನವ್ವ ಹೊನವಾಡ, ಪಾರ್ವತಿ ಶಿವಪೂಜೆ, ಗೋದಾವರಿ ಕೆಂಚಣ್ಣವರ, ರುಕ್ಮವ್ವ ಕಾಂಬಳೆ, ಲಕ್ಷ್ಮಣ ಮಾಳಿ, ಸುಕದೇವ ಹಾಲಳ್ಳಿ, ಕುಮಾರ ಪಾಟೀಲ, ಪ್ರಶಾಂತ ಮಾಳಿ, ಸದಾಶಿವ ಕೆಂಚಣ್ಣವರ, ಹಣಮಂತ ಕೆಂಚಣ್ಣವರ, ವಿಠ್ಠಲ ಸನದಿ, ಭೀಮು ಕಟ್ಟಿ, ಸೋಮನಿಂಗ ಬಿದರೊಳ್ಳಿ ಸೇರಿದಂತೆ ಹಲವರು ಇದ್ದರು.

# ಕ್ಷೇತ್ರದ ಮತ್ತಷ್ಟು ಅಭಿವೃದ್ಧಿಗೆ ಮತ್ತೊಮ್ಮೆ ಅವಕಾಶ ನೀಡಿ



ಬೆಳಗಾವಿ: ಕ್ಷೇತ್ರದ ಸಮುದಾಯದೊಂದಿಗೆ ಸದಾ ಇರುತ್ತೇನೆ. ಕಳೆದ ಚುನಾವಣೆಯಲ್ಲಿ ಬೆಂಬಲಿಸಿ ಹೆಚ್ಚಿನ ಮತದೊಂದಿಗೆ ಗೆಲ್ಲಿಸಿದ್ದೀರಿ. ಅದೇ ರೀತಿ ಈ ಬಾರಿಯೂ ಹೆಚ್ಚಿನ ಮತದೊಂದಿಗೆ ಬೆಂಬಲ ನೀಡಿ ಎಂದು ಸ್ಥಳೀಯ ಶಾಸಕರು ಹಾಗೂ ಮುಜರಾಯಿ ಹಜ್ ಮತ್ತು ವಕ್ಫ್ ಸಚಿವರಾದ ಶ್ರೀಮತಿ ಶಶಿಕಲಾ ಅ ಜೊಲ್ಲೆ ಹೇಳಿದರು

ಇಂದು ಬಿರುಬಿಸಿಲಿನ ನಡುವೆ ನಿಪ್ಪಾಣಿ ವಿಧಾನಸಭಾ ಕ್ಷೇತ್ರದ ತವಂದಿ, ಯರನಾಳ, ಶಿರಗುಪ್ಪಿ ಕುರ್ಲಿ, ಹಾಗೂ ಭಾಟನಾಗನೂರ ಗ್ರಾಮಗಳಲ್ಲಿ ಬಿರುಸಿನ ಮತಯಾಚನೆ ಮಾಡಿದರು. ತಮ್ಮ ಮತ ಪತ್ರಿಕೆ ನಮೂನೆಯನ್ನು ನೀಡಿ ಮಾತನಾಡಿದ ಅವರು, ಕಳೆದ 10 ವರ್ಷದಲ್ಲಿ ತವಂದಿ ಗ್ರಾಮದಲ್ಲಿ 6 ಕೋಟಿ ಅಧಿಕ ಕಾಮಗಾರಿ ಯರನಾಳ ಗ್ರಾಮದಲ್ಲಿ 13 ಕೋಟಿ 50 ಲಕ್ಷ ಅಧಿಕ ಶಿರಗುಪ್ಪಿಗ್ರಾಮದಲ್ಲಿ 18 ಕೋಟಿ ಅಧಿಕ ಕೂರ್ಲಿ ಗ್ರಾಮದಲ್ಲಿ 26 ಕೋಟಿ ಅಧಿಕ ಭಾಟನಾಗನೂರ ಗ್ರಾಮದಲ್ಲಿ 8 ಕೋಟಿ ಅಧಿಕ ಅಭಿವೃದ್ದಿಯ ಕಾಮಗಾರಿಗಳನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದೇನೆ. ಗ್ರಾಮದಲ್ಲಿ ರಸ್ತೆ, ಚರಂಡಿ, ಮನೆ ಮನೆಗೆ ಕುಡಿಯುವ ನೀರಿನ ವ್ಯವಸ್ಥೆ, ಅಂಗನವಾಡಿ, ದೇವಸ್ಥಾನ ಜೀರ್ಣೋದ್ಧಾರ ಹೀಗೆ ಹಲವಾರು ಕಾಮಗಾರಿ ಕೈಗೊಂಡಿದ್ದೇನೆ. ಕ್ಷೇತ್ರದಲ್ಲಿಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಸದಾವಕಾಶ ನೀಡಿದ್ದೀರಿ. ಕ್ಷೇತ್ರದ ಮತ್ತಷ್ಟು ಅಭಿವೃದ್ಧಿಗೆ ಮತ್ತೊಮ್ಮೆ ಅವಕಾಶ ನೀಡಿ ಎಂದು ಮನವಿ ಮಾಡಿದರು.ಕ್ಷೇತ್ರದ ಬಿಜೆಪಿ ಪ್ರಮುಖರು ಮತ್ತು ನೂರಾರು ಮಹಿಳೆಯರು ಚುನಾವಣಾ ಪ್ರಚಾರದಲ್ಲಿ ಬಿಜೆಪಿ ಅಭ್ಯರ್ಥಿ ಶಶಿಕಲಾ ಅ ಜೊಲ್ಲೆ ಅವರಿಗೆ ಸಾಥ್ ನೀಡಿದರು.

# ಬೆಳಗಾವಿ ಉತ್ತರ ವಿಧಾನ ಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಸೀಫ್ ರಾಜು ಸೇಠ್ ಪ್ರಚಾರ ಸಭೆ



ಬೆಳಗಾವಿ: ಉತ್ತರ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆಸೀಫ್ ರಾಜು ಸೇಠ್ ಸದಾಶಿವನಗರದಲ್ಲಿ ಮುಖಂಡರೊಂದಿಗೆ ಪ್ರಚಾರ ಸಭೆ ನಡೆಸಿದರು.

ಚುನಾವಣೆ ಪ್ರಚಾರ ಕಾರ್ಯ ಭರದಿಂದ ಸಾಗುತ್ತಿದ್ದು ನಗರದಲ್ಲಿ ಇಂದು ಕಾಂಗ್ರೆಸ್ ಅಭ್ಯರ್ಥಿ ಆಸೀಫ್ ರಾಜು ಸೇಠ್ ಸದಾಶಿವ ನಗರದ ನಿವಾಸಿಗಳೊಂದಿಗೆ ಪ್ರಚಾರ ಸಭೆ ಮಾಡಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಫಿರೋಜ್ ಸೇಠ್ ಅವರು ಸಾಥ್ ನೀಡಿದರು.

ಮತದಾರರನ್ನು ಉದ್ದೇಶಿಸಿ ಮಾತನಾಡಿದ ಫಿರೋಜ್ ಸೇಠ್ ಈ ಬಾರಿ ಚುನಾವಣೆಯಲ್ಲಿ ನಮ್ಮ ಎದುರಾಳಿ ಬಿಜೆಪಿ ಅಲ್ಲ ಬದಲಾಗಿ ಎಂ ಈ ಎಸ್ ಎಂದರು ಈ ಬಾರಿ ಬಿಜೆಪಿ ಗೆಲುವಿನ ಹಾದಿಯಿಂದ ದೂರು ಉಳಿದಿದೆ ಹಿಂದೂ ಮುಸ್ಲಿಂ ಜೈನ್ ಮತ್ತು ಎಲ್ಲ ಸಮುದಾಯದ ಜನ ನಮ್ಮೊಟ್ಟಿಗೆ ಇದ್ದಾರೆ ಈ ಬಾರಿ ಕಾಂಗ್ರೆಸ್ ಜಯಭೇರಿ ಯಾಗುವುದು ಶತಸಿದ್ದ ಎಂದು ಹೇಳಿದರು.ಹೀಗಾಗಿ ಮತದಾರರು ಎಲ್ಲರೂ ಮೇ 10 ರಂದು ಕಾಂಗ್ರೆಸ್ ಗೆ ಮತ ಹಾಕುವಂತೆ ಮನವಿ ಮಾಡಿದರು. ನಂತರ ಮಾದ್ಯಮದವರೊಂದಿಗೆ ಮಾತನಾಡಿದ ಕಾಂಗ್ರೆಸ್ ಅಭ್ಯರ್ಥಿ ಆಸೀಫ್ ರಾಜು ಸೇಠ್ ಕಾಂಗ್ರೆಸ್ ನೀಡಿರುವ ಎಲ್ಲ ಭಾರವಸೆಗಳನ್ನು ಇಡೇರಿಸಲಾಗುವುದು ಹಾಗೂ ಸ್ಥಳೀಯ ಎಲ್ಲ ಸಮಸ್ಯ ಗೆ ಪರಿಹಾರ ಮಾಡಲಾಗುತ್ತದೆ ಎಂದು ಹೇಳಿದರು.ಈ ಬಾರಿ ಕಾಂಗ್ರೆಸ್ ಗೆ ನೀವೆಲ್ಲ ಸಾಕ್ಷಿಯಾಗ ಬೇಕಿದೆ ಎಂದು ಮತದಾರರಲ್ಲಿ ವಿನಂತಿ ಮಾಡಿಕೊಂಡರು.ಜಬ್ಬರಖಾನ್ ಫಿರೋಜ್ ಸೇಠ್,ಮಾಜಿ ಎಂ ಎಲ್ ಸಿ ಅಬ್ದುಲ್ ಗಫರ್ಬಿಹಾರ ಎಂ ಪಿ ಜಾವಿದ್, ಮಾಜಿ ಶಾಸಕ ಫಿರೋಜ್ ಸೇರಿದಂತೆ ಸದಾಶಿವ ನಗರದ ಸ್ಥಳೀಯರು ಹಾಗೂ ಅವರ ಅಭಿಮಾನಿಗಳು ಉಪಸ್ಥಿತರಿದ್ದರು.

# ಇಂದು ಕಿತ್ತೂರ ಚನ್ನಮ್ಮನ ಪುಣ್ಯಭೂಮಿಗೆ ಪ್ರಧಾನಿ ಮೋದಿ

ಬೈಲಹೊಂಗಲ: ಕ್ರಾಂತಿಕಾರಿ ಕಿತ್ತೂರ ಚನ್ನಮ್ಮನ ಪುಣ್ಯಭೂಮಿ ನಾಡಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಬರಲು ಉತ್ಸುಕರಾಗಿದ್ದರ ಹಿನ್ನಲೆಯಲ್ಲಿ ಬೈಲಹೊಂಗಕ್ಕೆ ಅವರ ಪ್ರಚಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಬಿಜೆಪಿ ಗ್ರಾಮೀಣ ಅಧ್ಯಕ್ಷ ಸಂಜಯ ಪಾಟೀಲ ಹೇಳಿದರು.

ಅವರ ಪಟ್ಟಣದ ಹೊರವಲಯದ ಬೈಲವಾಡ ಕ್ರಾಸ್ ಬಳಿ ನಡೆಯುವ ಸಮಾವೇಶದ ಸ್ಥಳದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿ, ಜಿಲ್ಲೆಯ 12 ಮತಕ್ಷೇತ್ರಗಳ ಬಿಜೆಪಿ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರಾರ್ಥವಾಗಿ ಮೇ.3 ರಂದು ಮದ್ಯಾಹ್ನ 1.30 ಕ್ಕೆ ಸಮಾವೇಶದ ಪಕ್ಕದಲ್ಲಿ ನಿರ್ಮಿಸಿದ ಹೆಲಿಪ್ಯಾಡ್ ಮೈದಾನಕ್ಕೆ ಪ್ರಧಾನಿಗಳು ಆಗಮಿಸಿ, 45 ನಿಮಿಷಗಳ ಕಾಲ ಭಾಷಣ ಮಾಡಲಿದ್ದಾರೆ. ಪ್ರಪ್ರಥಮ ಬಾರಿಗೆ ಅವರು ಆಗಮಿಸುತ್ತಿದ್ದು, ಎಲ್ಲರೂ ಅವರ ಆಗಮನದ ನಿರೀಕ್ಷೆಯಲ್ಲಿದ್ದಾರೆ. ಅವರ ಅಭಿಮಾನಿಗಳು, ಕಾರ್ಯಕರ್ತರು, ಸಾರ್ವಜನಿಕರು, ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಅವರ ಕಾರ್ಯಕ್ರಮ ಯಶಸಿಗೊಳಿಸಬೇಕೆಂದು ಮನವಿ ಮಾಡಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಕೆಎಲ್ಇ ಚೇರಮನ್



ಪ್ರಭಾಕರ ಕೋರೆ, ಸಂಸದೆ ಮಂಗಲಾ ಅಂಗಡಿ, ಶಾಸಕ ಬಸನಗೌಡ ಪಾಟೀಲ ಯತ್ನಾಳ, ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ, ಜಿಲ್ಲೆಯ ಶಾಸಕರು, ಮಾಜಿ ಶಾಸಕರು, 12 ಮತಕ್ಷೇತ್ರಗಳ ಅಭ್ಯರ್ಥಿಗಳು, ಮುಖಂಡರುಗಳು ಪಾಲ್ಗೊಳ್ಳಲಿದ್ದಾರೆ. 60*80 ಅಡಿಯಲ್ಲಿ ವಿಶಾಲವಾದ ಭವ್ಯ ವೇದಿಕೆ ನಿರ್ಮಿಸಲಾಗುತ್ತಿದ್ದು, ಸಮಾವೇಶಕ್ಕೆ ಸುಮಾರು 3 ಲಕ್ಷ 50 ಸಾವಿರ ಜನಸಂಖ್ಯೆ ಸೇರುವ ನಿರೀಕ್ಷೆ ಇದೆ. ಈಗಾಗಲೇ 45 ಏಕರೆ ಜಾಗೆಯಲ್ಲಿ ಎಲ್ಲ ಸಿದ್ದತೆಗಳನ್ನು ಮಾಡಲಾಗುತ್ತಿದೆ. ಬೈಲಹೊಂಗಲ, ಕಿತ್ತೂರ, ಸವದತ್ತಿ, ರಾಮದುರ್ಗ, ಖಾನಾಪುರ, ಗೋಕಾಕ, ಅರಭಾಂವಿ, ಬೆಳಗಾವಿ ಗ್ರಾಮೀಣ, ಬೆಳಗಾವಿ ಉತ್ತರ, ಬೆಳಗಾವಿ ದಕ್ಷಿಣ, ಧಾರವಾಡ ಗ್ರಾಮೀಣ, ಕಲಘಟಗಿ, ಯಮಕನಮರ್ಡಿ, ಹುಕ್ಕೇರಿ ಮತಕ್ಷೇತ್ರಗಳ ಅಭ್ಯರ್ಥಿಗಳು, ಕಾರ್ಯಕರ್ತರು ಪಾಲ್ಗೊಳ್ಳಲಿದ್ದಾರೆ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿ ತನ್ನ ಪ್ರಾಣವನ್ನೆ ಬಲಿದಾನಗೈದ ವೀರರಾಣಿ ಚೆನ್ನಮ್ಮನ ಸಮಾಧಿಗೆ ಪ್ರಧಾನಿಗಳು ಭೇಟಿ ನೀಡಿ ಗೌರವ ಸಲ್ಲಿಸಲು ಉತ್ಸುಕರಾಗಿದ್ದರು. ಮತ್ತು ರೋಡ್ ಶೋ ಆಯೋಜಿಸಲು ಯೋಚಿಸಲಾಗಿತ್ತು ಆದರೆ ಭದ್ರತೆ ಮತ್ತು ಸಂಚಾರ ಸಮಸ್ಯೆಯಿಂದ ಎಸ್ ಜಿಪಿ ಯಿಂದ ಅನುಮತಿ ಸಿಕ್ಕಿಲ್ಲ. ಎಸ್‌ಜಿಪಿ ಅವರಿಗೆ ಸಾಕಷ್ಟು ಮನವರಿಕೆ ಮಾಡಿದರೂ ಕೂಡ ಅನುಮತಿ ಸಿಗುತ್ತಿಲ್ಲದ್ದರಿಂದ ವೇದಿಕೆ ಮೇಲೆ ವೀರಮಾತೆ ಚೆನ್ನಮ್ಮ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಮೂರ್ತಿಗಳಿಗೆ ಗೌರವ ಸಮರ್ಪಿಸುವ ಕಾರ್ಯಕ್ರಮ ಜರುಗಲಿದೆ. ಎಲ್ಲ ರಾಜ್ಯಗಳ ಚುನಾವಣೆ ಪ್ರಚಾರಕ್ಕೆ ತೆರಳಿ ಪ್ರಚಾರ ಮಾಡುವ ರೀತಿಯಲ್ಲಿ ರಾಜ್ಯದಲ್ಲಿಯೂ ಸಹ ವಿಧಾನಸಭೆಯ ಚುನಾವಣೆ ನಡೆ–ಯುತ್ತಿದ್ದು ಪ್ರಧಾನಿ ಅವರ ಕಾರ್ಯಕ್ರಮ 23 ಸಮಾವೇಶಗಳು ಆಯೋಜಿಸಲಾಗಿದೆ. ವಿರೋಧ ಪಕ್ಷದವರು ಪ್ರಧಾನಿ ಅವರನ್ನು ಕರೆಸುತ್ತಿರುವ ಟೀಕೆಗೆ ಹುರುಳಿಲ್ಲ ಎಂದರು. ಪತ್ರಕರ್ತರು ಬಿಜೆಪಿ ಟಿಕೆಟ ಆಕಾಂಕ್ಷಿಯಾಗಿದ್ದ ಡಾ.ವಿಶ್ವನಾಥ ಪಾಟೀಲ ಅವರು ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರಿಂದ ಬೈಲಹೊಂಗಲಕ್ಕೆ ಮೋದಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂಬ ಮಾತುಗಳು ಕೇಳಿ ಬರುತ್ತಿವೆ ಎಂದು ಪ್ರಶ್ನಿಸಿದಾಗ, ಬೆಳಗಾವಿ ಜಿಲ್ಲೆಯಲ್ಲಿ ಕ್ರಾಂತಿಕಾರಿ ನಾಡಾದ ಚೆನ್ನಮ್ಮನ ನಾಡಿನಲ್ಲಿ ಆಯೋಜಿಸುವ ಗುರಿ ಇತ್ತು ಹೀಗಾಗಿ ಬೈಲಹೊಂಗಲದಲ್ಲಿ ಸಮಾವೇಶಕ್ಕೆ ಸ್ಥಳ ಆಯ್ಕೆ ಮಾಡಲಾಗಿದೆ ವಿನ: ಇನ್ನಾವುದೆ ಉದ್ದೇಶ ಅಡಗಿಲ್ಲ. ಮೋದಿ ಅವರ ಆಗಮನದಿಂದ ಹಾಗೂ ಬಿಜೆಪಿಯ ಜನಪರ ಯೋಜನೆಗಳಿಂದ ಜಿಲ್ಲೆಯಲ್ಲಿ 18ರಲ್ಲಿ 16 ಕ್ಷೇತ್ರಗಳಲ್ಲಿ ಜಯ ಖಂಡಿತ ಎಂದರು. ಗೋಷ್ಠಿಯಲ್ಲಿ ಬಿಜೆಪಿ ಅಭ್ಯರ್ಥಿ ಜಗದೀಶ ಮೆಟಗುಡ್ಡ, ರಮೇಶ ದೇಶಪಾಂಡೆ, ಸುಭಾಸ ಪಾಟೀಲ, ಸಂದೀಪ ದೇಶಪಾಂಡೆ, ಎಫ್. ಎಸ್.ಸಿದ್ದನಗೌಡರ, ಗುರುಪಾದ ಕಳ್ಳಿ ಬಿಜೆಪಿ ಮುಖಂಡರು ಇದ್ದರು.

## ಬೆಳಗಾವಿ ಗ್ರಾಮೀಣ ಮತ ಕ್ಷೇತ್ರದಿಂದ ವಿವಿಧ ಮತ ಕ್ಷೇತ್ರಕ್ಕೆ ಮತಗಟ್ಟೆ ಅಧಿಕಾ-ರಿ/ಸಿಬ್ಬಂದಿಗಳಿಗೆ ಬಸ್ ಸೌಲಭ್ಯ

ಬೆಳಗಾವಿ: ಕರ್ನಾಟಕ ವಿಧಾನಸಭೆಗೆ 2023 ರ ಸಾರ್ವತ್ರಿಕ ಚುನಾವಣೆ ಸಲುವಾಗಿ, ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಬೆಳಗಾವಿ ಗ್ರಾಮೀಣ ಮತ ಕ್ಷೇತ್ರದಿಂದ ಅರಭಾವಿ, ಬೈಲಹೊಂಗಲ, ಗೋಕಾಕ, ಖಾನಾಪೂರ ಕಿತ್ತೂರ, ರಾಮದುರ್ಗ ಮತ್ತು ಸವದತ್ತಿ–ಯಲ್ಲಮ್ಮ ತರಬೇತಿ ಕೇಂದ್ರಗಳಿಗೆ ಮೇ.3 2023 ರಂದು ಬೆಳಗ್ಗೆ 5.30 ಕ್ಕೆ ವನಿತಾ ವಿದ್ಯಾಲಯ ಆಂಗ್ಲ ಮಾಧ್ಯಮ, ಪ್ರೌಢ ಶಾಲೆ, ಕ್ಲಬ್ ರೋಡ, ಬೆಳಗಾವಿಯಿಂದ ಬಸ್ಸುಗಳು ಹೊರಡುತ್ತಿದ್ದು, ಮತಗಟ್ಟೆ ಅಧಿಕಾ–ರಿ/ಸಿಬ್ಬಂದಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ರಾಜಶೇಖರ ಡಂಬಳ 13–ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರ ಚುನಾವಣಾಧಿಕಾರಿಗಳು ಹಾಗೂ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಕಾರ್ಯಕ್ರಮ: "ರೆಡ್ ಝೋನ್"/"ನೋ ಫ್ಲೈ ಝೋನ್" ಘೋಷಣೆ

ಬೆಳಗಾವಿ: ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿ ಅವರು ಮೇ.03 2023 ರಂದು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಬೈಲವಾಡ ಕ್ರಾಸ್‌ದಲ್ಲಿ ಜರುಗುವ ಸಾರ್ವಜನಿಕ ಬಹಿರಂಗ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಕಾರಣ ಕಾರ್ಯಕ್ರಮ ಸ್ಥಳದ ಸುತ್ತಮುತ್ತ 2 ಕಿಮೀ ವ್ಯಾಪ್ತಿಯಲ್ಲಿ ಮಾನವ ರಹಿತ ವಾಯು ವಾಹನ (Unmanned Aerial Vehicle (UAV)/(Unmanned Aircraft Systems(UAS)/Drones/Paragliders ಗಳ ಹಾರಾಟವನ್ನು/ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಿ "Red Zone"/"No Fly Zone" ಅಂತಾ ಘೋಷಿಸಿ ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್.ಕೆ.ಪಾಟೀಲ ಅವರು ಆದೇಶಿಸಿ ದ್ದಾರೆ.

## ಮೇ.10: ಕರ್ನಾಟಕ ವಿಧಾನ ಸಭಾ ಚುನಾವಣೆಯ ದಿನದಂದು ವೇತನ ಸಹಿತ ರಜೆ

ಬೆಳಗಾವಿ: ಭಾರತ ಚುನಾವಣಾ ಆಯೋಗವು ಮೇ.10 2023 ಬುಧವಾರ ದಂದು ಕರ್ನಾಟಕ ವಿಧಾನ ಸಭೆ ಸಾರ್ವತ್ರಿಕ ಚುನಾವಣೆ ನಿಗದಿಪಡಿಸಿದೆ.

ಸದರಿ ದಿನದಂದು ರಾಜ್ಯಾದ್ಯಂತ ಎಲ್ಲಾ ಕಾರ್ಖಾನೆಗಳು, ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು ಹಾಗೂ ಇತರೆ ಸಂಸ್ಥೆಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ 1951 ರ ಪ್ರಜಾ ಪ್ರತಿನಿಧಿ ಕಾಯ್ದೆ, ಸೆಕ್ಷನ್ 135 (ಬಿ) ರಡಿ ಹಾಗೂ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಮತ್ತು ಹಬ್ಬದ ರಜೆಗಳು) ಕಾಯ್ದೆ–1963 ಕಲಂ 3 (ಎ) ರನ್ವಯ ಅರ್ಹ ಮತದಾರರಿಗೆ ವೇತನ ಸಹಿತ ರಜೆ ಘೋಷಿಸಿ ಸಂವಿಧಾನಾತ್ಮಕ ಹಕ್ಕಾದ ಮತವನ್ನು ಚಲಾಯಿಸುವುದಕ್ಕಾಗಿ ಎಲ್ಲಾ ಮಾಲೀಕರು/ನಿಯೋಜಕರು ಅನುವು ಮಾಡಿ ಕೊಡಬೇಕಾಗಿ ತಿಳಿಸಿದ್ದಾರೆ. ತಪ್ಪಿದ್ದಲ್ಲಿ ಸಂಬಂಧಪಟ್ಟ ಸಂಸ್ಥೆ/ನಿಯೋಜಕರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಕಾರ್ಮಿಕ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬುದ್ಧ ಪೂರ್ಣಿಮಾ ನಿಮಿತ್ಯ ಕಸಾಯಿಖಾನೆ/ಮಾಂಸಾಹಾರಿ ಅಂಗಡಿಗಳು ಬಂದ್

ಬೆಳಗಾವಿ: ಬುದ್ಧ ಪೂರ್ಣಿಮಾ ನಿಮಿತ್ಯ ಬೆಳಗಾವಿ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಎಲ್ಲ ಕಸಾಯಿಖಾನೆ/ ಮಾಂಸಾಹಾರಿ ಅಂಗಡಿಗಳನ್ನು ಶುಕ್ರವಾರ ಮೇ.05 2023 ರಂದು ಬಂದು ಮಾಡಿ ಸಹಕರಿಸುವಂತೆ ಕೋರಲಾಗಿದೆ.

ಸದರಿ ದಿನದಂದು, ಕಸಾಯಿಖಾನೆ/ ಮಾಂಸಾಹಾರಿ ಅಂಗಡಿ ಮಾಲೀಕರು ಆದ–ೇಶ ವನ್ನು ಉಲ್ಲಂಘನೆ ಮಾಡಿರುವುದು ಕಂಡು ಬಂದರೆ ಅಂತಹ ಮಾಲೀಕರುಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಆದೇಶಿಸಿದ್ದಾರೆ.

### ಪ್ರಜೆಗಳ ಹಿತ ದೃಷ್ಟಿಯಿಂದ ಬಿಡುಗಡೆ ಮಾಡಿರುವುದೇ ಬಿಜೆಪಿ ಪ್ರಜಾ ಪ್ರಣಾಳಿಕೆ: ಡಾಕ್ಟರ್ ಪ್ರಭಾಕರ್ ಕೋರೆ

# ಕಾಂಗ್ರೆಸ್ ನಾಯಕರು ಭಯ ಭೀತಿಯಲ್ಲಿ ಏಕೆ: ಕೋರೆ

**ಮಾಂಜರಿ:** ಜನ ಕಲ್ಯಾಣ ಯೋಜನೆಗಳನ್ನು ಮೋದಿ ಸರ್ಕಾರ ಮಾಡಿದೆ ಅದನ್ನು ಬೊಮ್ಮಾಯಿ ಸರ್ಕಾರ ಅನುಷ್ಠಾನಗೊಳಿಸಿದೆ ನಮ್ಮ ಡಬಲ್ ಇಂಜಿನ್ ಸರ್ಕಾರ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಕಡಿಮೆ ಅವಧಿಯಲ್ಲಿ ಮಾಡಿರುವುದೇ ನಮಗೆ ಹೆಮ್ಮೆಯ ವಿಚಾರ ಎಂದು ಕೆಎಲ್ಇ ಶಿಕ್ಷಣ ಸಂಸ್ಥೆಯ ಕಾರ್ಯಾಧ್ಯಕ್ಷ ಹಾಗೂ ಭಾರತೀಯ ಜನತಾ ಪಕ್ಷದ ಮುಖಂಡ ಡಾ ಪ್ರಭಾಕರ್ ಕೋರೆ ಹೇಳಿದರು.

ಅವರು ಇಂದು ರಾಯಬಾಗ್ ವಿಧಾನಸಭಾ ಮತಕ್ಷೇತ್ರದ ಅಭ್ಯರ್ಥಿಯಾದ ದುರ್ಯೋಧನ ಐಹೊಳೆ ಇವರ ಚುನಾವಣಾ ಪ್ರಚಾರ ಕಾರ್ಯದಲ್ಲಿ ತಾಲೂಕಿನ ನಸಲಾಪುರ ನಂದಿಕುರಳಿ ಕೆಂಪಟ್ಟಿ ಗ್ರಾಮದಲ್ಲಿ ಪ್ರಚಾರ ಸಭೆ ನಡೆಸಿ ಮಾತನಾಡುತ್ತಿದ್ದರು ಏಕೆಂದರೆ ನಾವು ಅಧಿಕಾರ ಮಾಡಿದ್ದು ಕೇವಲ ಮೂರು ವರ್ಷಗಳ ಕಾಲ ಅದರಲ್ಲೂ ಕೋವಿಡ್ ಹಾಗೂ ಇನ್ನು ಕ್ಲಿಷ್ಟ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಿದ್ದೇವೆ ಹಾಗಾಗಿ ನಾವು ಕಮ್ಮಿ ಸಮಯದಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿರುವುದಾಗಿ ಹೇಳಿದರು.



ನಾವು ಜನ ಸಾಮಾನ್ಯರ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ ನಾವು ಅನ್ನ ಅಕ್ಷರ ಆದಾಯ ಆಶ್ರಯ ಸೇರಿದಂತೆ ಹಲವಾರು ಸಾಮಾಜಿಕ ಬದ್ಧತೆಯ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ್ದೇವೆ ಅದರೊಂದಿಗೆ ಹಬ್ಬದ ಸಮಯದಲ್ಲಿ ಉಚಿತ ಗ್ಯಾಸ್ ಸಿಲಿಂಡರ್ ನೀಡುವ ಕಾರ್ಯವನ್ನು ಮಾಡಲಿದ್ದೇವೆ ಎಂದರು.

ಪ್ರತಿಯೊಂದು ವಿಧಾನಸಭಾ ಕ್ಷೇತ್ರದ ಅದರಲ್ಲೂ ಪಂಚಾಯತ್ ವಾರು ಹಕ್ಕು ಪತ್ರ ವಿತತರಣೆಯನ್ನು ವಸತಿ ರಹಿತರಿಗೆ ನೀಡಲು ಮುಂದಾಗಿದ್ದೇವೆ ಎಂದರು ಅಲ್ಲದೆ ವಿದ್ಯುತ್ ಚಾಲಿತ ವಾಹನಗಳ ಸ್ಟಾರ್ಟ್ ಅಪ್ ಗಳಿಗೆ ಹೆಚ್ಚಿನ ಆದ್ಯತೆ ನೀಡುವ ಗುರಿ ಹೊಂದಿದ್ದೇವೆ ಎಂದು ಹೇಳಿದರು.

ಕರ್ನಾಟಕ ವಿಕಾಸವೇ ಭಾರತದ ವಿಕಾಸ ಎಂಬ ಶೀರ್ಷಿಕೆಯಡಿ ಪ್ರಣಾಳಿಕೆ ಬಿಡುಗಡೆಗೊಳಿಸಿದ್ದೇವೆ ಎಂದರು ಕಾಂಗ್ರೆಸ್ ಬಹಳಷ್ಟು ಚಂಚಲತೆಗೆ ಒಳಗಾಗಿದೆ ಅವರಿಗೆ ಅವರ ಗ್ಯಾರಂಟಿ ಸಾಕಾರ ಆಗುವುದೇ ಅವರಿಗೆ ಗ್ಯಾರಂಟಿ ಇಲ್ಲ ಎಂದರು ಅವರು ಯಾವ ನೈತಿಕಯ ಮತ ಕೇಳಲು ಹೊರಟಿದಾರೋ ಗೊತ್ತಿಲ ಎಂದರು.

ಮೋದಿ ಅವರನ್ನು ನರಹಂತಕ ಎಂದು ಹೇಳಿ ತಮ್ಮ ಅಧಿಕಾರ ಕಳೆದುಕೊಂಡರು ಪ್ರಧಾನಿಗಳ ಬಗ್ಗೆ ಹಗುರವಾಗಿ ಮಾತನಾಡುವುದನ್ನು ಮೊದಲು ನಿಲ್ಲಿಸಿ ಕಾಂಗ್ರೆಸ್ ನಾಯಕರು ಭಯ ಭೀತಿಯಲ್ಲಿ ಏಕೆ ಎಂದರೆ ಚುನಾವಣೆಯಲ್ಲಿ ಗೆಲ್ಲುವ ವಿಶ್ವಾಸವಿಲ್ಲಾ ಹಾಗಾಗಿ ಅವರು ಈ ರೀತಿಯಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಮಿಸಾಲಾತಿ ವಿಚಾರ ಕೋರ್ಟಿನಲ್ಲಿದೆ ಯಾವುದೇ ರೀತಿಯಾದ ಸ್ಟೇ ಕೊಟ್ಟಿಲ್ಲ ಆದರೆ ಅದರ ವಿಚಾರಣೆ ನಡೆಯುತ್ತಿದೆ ಆ ಕುರಿತು ನಾನು ಹೆಚ್ಚು ಮಾತನಾಡುವುದಿಲ್ಲ ಎಂದು ಪತ್ರಕರ್ತರು ಮಾಡಿದ ಪ್ರಶ್ನೆಗೆ ಉತ್ತರಿಸಿದರು. ಈ ವೇಳೆ ಅಭ್ಯರ್ಥಿ ದುರ್ಯೋಧನ ಐಹೊಳೆ ಚಿದಾನಂದ ಕೋರೆ ಸಹಕಾರಿ ಸಕ್ಕರೆ ಕಾರ್ಖಾನೆಯ ನಿರ್ದೇಶಕ ಭರತೇಶ್ ಬನವನೇ ಉಪಾಧ್ಯಕ್ಷ ತಾತ್ಯಾಸಾಹೇಬ್ ಕಾಟೇ ಮಲ್ಲಪ್ಪ ಮೈಶಾಳೆ ಹಾಗೂ ಇನ್ನಿತರರು ಹಾಜರಿದ್ದರು.

# ಅಂತರಾಷ್ಟ್ರೀಯ ಕಾರ್ಮಿಕರ ದಿನಾಚರಣೆ

ಬೆಳಗಾವಿ ನಗರದ ಜನರಿಗೆ ಎಲ್ & ಟಿ ಕಂಪನಿಯು KUWSMP 24x7 ನಿರಂತರ ಕುಡಿಯುವ ನೀರು ಸರಬರಾಜು ಮಹತ್ತರವಾದ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದ್ದು.

ಈ ಯೋಜನೆಯಡಿಯಲ್ಲಿ ದಿನಾಂಕ 01.05.2023 ರಂದು ಎಲ್ & ಟಿ ಕಂಪನಿಯ ಕಾರ್ಮಿಕರ ವಸತಿ ಕೇಂದ್ರದಲ್ಲಿ ಅಂತರಾಷ್ಟ್ರೀಯ ಕಾರ್ಮಿಕರ ದಿನಾಚರಣೆಯನ್ನು ಆಚರಿಸಲಾಯಿತು,

ಇದರ ಪ್ರಯುಕ್ತವಾಗಿ ಕಾರ್ಮಿಕರಿಗೆ ರಸಪ್ರಶ್ನೆ ಸ್ಪರ್ಧೆಯನ್ನು ಆಯೊಜಿಸಲಾಗಿ–ತ್ತು, ಕಾರ್ಮಿಕರಿಗೆ ಈ ದಿನದ ಮಹತ್ವ ಹಾಗೂ ಕಾರ್ಮಿಕರಿಗೆ ಇರುವ ಹಕ್ಕುಗಳ ಕುರಿತು ಅರಿವು ಮೂಡಿಸಲು ವಿವಿಧ ಸಾಕ್ಷ್ಯ ಚಿತ್ರಗಳನ್ನು ಪ್ರದರ್ಶಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಯೊಜನಾ ಅನುಷ್ಠಾನ ಘಟಕದ ಸಾಮಾಜಿಕ ಸಿಬಂದ್ದಿ ಶ್ರೀಮತಿ. ಸೌಮ್ಯ, ಎಲ್ & ಟಿ ಕಂಪನಿಯ ಸಿಬ್ಬಂದಿಗಳಾದ .ರವಿಕುಮಾರ–O&M Manager, .ದುರ್ಗೇಶ–Construction Manager ಹಾಗೂ ಕಾರ್ಮಿಕರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಲಾಯಿತು.



ಕಾರ್ಯಕ್ರಮದ ವಂದನಾರ್ಪಣೆಯನ್ನು .ಸಿ.ಎಸ್.ರಾವ ರವರು ನೆರವೇರಿಸಿದರು. ಅಂದು ಕಾರ್ಮಿಕ ಸಿಬ್ಬಂದಿ ಒಬ್ಬರು ಸುಬ್ರಹ್ಮಣ್ಯ ಕಾಂಬಳೆ ಮಾತನಾಡಿ ಎಲ್ ಎಂಡ್ ಇ ಕಂಪನಿಯವರು ಕಾರ್ಮಿಕರಿಗೆ ತೊಲಗುವ ಸಮವಸ್ತ್ರ ಸೂಜು ನೀಡಿದ್ದು ಇದು ಹೊಸ ಬೆಳವಣಿಗೆ ನಮಗೆಲ್ಲರಿಗೂ ಸರಕಾರಿ ಸೌಲಭ್ಯವಾದ ಪಿಎಫ್ ಇಎಸ್ಐ ಇನ್ನಿತರ ಕಾರ್ಮಿಕರ ಸೌಲಭ್ಯಗಳನ್ನು ಒದಗಿಸಿ ಸಹಕರಿಸಿ ಕಾಮಗಾರಿಯಲ್ಲಿ ಭಾಗವಹಿಸಲು ವಿನಂತಿಸಿದ ಹಾಗೆ ನಾವೆಲ್ಲರೂ ಕಾರ್ಯನಿರ್ವಹಿಸುತ್ತಿದ್ದು, ಈ ಮೊದಲು ವಾಟರ್ ಬೋರ್ಡ್ ಇದ್ದಾಗ ಅವರ ವತಿಯಿಂದ ಯಾವುದೇ ಸೌಲಭ್ಯ ನಮಗೆ ಈ ರೀತಿ ಸಿಕ್ಕಿರಲಿಲ್ಲ ಈಗ ಎಲ್ ಎಂಡ್ ಇ ಕಂಪನಿಯವರು ಎಲ್ಲ ಸೌಲಭ್ಯಗಳನ್ನು ನೀಡಿರುತ್ತಾರೆ ಎಂದು ಅವರ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಎಲ್ ಅಂಡ್ ಕಂಪನಿ ಕಂಪನಿಯವ–ರಿಗೆ ಇಂಟರ್ನ್ಯಾಷನಲ್ ಅಂತರಾಷ್ಟ್ರೀಯ ಕಾರ್ಮಿಕ ದಿನಾಚರಣೆಯ ಅಂಗವಾಗಿ ಕಂಪನಿಯವರಿಗೆ ಧನ್ಯವಾದಗಳು ಅರ್ಪಿಸುತ್ತೇನೆ ಎಂದು ಕಾರ್ಮಿಕರ ಪರವಾಗಿ ಸುಬ್ರಹ್ಮಣ್ಯ ಕಾಂಬಳೆ ಕಾರ್ಮಿಕರ ಪರವಾಗಿ ಭಾವಪೂರ್ವಕವಾಗಿ ಅಮಿನಂದನೆಗಳನ್ನು ತಿಳಿಸುತ್ತೇನೆ ಎಂದು ಹೇಳಿದರು.

## ಮನೆಗಳಿಗೆ ತೆರಳಿ ಜಾರಕಿಹೊಳಿ ಪರ ಮತಯಾಚನೆ

**ಗೋಕಾಕ:** ಶಾಸಕ ರಮೇಶ ಜಾರಕಿಹೊಳಿ ಅವರು ಎಲ್ಲ ಸಮಾಜಗಳ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅವರ ಅಭಿವೃದ್ಧಿ ಕಾರ್ಯಗಳನ್ನು ಗಮನಿಸಿ ಬಿಜೆಪಿ ಅಭ್ಯರ್ಥಿ ರಮೇಶ ಜಾರಕಿಹೊಳಿ ಅವರಿಗೆ ಮತ ನೀಡುವಂತೆ ಗೋಕಾಕ ತಾಲೂಕ ನದಾಫ್ ಪಿಂಜಾರ ಸಂಘದ ತಾಲೂಕಾಧ್ಯಕ್ಷ ಮೀರಾಸಾಬ ನದಾಫ್ ಹೇಳಿದರು.

ಅವರು, ಮಂಗಳವಾರದಂದು ತಾಲೂಕಿನ ಅಂಕಲಗಿ ಪಟ್ಟಣ, ಖನಗಾಂವ, ಮಮದಾಪುರ, ಅಕ್ಕತಂಗೇರಹಾಳ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ನದಾಫ್ ಪಿಂಜಾರ ಸಮಾಜ ಬಾಂಧವರ ಮನೆಗಳಿಗೆ ತೆರಳಿ ಬಿಜೆಪಿ ಅಭ್ಯರ್ಥಿ ರಮೇಶ ಜಾರಕಿಹೊಳಿ ಅವರ ಮತಯಾಚನೆ ನಡೆಸಿ ಮಾತನಾಡಿದರು.

ಬಿಜೆಪಿ ಸರಕಾರವು ಸಹ ಎಲ್ಲ ರಾಜ್ಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದು, ರಾಜ್ಯದ ಸಮಗ್ರ ಅಭಿವೃದ್ಧಿಗೆ ಮತ್ತೊಮ್ಮೆ ಬಿಜೆಪಿ ಸರಕಾರ ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಬಿಜೆಪಿ ಪಕ್ಷವನ್ನು ಬೆಂಬಲಿಸಿ ತಮ್ಮ ಅಮೂಲ್ಯವಾದ ಮತವನ್ನು ಬಿಜೆಪಿ ಪಕ್ಷಕ್ಕೆ ನೀಡುವಂತೆ ಕೋರಿದರು.

ಈ ಸಂದರ್ಭದಲ್ಲಿ ಇಕ್ಬಾಲ್ ನದಾಫ್, ಮಲೀಕ್ ನದಾಫ್, ಮುಸ್ತಾಕ ನದಾಫ್ ಯೂನುಸ್ ನದಾಫ್ ಸೇರಿದಂತೆ ನದಾಪ್ ಪಿಂಜಾರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.





ಕಾಗವಾಡ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯ ಸಿದ್ದೇವಾಡಿ ಗ್ರಾಮದ ನೂರಾರು ಕಾರ್ಯಕರ್ತರು ಕಾಂಗ್ರೆಸ್ ಪಕ್ಷ ತೊರೆದು ಬಿಜೆಪಿ ಪಕ್ಷದ ಅಭ್ಯರ್ಥಿ ಶ್ರೀಮಂತ ಪಾಟೀಲರ ನೇತೃತ್ವದಲ್ಲಿ ಬಿಜೆಪಿ ಪಕ್ಷ ಸೇರ್ಪಡೆಗೊಂಡರು. ಇವರನ್ನು ಶಾಸಕರು ಸನ್ಮಾನಿಸಿ ಬರಮಾಡಿಕೊಂಡರು.

## ಬಸವಣ್ಣ , ಶಿವಾಜಿ ಸ್ವಾಭಿಮಾನ ಕಲಿಸಿದವರು: ಕಡಾಡಿ

**ಇಟಗಿ:** ವೀರಶೈವ ಮಠಗಳು ಸಮಾಜದ ಎಲ್ಲ ವರ್ಗದವರಿಗೂ ಶಿಕ್ಷಣ ನೀಡುತ್ತ ಬಂದಿವೆ ಎಂದು ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ ಹೇಳಿದರು.

ಹಿರೇಮುನವಳ್ಳಿಯಲ್ಲಿ ಶಿವ–ಬಸವ ಜಯಂತಿ ಹಾಗೂ ಮಲಪ್ರಭಾ ಸಹಕಾರಿ ಸಕ್ಕರೆ ಕಾರಖಾನೆ ಮಾಜಿ ಅಧ್ಯಕ್ಷ ಮೋಹನ ಸಂಬರಗಿ ಅವರ 44 ನೇ ಮದುವೆ ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿದರು. 12 ನೇ ಶತಮಾನದಲ್ಲಿ ಬಸವಣ್ಣನವರು ವರ್ಗರಹಿತ, ವರ್ಣರಹಿತ ಸಮಾಜ ವನ್ನು ನಿರ್ಮಾಣ ಮಾಡಿದ್ದರು. ಬಸ ವಣ್ಣನವರು ಸಮಾಜದಲ್ಲಿ ತುಳಿತಕ್ಕೆ ಒಳ ಗಾದ ಜನರನ್ನು ಮೇಲಕ್ಕೆತ್ತುತ್ತಿದ್ದರು ಎಂದರು.

ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಮಾತನಾಡಿ, ಕಾಯಕವೇ ಕೈಲಾಸ ಮತ್ತು ಸ್ವಾಭಿಮಾನ ಕಲಿಸಿದವರು ಬಸವಣ್ಣ ಮತ್ತು ಶಿವಾಜಿ. ಅಂದು ಎಲ್ಲ ವರ್ಗದವರು ಅನುಭವ ಮಂಟಪದಲ್ಲಿ ಭಾಗವಹಿಸುತ್ತಿದ್ದರು. ವಚನಗಳ ಮೂಲಕ ಅನುಭವಗಳನ್ನು ಚರ್ಚಿಸುತ್ತಿದ್ದರು. ವೀರಶೈವ ಲಿಂಗಾಯತರು ಎಲ್ಲರೂ ಒಂದಾಗಿ ಸಂಘಟಿತರಾಗಬೇಕು ಎಂದರು.

ಹನಿವೆಲ್ ಇಂಟರ್‌ನ್ಯಾಶನಲ್ ಶಾಲೆಯ ಅಧ್ಯಕ್ಷ ಸುಭಾಷ ಗುಳಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಮಲಪ್ರಭಾ ಸಹಕಾರಿ ಸಕ್ಕರೆ ಕಾರಖಾನೆ ಮಾಜಿ ಅಧ್ಯಕ್ಷ ಮೋಹನ ಸಂಬರಗಿ ದಂಪತಿಗಳ 44 ನೇ ಮದುವೆ ವಾರ್ಷಿಕೋತ್ಸವ ಆಚರಿಸಲಾಯಿತು.

ಮಲಪ್ರಭಾ ಸಹಕಾರಿ ಸಕ್ಕರೆ ಕಾರಖಾನೆ ಮಾಜಿ ಅಧ್ಯಕ್ಷ ಮೋಹನ ಸಂಬರಗಿ ಅಧ್ಯಕ್ಷತೆ ವಹಿಸಿದ್ದರು. ಸಂಸದೆ ಮಂಗಲಾ ಅಂಗಡಿ, ಬಿಜೆಪಿ ಮುಖಂಡ ಶಂಕರಗೌಡಾ ಪಾಟೀಲ, ಪಾರಿಶ್ವಾಡ ಪಿಕೆಪಿಎಸ್ ಅಧ್ಯಕ್ಷ ಶಿವಾನಂದ ಪಾಟೀಲ, ಮಾಜಿ ಶಾಸಕ ಅರವಿಂದ ಪಾಟೀಲ, ಶ್ರೀಕಾಂತ ಹಿರೇಮಠ ಹಾಗೂ ಇತರರು ಉಪಸ್ಥಿತರಿದ್ದರು.

ಬಸವರಾಜ ಸಾಣಿಕೊಪ್ಪ ನಿರೂಪಿಸಿದರು. ಅಪ್ಪಯ್ಯ ಕುಡೊಳ್ಳಿ ವಂದಿಸಿದರು.



# ಶಾಸಕ ಮಹಾಂತೇಶ ದೊಡಗೌಡರ ಗೆಲವು ಖಚಿತ

**ಚನ್ನಮ್ಮನ ಕಿತ್ತೂರು:** ಅರವತ್ತು ವರ್ಷ ಅವಧಿಯಲ್ಲಿ ಅಭಿವೃದ್ಧಿ ಮಾಡಲಾಗದ ಕಾಂಗ್ರೆಸ್ ಪಕ್ಷಕ್ಕೆ ಈಗ ಇಲ್ಲ ಸಲ್ಲದ ಸುಳ್ಳು ಭರವಸೆಗಳನ್ನು ನೀಡುತ್ತಿದೆ ಎಂದು ಶಾಸಕ ಮಹಾಂತೇಶ ದೊಡಗೌಡರ ಹೇಳಿದರು.

ಎಂ.ಕೆ.ಹುಬ್ಬಳ್ಳಿ ಪಟ್ಟಣದ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ವಿವಿಧ ಮಹಿಳಾ ಸ್ವಸಹಾಯ ಸಂಘಗಳ 500ಕ್ಕೂ ಹೆಚ್ಚು ಮಹಿಳೆಯರು ಬಿಜೆಪಿ ಪಕ್ಷಕ್ಕೆ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಿಜೆಪಿ ಜನಪರ ಆಡಳಿತದ ಮೂಲಕ ಜನರ ಸೇವೆ ಮಾಡುತ್ತಿದೆ. ಹಾಗಾಗಿ ಜನರು ಬಿಜೆಪಿಯನ್ನೆ ಆಯ್ದುಕೊಳ್ಳುತ್ತಿದ್ದಾರೆ. ಮುಂಬರುವ ಚುನಾವಣೆಯಲ್ಲಿ ಗೆಲುವು ನಿಶ್ಚಿತವೆಂದ ಸಂದೇಶ ನೀಡುತ್ತಿದ್ದಾರೆಂದು ಭರವಸೆ ವ್ಯಕ್ತಪಡಿಸಿದರು.

ಬಿಜೆಪಿ ಕಿತ್ತೂರು ಬ್ಲಾಕ್ ಅಧ್ಯಕ್ಷ ಡಾ.ಬಸವರಾಜ ಪರವಣ್ಣವರ, ಮುಖಂಡ ಪ್ರಕಾಶ ಮೂಗಬಸವ ಮಾತನಾಡಿ, ಕ್ಷೇತ್ರದಲ್ಲಿ ಬಿಜೆಪಿ ಪಕ್ಷಕ್ಕೆ ಎಲ್ಲ ವರ್ಗದ ಜನತೆ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ. ಪಕ್ಷಕ್ಕೆ ಆನೆ ಬಲ ಬಂದಿದೆ. ಕಿತ್ತೂರು ಕ್ಷೇತ್ರದಲ್ಲಿ ಕಳೆದ ಅವಧಿಗಿಂತ ಹೆಚ್ಚಿನ ಅಂತರದಲ್ಲಿ ಮಹಾಂತೇಶ ದೊಡಗೌಡರ ಆಯ್ಕೆಯಾಗಲಿದ್ದಾರೆ.



ಬಿಜೆಪಿ ಪ್ರಮುಖರಾದ ಉಳವಪ್ಪ ಉಳ್ಳಾಗಡ್ಡಿ, ಶ್ರೀಕರ ಕುಲಕರ್ಣಿ, ಮಹಾಂತೇಶ ಶಿಲವಂತರ, ರವಿ ಮಾನವಿ, ಶಿವಾನಂದ ಹನುಮನಸಾಗರ, ಶ್ರೀಶೈಲ ತಿಗಡಿ, ಲಕ್ಷ್ಮೀ ವರಗನ್ನವರ ಸೇರಿದಂತೆ ಕಾರ್ಯಕರ್ತರು, ಮುಖಂಡರು ಹಾಗೂ ನೂರಾರು ಮಹಿಳೆಯರು ಇದ್ದರು.

# ಪಿಯುಸಿ ವಿದ್ಯಾರ್ಥಿಗಳ ಸಾಧನೆ

**ಸಂಕೇಶ್ವರ:** ಸ್ಥಳೀಯ ಎಸ್.ಡಿ.ವ್ಹಿ.ಎಸ್. ಸಂಘದ, ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯವು 2022–23ನೇ ಸಾಲಿನಲ್ಲಿ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯುವದರೊಂದಿಗೆ ದಾಖಲೆಯನ್ನು ಸೃಷ್ಟಿಸಿದೆ. ಸ್ಥಾನಿಕ ನಿಯಂತ್ರಣ ಸಮಿತಿಯ ಚೇರ್‌ಮನ್ ರಾದ ಶ್ರೀ ವಿನಯಕುಮಾರ ಅ. ಪಾಟೀಲ ಅವರ ನೇತೃತ್ವದಲ್ಲಿ ಹಾಗೂ ಸರ್ವ ಸಿಬ್ಬಂದಿಯ ಪರಿಶ್ರಮದಿಂದಾಗಿ ವಿಜ್ಞಾನ ವಿಭಾಗದಲ್ಲಿ ಶೇ 95ರಷ್ಟು, ವಾಣಿಜ್ಯ ವಿಭಾಗದಲ್ಲಿ ಶೇ 94% ರಷ್ಟು ಹಾಗೂ ಕಲಾ ವಿಭಾಗದಲ್ಲಿ ಶೇ 93%ರಷ್ಟು ಫಲಿತಾಂಶವನ್ನು ಪಡೆದಿರುತ್ತದೆ. ವಿಜ್ಞಾನ ವಿಭಾಗದಲ್ಲಿ ವೈಯಕ್ತಿಕವಾಗಿ ಪ್ರಥಮ ಮಹಾನಂದಾ ಮಗದುಮ 95.67%%, ದ್ವಿತೀಯ ಕಾವೇರಿ ಜರಳಿ 95.33%, ತೃತೀಯ ಲಕ್ಷ್ಮೀ ಗುಡಮಿ 95.17%,




ವಾಣಿಜ್ಯ ವಿಭಾಗದಲ್ಲಿ ಪ್ರಥಮ ಆರತಿ ಸುತಾರ 97.17%, ದ್ವಿತೀಯ ಪ್ರಿಯಾ ಚೌಗಲಾ 96.83%, ತೃತೀಯ ಯೋಗಿತಾ ಅಸೋದೆ 91.83%, ಕಲಾ ವಿಭಾಗದಲ್ಲಿ ಪ್ರಥಮ ಐಶ್ವರ್ಯಾ ಉಗಾರೆ 93%, ದ್ವಿತೀಯ ಶಿವಶರಣಗೌಡಾ ಪಾಟೀಲ 91.50%, ತೃತೀಯ ಚಂದನಾ ಖಾನಾಪುರಿ, ಜಯಶ್ರೀ ಹೆಗಡೆ 91.33% ಅಂಕಗಳಿಸಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿರುತ್ತಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಸಂಘದ ಕಾರ್ಯಾಧ್ಯಕ್ಷರಾದ ಸನ್ಮಾನ್ಯ ಶ್ರೀ ಎ.ಬಿ. ಪಾಟೀಲ, ಉಪಾಧ್ಯಕ್ಷರಾದ ಶ್ರೀ ಜಿ.ಎಸ್.ಇಂಡಿ, ಸ್ಥಾನಿಕ ನಿಂಯಂತ್ರಣ ಸಮೀತಿಯ ಚೇರ್ ಮನ್‌ರಾದ ಶ್ರೀ ವಿನಯಕುಮಾರ ಅ.ಪಾಟೀಲ, ಕಾರ್ಯದರ್ಶಿಗಳಾದ ಶ್ರೀ ಜಿ.ಸಿ.ಕೊಟಗಿ, ಆಡಳಿತಾಧಿಕಾರಿಗಳಾದ ಶ್ರೀ ಬಿ.ಎ.ಪೂಜಾರ, ಪ್ರಾಚಾರ್ಯರಾದ ಶ್ರೀಮತಿ ಎಸ್.ಯು.ಯರಗಟ್ಟಿ ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು, ಬೋಧಕ/ಬೋಧಕೇತರ ಸಿಬ್ಬಂದಿಯವರು ಹಾರ್ಧಿಕ ಅಭಿನಂದನೆಗಳನ್ನು ತಿಳಿಸಿರುತ್ತಾರೆ.

# ಅಭಿವೃದ್ಧಿಗೆ ಬಿಜೆಪಿ ಆರಿಸಲು ಅಮಿತ್ ಶಾ ಕರೆ

ಹನೂರು: ನೀವು ಬಿಜೆಪಿಗೆ ಹಾಕುವ ಮತ ಕರ್ನಾಟಕ ರಾಜ್ಯದ ಸುರಕ್ಷತೆ, ಸುವರ್ಣ ಕರ್ನಾಟಕದ ಭವಿಷ್ಯ ಮತ್ತು ರೈತರ ಕಲ್ಯಾಣಕ್ಕಾಗಿ ಚಲಾಯಿಸುವ ಮತವಾಗಿದ್ದು, ಕಾಂಗ್ರೆಸ್ಗೆ ಹಾಕುವ ಮತ ದೆಹಲಿಯವರಿಗೆ ಎಟಿಎಂ ಮಾಡಿಕೊಡುವ ಮತವಾಗಲಿದೆ ಎಂದು ಕೇಂದ್ರ ಗೃಹ ಮತ್ತು ಸಹಕಾರಿ ಸಚಿವ ಅಮಿತ್ ಶಾ ತಿಳಿಸಿದರು.

ಸಭೆಯಲ್ಲಿ ಮಾತನಾಡಿದ ಅಮಿತ್ ಶಾ ರಾಜ್ಯದಲ್ಲಿ ಈ ಬಾರಿ ನಡೆಯುತ್ತಿರುವ ಚುನಾವಣೆ ಅಭಿವೃದ್ಧಿ ಮತ್ತು ರಿವರ್ಸ್ ಗೇರಿನ ನಡುವೆ ನಡೆಯುತ್ತಿರುವ ಚುನಾವಣೆಯಾಗಿದೆ. ಬಿಜೆಪಿ ಅಧಿಕಾರಕ್ಕೆ ಬಂದರೆ ಕರ್ನಾಟಕ ರಾಜ್ಯದ ವಿಕಾಸವಾಗಲಿದ್ದು ಮೋದಿ ಅವರ ನೇತೃತ್ವದಲ್ಲಿ ದಕ್ಷಿಣ ಭಾರತದಲ್ಲಿಯೇ ನಂ.1 ರಾಜ್ಯವಾಗಲಿದೆ.

ಈ ಬಾರಿ ಬಿಜೆಪಿಗೆ ನೀಡುವ ಮತ ಸುವರ್ಣ ಕರ್ನಾಟಕದ ರಾಜ್ಯದ ಭವಿಷ್ಯಕ್ಕೆ, ರಾಜ್ಯದ ಸುರಕ್ಷತೆಗೆ ಮತ್ತು ರೈತರ ಕಲ್ಯಾಣಕ್ಕೆ ನೀಡುವ ಮತವಾಗಲಿದ್ದು, ಕಾಂಗ್ರೆಸ್ಗೆ ನೀಡುವ ಮತ ದೆಹಲಿಯವರಿಗೆ ಕರ್ನಾಟಕವನ್ನು ಎಟಿಎಂ ಮಾಡಿಕೊಟ್ಟಂತಾಗುತ್ತದೆ ಎಂದು ತಿಳಿಸಿದರು.



4% ಮುಸ್ಲೀಂ ಮೀಸಲಾತಿ ಮರುಜಾರಿ ಮಾಡುತ್ತಾರಂತೆ: ರಾಜ್ಯದಲ್ಲಿ ಮುಸಲ್ಮಾನ–ರಿಗಿದ್ದ 4% ಮೀಸಲಾತಿಯನ್ನು ರದ್ದುಮಾಡಿ ಒಕ್ಕಲಿಗ, ಲಿಂಗಾಯತ, ಎಸ್.ಸಿ ಮತ್ತು ಎಸ್.ಟಿ ಮೀಸಲಾತಿಯನ್ನು ಹೆಚ್ಚಳ ಮಾಡಲಾಗಿತ್ತು.

ಆದರೆ ಕಾಂಗ್ರೆಸ್ನ ಅಧ್ಯಕ್ಷರು ಹೇಳುತ್ತಾರೆ ನಾವು ಅಧಿಕಾರಕ್ಕೆ ಬಂದರೆ ಮುಸಲ್ಮಾನ ಮೀಸಲಾತಿಯನ್ನು ಮರು ಜಾರಿ ಮಾಡುತ್ತೇವೆ ಎಂದು. ಈ ರೀತಿ ಮುಸಲ್ಮಾನ ಮೀಸಲಾತಿ ಮರು ಜಾರಿಯಾಗಬೇಕೇ ಎಂದರು. ಒಕ್ಕಲಿಗರು, ಲಿಂಗಾಯತರು ಮತ್ತು ಎಸ್.ಸಿ ಮತ್ತು ಎಸ್.ಟಿ ಗಳಿಗೆ ಹೆಚ್ಚಳ ಮಾಡಿರುವ ಮೀಸಲಾತಿ ರದ್ದಾಗಬೇಕೇ ಎಂದು ಕಾರ್ಯಕರ್ತರನ್ನು ಪ್ರಶ್ನಿಸಿದರು.

ಮೋದಿಯನ್ನು ವಿಷಸರ್ಪಕ್ಕೆ ಹೋಲಿಸುತ್ತಾರೆ: ಕಾಂಗ್ರೆಸ್ನ ಅಧ್ಯಕ್ಷ ಖರ್ಗೆಯವರು ಮೋದಿ ಅವರನ್ನು ವಿಷ ಸರ್ಪಕ್ಕೆ ಹೋಲಿಸುತ್ತಾರೆ.

ಮೋದಿ ಅವರನ್ನು ಕಾಂಗ್ರೆಸ್ನವರು ಬೈದಷ್ಟು ಕಮಲದ ಹಾಗೇ ಅರಳುತ್ತಾರೆ. ಮತ್ತೊಮ್ಮೆ 2024ಕ್ಕೆ ಪ್ರಧಾನಿಯಾಗುತ್ತಾರೆ.

ಮೋದಿಯವರು ಮನೆಯಿಲ್ಲದವರೆಗೆ ಮನೆ ನಿರ್ಮಾಣ ಮಾಡಿಕೊಟ್ಟು, ಕುಡಿಯಲು ಶುದ್ಧ ಜಲ ನೀಡಿ, ಶೌಚಾಲಯ ನೀಡಿ, ಕಳೆದ 2.5 ವರ್ಷದಲ್ಲಿ ಪ್ರತಿ ವ್ಯಕ್ತಿಗೆ 5 ಕೆ.ಜಿ ಅಕ್ಕಿ ನೀಡುತ್ತಿದ್ದಾರೆ.

ಮೋದಿ ಅವರ ನೇತೃತ್ವದಲ್ಲಿ ದೇಶದ ಸುರಕ್ಷತೆ ಮಾಡಲಾಗುತ್ತಿದ್ದು, ಆರ್ಟಿಕಲ್ 370 ರದ್ದು ಮಾಡುವ ಮೂಲಕ ಕಾಶ್ಮೀರವನ್ನು ಭಾರತದ ಅವಿಭಾಜ್ಯ ಅಂಗವಾಗಿ ಮಾಡಿದ್ದಾರೆ, ಇಂತಹ ವ್ಯಕ್ತಿಯನ್ನು ವಿಷ ಸರ್ಪಕ್ಕೆ ಹೋಲಿಕೆ ಮಾಡುವುದು ಸರಿಯೇ ಎಂದು ಕಿಡಿಕಾರಿದರು.

## ಚುನಾವಣಾ ಕರ್ತವ್ಯದ ಬಸ್ ಪಲ್ಟಿ



ವಿಜಯಪುರ: ಚುನಾವಣಾ ಕರ್ತವ್ಯದ ಮೇಲೆ ಹೊರಟಿದ್ದ ಬಸ್ ಪಲ್ಟಿಯಾದ ಘಟನೆ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಹಳ್ಳೂರು ಕ್ರಾಸ್‌ನಲ್ಲಿ ನಡೆದಿದೆ.

ಬಸ್‌ನ ಎಕ್ಸಲ್ ಕಟ್ ಆದ ಹಿನ್ನೆಲೆ ನಿಯಂತ್ರಣ ತಪ್ಪಿ ಬಸ್ ಪಲ್ಟಿಯಾಗಿದೆ. ಬಸ್‌ನಲ್ಲಿ 40 ಕ್ಕೂ ಅಧಿಕ ಪ್ರಯಾಣಿಕರಿದ್ದರು. ಅಪಘಾತದ ಹಿನ್ನೆಲೆ 15 ಕ್ಕೂ ಅಧಿಕ ಜನರಿಗೆ ಗಾಯಗಳಾಗಿವೆ. ತಕ್ಷಣ ಗಾಯಾಳುಗಳನ್ನು ಅಂಬುಲೆನ್ಸ್ ಮೂಲಕ ಆಸ್ಪತ್ರೆಗೆ ಸಾಗಿಸಲಾಗಿದೆ.

ಸಿಂದಗಿ ವಿಧಾನಸಭಾ ಕ್ಷೇತ್ರದ ಮತಕೇಂದ್ರ ತರಬೇತಿಗೆ ಸಿಬ್ಬಂದಿಯನ್ನು ಬಸ್‌ನಲ್ಲಿ ಕರೆದುಕೊಂಡು ಹೋಗಲಾಗುತ್ತಿತ್ತು. ಸಿಂದಗಿಗೆ ಕರೆದೊಯ್ಯುತ್ತಿದ್ದಾಗ ದಾರಿ ಮಧ್ಯೆ ಅಪಘಾತ ಸಂಭವಿಸಿದೆ.

ಘಟನೆಯ ವಿಷಯ ತಿಳಿದು ಮುದ್ದೇಬಿಹಾಳ ಚುನಾವಣಾಧಿಕಾರಿ ಚಂದ್ರಕಾಂತ್ ಪವಾರ್ ಗಾಯಾಳುಗಳ ನೆರವಿಗೆ ಧಾವಿಸಿದ್ದಾರೆ. ಮುದ್ದೇಬಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಲಕ್ಷ್ಮೀ ಹೆಬ್ಬಾಳಕರ್ ಹೋದಲ್ಲೆಲ್ಲ ಜನ ಜಾತ್ರೆ; ಎಲ್ಲ ಊರುಗಳಲ್ಲೂ ಪಕ್ಷಾತೀತ ಬೆಂಬಲ





ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ , ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಕಂಗ್ರಾಳಿ ಕೆಎಚ್ ಮತ್ತು ಕಂಗ್ರಾಳಿ ಬಿಕೆ ಗ್ರಾಮಗಳಲ್ಲಿ ಚುನಾವಣೆ ಪ್ರಚಾರ ನಡೆಸಿದರು.

ಜಾತ್ರೆಯಂತೆ ಕಿಕ್ಕಿರಿದು ಸೇ–ರಿದ್ದ ಜನರೊಂದಿಗೆ ಗ್ರಾಮದ ಗಲ್ಲಿ ಗಲ್ಲಿಗಳಲ್ಲಿ ರೋಡ್ ಶೋ ನಡೆಸಿದರು. ಒಂದಿಷ್ಟು ದೂರ ವಾಹನದಲ್ಲಿ ಸಂಚರಿಸಿದರೆ ಮತ್ತಷ್ಟು ದೂರ ಪಾದಯಾತ್ರೆಯ ಮೂಲಕ ತೆರಳಿದರು. ಕಣ್ಣು ಹಾಯಿಸಿದಷ್ಟೂ ದೂರ ಜನಪ್ರವಾಹವೇ ಲಕ್ಷ್ಮೀ ಹೆಬ್ಬಾಳಕರ್ ಅವರ ಜೊತೆ ಸಾಗುತ್ತಿತ್ತು.

ನಿಮ್ಮೂರಿನ ಗಲ್ಲಿ ಗಲ್ಲಿಗಳಲ್ಲಿ ಈಗ ನಾನು ಸಾಗುತ್ತಿರುವ ಈ ಎಲ್ಲ ರಸ್ತೆಗಳನ್ನು ಕಳೆದ 5 ವರ್ಷದಲ್ಲಿ ಮಾಡಿಸಿದ್ದೇನೆ. ನೀವು ಕೇಳಿದ ಕೆಲಸವನ್ನೆಲ್ಲ ಮಾಡಿಸಿಕೊಟ್ಟಿದ್ದೇನೆ. ಹಾಗಾಗಿ ನಿಮ್ಮಲ್ಲಿ ಹಕ್ಕಿನಿಂದ ಮತ ಕೇಳುತ್ತಿದ್ದೇನೆ. ನೀವೂ ಅಷ್ಟೇ ಪ್ರೀತಿಯಿಂದ ಕಳೆದ 5 ವರ್ಷದಿಂದಲೂ ನನ್ನೊಂದಿಗಿದ್ದೀರಿ. ನಾನು ಶಾಸಕಿ, ನೀವು ಮತದಾರರು ಎನ್ನುವ ಭಾವನೆಯೇ ನಮ್ಮಲ್ಲಿಲ್ಲ. ನಾವು – ನೀವೆಲ್ಲ ಒಂದೇ ಕುಟುಂಬದವರು. ಮನೆಯ ಮಗಳಾಗಿ ಸಿಕ್ಕ ಅಧಿಕಾರದ ಅವಕಾಶದಲ್ಲಿ ಗ್ರಾಮದ ಅಭಿವೃದ್ಧಿ ಮಾಡುವುದು ನನ್ನ ಕರ್ತವ್ಯ ಎಂದು ತಿಳಿದು ಮಾಡಿದ್ದೇನೆ. ಮುಂದಿನ ದಿನಗಳಲ್ಲಿ ಇನ್ನಷ್ಟು ವೇಗದಿಂದ ಅಭಿವೃದ್ಧಿ ಕೆಲಸ ಮಾಡೋಣ. ದೊಡ್ಡ ಯೋಜನೆಗಳನ್ನು ತರುವ ಮೂಲಕ ಕ್ಷೇತ್ರದ ಚಿತ್ರಣ ಮತ್ತು ಕ್ಷೇತ್ರದ ಯುವಜನತೆಯ ಬದುಕನ್ನೇ ಬದಲಾಯಿಸೋಣ ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ಹೇಳಿದರು. ನನಗೆ ದೊಡ್ಡದಾದ ಕನಸಿತ್ತು, ರಾಜಹಂಸಗಡ ಕೋಟೆಯನ್ನು ಅಭಿವೃದ್ಧಿಪಡಿಸಬೇಕು. ಅಲ್ಲಿ ದೇಶದಲ್ಲೇ ದೊಡ್ಡದಾದ ಸ್ವರಾಜ್ ಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಮೂರ್ತಿ ಪ್ರತಿಷ್ಠಾಪಿಸಬೇಕು ಎಂದು. ಕರ್ತವ್ಯ ಪ್ರಜ್ಞೆಯಿಂದ ಅದನ್ನು ನೆರವೇ–ರಿಸಿದ್ದೇನೆ. ಆದರೆ ಕೆಲವರು ಅದನ್ನು ರಾಜಕೀಯಗೊಳಿಸಲು ಯತ್ನಿಸಿದರು. ಕ್ಷೇತ್ರದ ಜನರೆಲ್ಲರೂ ಅದನ್ನು ಅರ್ಥಮಾಡಿಕೊಂಡು ನನ್ನ ಬೆನ್ನಿಗೆ ನಿಂತಿದ್ದೀರಿ. ಶಾಸ್ತ್ರೋಕ್ತವಾಗಿ ನಾನು ಉದ್ಘಾಟನೆ ಕಾರ್ಯಕ್ರಮ ಹಮ್ಮಿಕೊಂಡಾಗ ಲಕ್ಷ ಲಕ್ಷ ಸಂಖ್ಯೆಯಲ್ಲಿ ನೀವೆಲ್ಲ ಬಂದು ಪ್ರೋತ್ಸಾಹ ನೀಡಿದ್ದೀರಿ. ಈಗ ರಾಜಹಂಸಗಡ ಉಭಯ ರಾಜ್ಯಗಳ ಅತ್ಯಂತ ಸುಂದರ ಪ್ರವಾಸಿ ತಾಣವಾಗಿ ಅಭಿವೃದ್ಧಿಯಾಗಿದೆ. ನಿತ್ಯ ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುತ್ತಿದ್ದಾರೆ. ಇದು ಸಾರ್ಥಕತೆಯಲ್ಲವೇ ಎಂದು ಲಕ್ಷ್ಮೀ ಹೆಬ್ಬಾಳಕರ್ ಪ್ರಶ್ನಿಸಿದರು.

ಒಬ್ಬ ಮಹಿಳೆಯಾಗಿ, ಮೊದಲಬಾರಿ ಶಾಸಕಿಯಾಗಿ, ವಿರೋಧ ಪಕ್ಷದಲ್ಲಿದ್ದುಕೊಂಡು ಇಷ್ಟೊಂದು ಅಭಿವೃದ್ಧಿ ಯೋಜನೆಗಳನ್ನು ತರುವಾಗ ಎಷ್ಟು ಸಂಕಷ್ಟಪಟ್ಟಿರಬೇಕು ಎಂದು ಊಹಿಸಿ. ವಿನಾ ಕಾರಣ ನನಗೆ ತೊಂದರೆ ಕೊಡುವ ಮೂಲಕ ಕ್ಷೇತ್ರದ ಅಭಿವೃದ್ಧಿ ಯೋಜನೆಗಳನ್ನು ತಡೆಯಲು ಕೆಲವರು ಯತ್ನಿಸಿದ್ದನ್ನೂ ನೀವೆಲ್ಲ ಕಂಡಿದ್ದೀರಿ. ನನಗೆ ಯಾವುದೇ ಜಾತಿ ಮತ ಭೇದವಿಲ್ಲ. ಅಭಿವೃದ್ಧಿಯೊಂದೇ ನನ್ನ ಜಾತಿ. ಕ್ಷೇತ್ರದ ಜನರ ನೆಮ್ಮದಿಯೊಂದೇ ನನ್ನ ಮತ. ಕ್ಷೇತ್ರದ ಯುವಜನತೆಯ ಕೈಗೆ ಉದ್ಯೋಗ ಕೊಡಿಸುವವರೆಗೆ ನಾನು ವಿಶ್ರಮಿಸುವುದಿಲ್ಲ. ಇದೇ ಕ್ಷೇತ್ರದಲ್ಲಿ ಉತ್ಮ ಗುಣಮಟ್ಟದ ಆರೋಗ್ಯ ಸೇವೆ ಕಲ್ಪಿಸುವವರೆಗೆ ಸುಮ್ಮನಿರುವುದಿಲ್ಲ ಎಂದು ಭರವಸೆ ನೀಡಿದ ಅವರು, ಮೇ 10ರಂದು ನಡೆಯಲಿರುವ ವಿಧಾನಸಭೆ ಚುನಾವಣೆಯಲ್ಲಿ ಬ್ಯಾಲೆಟ್ ಯುನಿಟ್ ನಲ್ಲಿ 4ನೇ ನಂಬರ್ ನಲ್ಲಿರುವ ನನ್ನ ಫೋಟೋ, ಹಸ್ತದ ಚಿಹ್ನೆಯ ಮುಂದಿರುವ ಬಟನ್ ಒತ್ತುವ ಮೂಲಕ ನನಗೆ ಆಶೀರ್ವದಿಸಿ ಎಂದು ಲಕ್ಷ್ಮೀ ಹೆಬ್ಬಾಳಕರ್ ವಿನಂತಿಸಿದರು.

## 105 ಫಿಜಿಯೋ ಥೆರಪಿ ಪದವಿಧರ ವಿಧ್ಯಾರ್ಥಿಗಳ ಪ್ರಮಾಣ ವಚನ ಸ್ವೀಕಾರ



ಬೆಳಗಾವಿ: ಕೆ.ಎಲ್.ಇ ಇನ್‌ಸ್ಟಿಟ್ಯೂಟ್ ಆಫ್ ಫಿಸಿಯೋಥ–'ರಪಿ ಕೆಹರ್ ಗೌರವಾನ್ವಿತ ಉಪ ಕುಲಪತಿಗಳಾದ ಡಾ.ನಿತಿನ್ ಎಂ.ಗಂಗನೆ ಅವರು ಬಡವರಿಗೆ ಸೇವೆ ಸಲ್ಲಿಸುವಾಗ ಹೊಸತನದಿಂದ ಯೋಚಿಸುವ ಜೊತೆಗೆ ತಮ್ಮನ್ನು ತಾವು ಆಗಾಗ ನವೀಕರಿಸಿಕೊಳ್ಳುತ್ತಿರಬೇಕು ಎಂದು ಸಲಹೆ ನೀಡಿದರು.

ಅವರು ಇದೆ ಎಪ್ರೀಲ್ 26 ರಂದು ಬೆಳಗಾವಿ ಕೆ.ಎಲ್.ಇ ಇನ್‌ಸ್ಟಿಟ್ಯೂಟ್ ಆಫ್ ಫಿಸಿಯೋಥೆರಪಿ ಹಮ್ಮಿಕೊಂಡ ಫಿಜಿಯೋ ಥೆರಪಿ ಪದವಿಧರ ವಿಧ್ಯಾರ್ಥಿಗಳ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಫಿಸಿಯೋಥೆರಪಿ ವೃತ್ತಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ ಈ ಹಿನ್ನೆಲೆಯಲ್ಲಿ ಪದವೀಧರರು ಭವಿಷ್ಯದ ಸವಾಲುಗಳನ್ನು ಸ್ವೀಕರಿಸಲು ತಮ್ಮನ್ನು ತಾವು ಕಾಲಕ್ಕೆ ತಕ್ಕಂತೆ ನವೀಕರಿಸಿಕೊಳ್ಳಲು ಸಿದ್ಧರಾಗಿರಬೇಕು ಎಂದು ಅವರು ಹೇಳಿದರು.ಸಮಾರಂಭದಲ್ಲಿ ಮತ್ತೊರ್ವ ಅತಿಥಿಗಳಾದ ಡಾ.ಎಪಿಜೆ ಅಬ್ದುಲ್ ಕಲಾಂ ಕಾಲೇಜ ಆಫ್ ಫಿಸಿಯೋಥೆರಪಿ. ಪಮ್ಸ್, ಲೋಣಿ ಪ್ರಾಂಶುಪಾಲರಾದ ಡಾ.ರಾಕೇಶ ಕುಮಾರ್ ಸಿನ್ಹಾ, ಮಾತನಾಡುತ್ತ ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಯೋಜನೆಗಳು ಮತ್ತು ಗುರಿಗಳಲ್ಲಿ ಪೂರ್ವಭಾವಿಯಾಗಿ ಮತ್ತು ನಿರ್ಣಾಯಕವಾಗಿರಬೇಕು. ಹಾಗೂ ವೃತ್ತಿಪರ ಪ್ರತಿಜ್ಞೆ ಪ್ರಜ್ಞೆ ಜಾಗೃತವಾಗಿರಬೇಕು ಎಂದು ಸಲಹೆ ನೀಡಿದರು.ಕೆ.ಎಲ್.ಇ ಇನ್‌ಸ್ಟಿಟ್ಯೂಟ್ ಆಫ್ ಫಿಸಿಯೋಥ–'ರಪಿ ಬೆಳಗಾವಿಯ ಫಿಸಿಯೋಥೆರಪಿ ಪದವಿ ಪಡೆದ 24ನೇ ಬ್ಯಾಚ ಇದಾಗಿದ್ದು ಒಟ್ಟು 105 ವಿದ್ಯಾರ್ಥಿಗಳು ಪದವಿ ಪಡೆದಿದ್ದಾರೆ.



## ಶ್ರೀ ಮಹಾಲಕ್ಷ್ಮಿ ದೇವಿ ಮಂದಿರದ ಕಳಸಾರೋಹಣ, ಕಟ್ಟಡ ಉದ್ಘಾಟನೆ

ಬೆಳಗಾವಿ: ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಅವರು ತಾಲೂಕಿನ ಮಾವಿನಕಟ್ಟಿ ಗ್ರಾಮದ ಶ್ರೀ ಮಹಾಲಕ್ಷ್ಮಿ ದೇವಿ ಮಂದಿರದ ಕಳಸಾರೋಹಣ ಹಾಗೂ ನೂತನ ಕಟ್ಟಡದ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ದೇವಿಯ ದರ್ಶನದ ಪಡೆದ ನಂತರದಲ್ಲಿ ಅವರು ಎಲ್ಲ ಭಕ್ತರೊಂದಿಗೆ ಪ್ರಸಾದ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ದೇವಸ್ಥಾನ ಕಮಿಟಿ ವತಿಯಿಂದ ಚನ್ನರಾಜ ಹಟ್ಟಿಹೊಳಿ ಅವರನ್ನು ಸತ್ಕರಿಸಲಾಯಿತು.

ಗ್ರಾಮದ ಹಿರಿಯರು, ದೇವಸ್ಥಾನದ ಟ್ರಸ್ಟ್ ಕಮಿಟಿಯವರು, ನಾಗೇಶ ದೇಸಾಯಿ, ಶಂಕರಗೌಡ ಪಾಟೀಲ, ಮಹೇಶ ಸುಗೆಣ್ಣವರ ಹಾಗೂ ಗ್ರಾಮದ ಭಕ್ತಾದಿಗಳು ಉಪಸ್ಥಿತರಿದ್ದರು.

## ಬಸವಣ್ಣ ಸರ್ವಕಾಲಿಕ ಮಾನ್ಯ: ಡಾ. ಕೆಂಪಣ್ಣವರ



ಬೆಳಗಾವಿ: ಶರಣ–ರದಾರ್ಶನಿಕರರ ತೀರ್ಥಂಕರರ ಅನುಭಾವದ ಚಿಂತನೆಗಳು ಸದಾಕಾಲವೂ ಸಮಾಜವನ್ನು ಆರೋಗ್ಯ ಪೂರ್ಣ ವಾಗಿಡುವಲ್ಲಿ ಮಹತ್ತರ ಪಾತ್ರ ವಹಿಸುತ್ತಿವೆ, ಮಾರ್ಗ ದರ್ಶಿಯಾಗಿವೆ. ಅದರಲ್ಲೂ ಬಸವಣ್ಣನವರ ವಚನಗಳು ಧರ್ಮಾತೀತವಾಗಿ ಜಾತ್ಯಾತೀತವಾಗಿ ನಮ್ಮನ್ನೆಲ್ಲ ಸನ್ಮಾರ್ಗದಲ್ಲಿ ನಡೆಸುತ್ತಿವೆ ಕಾಯಕದ ಮೂಲಕ ದೈವತ್ವವನ್ನು ಹುಡುಕಿದವರು ಸಮಾಜದಲ್ಲಿ ಸರ್ವ ಸಮಾನತೆಯನ್ನು ಪ್ರತಿಪಾದಿಸಲು ಕ್ರಾಂತಿ ಮಾಡಿದವರು.

ಕಾಯಕ ದಾಸೋಹ ಸಮಾನತೆ ಏಕದೇವೋಪಾಸನೆ ಇಷ್ಟಲಿಂಗ ಪೂಜಾನಿಷ್ಠೆ ತತ್ವಗಳನ್ನು ಪ್ರತಿಪಾದಿಸಿದರು ಮೂಢನಂಬಿಕೆ ಕಂದಾಚಾರಗಳನ್ನು ಕಿತ್ತೊಗೆಯಲು ಪ್ರಯತ್ನಿಸಿದರೆಂದು ಸಾಹಿತಿ ಡಾ. ಪಿ. ಜಿ. ಕೆಂಪಣ್ಣವರ ನುಡಿದರು ಅವರು ಶ್ರೀ ಕಾರಂಜಿಮಠದ 263 ನೇ ಶಿವಾನುಭವ ಮತ್ತು ಬಸವ ಜಯಂತಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಬಸವಣ್ಣನವರು ಪ್ರತಿಪಾದಿಸಿದ ಜೀವನ ಮೌಲ್ಯಗಳು ಎಂಬ ಉಪನ್ಯಾಸ ನೀಡುತ್ತಿದ್ದರು. ಮುಂದುವರಿದು ಬಸವಕಲ್ಯಾಣದಲ್ಲಿ ಅನುಭವ ಮಂಟಪ ಸ್ಥಾಪಿಸಿ ಶರಣ–ರ ಸಂಘಟನೆ ಮಾಡಿ ವಚನಗಳ ಮೂಲಕ ಸಮಾನತೆಯ ಮೂಲಕ ಸಮಾಜತಿದ್ದಿದವರು ಬಸವಣ್ಣನವರು ಎಂದರು.

ನಾಡಿನ ಸಾಂಸ್ಕೃತಿಕ ಚಿಂತಕ ಪ್ರೊ. ಬಿ. ಎಸ್. ಗವಿಮಠ ಅಧ್ಯಕ್ಷತೆ ವಹಿಸಿ ಬಸವಣ್ಣನವರು ಹುಟ್ಟದೆ ಇದ್ದರೆ ಸಮಾಜದಲ್ಲಿ ಇನ್ನೂ ಅಜ್ಞಾನ ಅಂಧಕಾರ ಜಾತೀಯತೆ ತಾಂಡವವಾಡುತಿತ್ತು ಬಸವಣ್ಣನವರ ವಚನಗಳಲ್ಲಿರುವ ಜೀವನ ಮೌಲ್ಯಗಳನ್ನು ನಿತ್ಯಜೀವನದಲ್ಲಿ ಅಳವಡಿಸಿಕೊಂಡು ಬದುಕನ್ನು ಸಾರ್ಥಕ ಮಾಡಿಕೊಳ್ಳಬೇಕೆಂದರು.

ಆಶೀರ್ವಚನ ನೀಡಿದಡಾ. ಶಿವಯೋಗಿ ದೇವರು ಲಿಂಗಾಯತ ಧರ್ಮ ಸ್ಥಾಪಕ ಬಸವಣ್ಣನವರ ತತ್ವ ಆದ–'ರ್ಶಗಳು ಜಗತ್ತಿಗೆದಾ–ರಿದೀಪ ಸಾಧಕರ ಬದುಕಿಗೆ ಆದರ್ಶ .ಯುವಜನಾಂಗ ತತ್ವಗಳನ್ನು ಅಳವಡಿಸಿಕೊಂಡು ಜೀವನ ಸಾರ್ಥಕ ಮಾಡಿಕೊಳ್ಳಬೇಕೆಂದರು ಪೂಜ್ಯ ಗುರುಸಿದ್ದ ಮಹಾಸ್ವಾಮಿಗಳು ಸಾನಿಧ್ಯವಹಿಸಿದ್ದರು

ಎ. ಕೆ. ಪಾಟೀಲ ಸ್ವಾಗತಿಸಿದರು ನ್ಯಾಯವಾದಿ ವಿ. ಕೆ. ಪಾಟೀಲ ವಂದಿಸಿದರು ಮಾತೃಮಂಡಳಿ ಸದಸ್ಯರು ವಚನ ಪ್ರಾರ್ಥನೆ ಸಲ್ಲಿಸಿದರು ಬಸವರಾಜಗಾರ್ಗಿ ಶರಣು ಸಮರ್ಪಿಸಿದರು.

## ವಚನ ಕೇವಲ ಸಾಹಿತ್ಯ ಪ್ರಕಾರವಲ್ಲ: ಸಮಾಜೋಧಾರ್ಮಿಕ ಚಳವಳಿಯ ಮಾಧ್ಯಮ: ಡಾ. ವೀರಣ್ಣರಾಜೂರ




ಬೆಳಗಾವಿ: ವಚನ ಕೇವಲ ಮಾತು ಅಥವಾ ಸಾಹಿತ್ಯ ಪ್ರಕಾರವಲ್ಲ. ಅದೊಂದು ಚಳವಳಿಯ ಮಾಧ್ಯಮ. ನಡೆ–ನುಡಿಗಳ ಸಮಾಗಮಎಂದು ಹಿರಿಯ ಸಂಶೋಧಕ ಡಾ. ವೀರಣ್ಣರಾಜೂರ ಹೇಳಿದರು.

ಅವರುಜಾಗತಿಕ ಲಿಂಗಾಯತ ಮಹಾಸಭಾ ಹಾಗೂ ರಾಷ್ಟ್ರೀಯ ಬಸವ ಸೇನೆ ಜಿಲ್ಲಾಘಟಕ ಸಹಯೋಗದಲ್ಲಿ ಇಲ್ಲಿನ ಶಿವಬಸವನಗರದ ಪ್ರಭುದೇವ ಸಭಾಗ್ರಹದ ಸಭಾಂಗಣದಲ್ಲಿ ಬಸವ ಜಯಂತಿ ನಿಮಿತ್ತ ಆಯೋಜಿಸಿದ್ದ ಬಸವತತ್ವ ಸಮಾವೇಶದಲ್ಲಿ ಉಪನ್ಯಾಸ ನೀಡಿದರು.

"12ನೇ ಶತಮಾನದಲ್ಲಿ ಕರ್ನಾಟಕದ ಕಲ್ಯಾಣದಲ್ಲಿ ನಡೆದಿದ್ದು ಮಾನವೋದ್ಧಾರದ ಮಹಾಕ್ರಾಂತಿ. ಅದು ಸರ್ವ ಸಮಾನತೆಯ ಸುಂದರ ಸಮಾಜ ನಿರ್ಮಾಣದ ಉದ್ದೇಶದಿಂದ ನಡೆದಜಗತ್ತಿನ ಮೊದಲ ಸಮಾಜೋಧಾರ್ಮಿಕ ಸಮಗ್ರಕ್ರಾಂತಿ. ಅದಕ್ಕೆ ಮಾಧ್ಯಮವಾದದ್ದು ವಚನ ಸಾಹಿತ್ಯ. ಸಮಾನತೆ, ಸ್ವಾತಂತ್ರ್ಯ, ಸಹೋದರತ್ವ ಇವುಗಳ ತಳಹದಿಯ ಮೇಲೆ ಸುಂದರ ಸಮಾಜ ನಿರ್ಮಾಣ ಅದರ ಉದ್ದೇಶವಾಗಿದೆ" ಎಂದುಅವರು ಹೇಳಿದರು.

"ಕೇವಲ ಮಾತನಾಡಿದರೆ ಉಪಯೋಗ ವಿಲ್ಲ. ಮಾತಿಗೆ ಮೌಲ್ಯ ಬರಬೇಕಾದರೆ ಅದು ನಡೆಯಲ್ಲಿ ಬರಬೇಕು ಎಂಬುದೇ ವಚನಗಳ ಸಾರ. ಲಿಂಗಸಾಕ್ಷಿ, ಮನಸಾಕ್ಷಿ, ಆತ್ಮಸಾಕ್ಷಿ ಅದರಲ್ಲಿರಬೇಕು. ಎಂದು ಅವರು ಹೇಳಿದರು.

ಇದೇ ವೇಳೆ ಕರ್ನಾಟಕ ಸರಕಾರದಿಂದ 'ಬಸವಶ್ರೀ' ಪ್ರಶಸ್ತಿಗೆ ಭಾಜನರಾಗಿರುವ ಡಾ. ವೀರಣ್ಣರಾಜೂರ ಅವರನ್ನು ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಅಭಿನಂದನಾ ನುಡಿಗಳನ್ನಾಡಿದ ಡಾ. ಬಸವರಾಜಜಗಜಂಪಿ ಮಾತನಾಡಿ, ಸರಳ, ಸಜ್ಜನಿಕೆಗಳಿಗೆ ಭಾಷ್ಯ ಬರೆದವರುಎಂದು ಪ್ರಶಸಂಸಿಸಿದರಲ್ಲದೆ, 1970ರಿಂದ ಅವರಒಡನಾಟ ಸ್ಮರಿಸಿದ ಜಗಜಂಪಿಯವರು, ಕನ್ನಡ ಸಾಹಿತ್ಯದ ಸದ್ದಿಲ್ಲದ ಸಾಧಕರಾದ ವೀರಣ್ಣರಾಜೂರ, ಸಾಮಾನ್ಯ ಮೊಘಲಾಯಿ ಹಳ್ಳಿಯಿಂದ ಬಂದು ಸಾಹಿತ್ಯ, ಸಂಶೋಧನೆಯಲ್ಲಿ ಅಗಾಧ ಸಾಧನೆ ಮಾಡಿದವರು.

ಅವರುಎಂದೂ ಪ್ರಚಾರದ ಬೆನ್ನುಬಿದ್ದವರಲ್ಲ.

ಡಾ. ಎಂ.ಎಂ. ಕಲಬುರಗಿಅವರ ಸಮರ್ಥಉತ್ತರಾಧಿಕಾರಿಯಾಗಿದ್ದಾರೆ. ನಿರಂತರಓದು, ಅಧ್ಯಾಪನ, ಸಂಶೋಧನೆ, ಪ್ರಕಟಣೆ ಈ ಎಲ್ಲ ಮಗ್ಗಲುಗಳಿಂದ ಪರಿಪೂರ್ಣ ಸಾಹಿತಿ, ಸಾಧಕರಾಗಿರುವವರುಅವರು. ಕನ್ನಡದ–ಎಲ್ಲ ಪ್ರಕಾರಗಳಲ್ಲಿ ಅವರು ಕೃಷಿ ಮಾಡಿದವರುಎಂದು ಶ್ಲಾಘಿಸಿದರು.

ವಿಶ್ರಾಂತಐಎಎಸ್‌ಅಧಿಕಾರಿ, ಜಾಗತಿ–ಕ ಲಿಂಗಾಯತ ಮಹಾಸಭಾ ಪ್ರಧಾನ ಕಾರ್ಯದರ್ಶಿ ಡಾ. ಶಿವಾನಂದ ಜಾಮದಾರ್ ಮಾತನಾಡಿದರು.

ನ್ಯಾಯವಾದಿ, ಜಾಗತಿಕ ಲಿಂಗಾಯತ ಮಹಾಸಭಾಅಧ್ಯಕ್ಷ ಬಸವರಾಜರೊಟ್ಟಿ ಅಧ್ಯಕ್ಷತೆ ವಹಿಸಿದ್ದರು.

ಶ್ರೀ ಶಿವಾನಂದ ಮಹಾಸ್ವಾಮಿಗಳು ಹಂದಿಗುಂದ ನಾಗನೂರು ಮಠದ ಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ರಾಷ್ಟ್ರೀಯ ಬಸವ ಸೇನೆ ಅಧ್ಯಕ್ಷ ಶಂಕರಗುಡಸ ವೇದಿಕೆಯಲ್ಲಿದ್ದರು.

ನಿವೃತ್ತ ಪ್ರಾಚಾರ್ಯಡಾ. ಸಿ.ಕೆ. ನಾವಲಗಿ ಪರಿಚಯಿಸಿದರು. ನಯನಾಗಿರಿ ಗೌಡರ್ ತಂಡದವರು ಪ್ರಾರ್ಥಿಸಿದರು. ಮುರಿಗೆಪ್ಪಾ ಬಾಳಿ ಸ್ವಾಗತಿಸಿದರು. ಜಾಗತಿಕ ಲಿಂಗಾಯತ ಮಹಾಸಭಾ ನಗರಘಟಕಾಧ್ಯಕ್ಷ ಎಸ್.ಜಿ. ಸಿದ್ನಾಳ ವಂದಿಸಿದರು. ಜಾಗತಿಕ ಲಿಂಗಾಯತಜಿಲ್ಲಾ ಪ್ರದಾನಕಾರ್ಯದರ್ಶಿ ಅಶೋಕ ಮಳಗಲಿ ನಿರೂಪಿಸಿದರು.

## ಧಾರಾಕಾರ ಮಳೆಗೆ ಮನೆ ಕುಸಿತ ಹಸುಗೂಸು, ವೃದ್ಧೆ ಸಾವು



ಕೊಪ್ಪಳ: ಮಳೆ ಅಬ್ಬರ ಜೋರಾಗಿದ್ದು, ಮಳೆಯ ಅವಾಂತರಕ್ಕೆ ಮನೆ ಕುಸಿದು ಬಿದ್ದು ವೃದ್ಧೆ ಸೇರಿದಂತೆ 20 ದಿನದ ಹಸುಗೂಸು ಸಾವನ್ನಪ್ಪಿರುವ ಧಾರುಣ ಘಟನೆ ಜಿಲ್ಲೆಯ ಕನಕಗಿರಿ ತಾಲೂಕಿನ ಜೀರಾಳದಲ್ಲಿ ನಡೆದಿದೆ.

ಮನೆ ಕುಸಿತದಿಂದ ಹಸುಗೂಸು ಹಾಗೂ ವೃದ್ಧೆ ಫಕೀರಮ್ಮ (60) ಸಾವನ್ನಪ್ಪಿದ್ದಾರೆ. ಮಂಗಳವಾರ ಬೆಳಗ್ಗಿನ ಜಾವ ಎಲ್ಲರೂ ಮಲಗಿದ್ದ ವೇಲೆ ದುರ್ಘಟನೆ ನಡೆದಿದೆ.

ಬಾಣಾಂತಿ ಕನಕಮ್ಮಳಿಗೆ ಗಾಯಗಳಾಗಿದ್ದು, ಈಕೆಯನ್ನು ಗಂಗಾವತಿ ತಾಲೂಕು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಕನಕಮ್ಮಳ ಪತಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಜೀರಾಳ ಗ್ರಾಮದಲ್ಲಿ ಸ್ಮಶಾನ ಮೌನ ಆವರಿಸಿದೆ.

## ಕುಲ್ಲಕ್ಷ ಕಾರಣಕ್ಕೆ ಜಗಳ: ಬೈಕ್‌ಗಳಿಗೆ ಬೆಂಕಿ ಕಿಡಿಗೇಡಿಗಳು



ರಾಮನಗರ: ಕಾಂಪೌಂಡ್ ನಿರ್ಮಿಸುವ ವಿಚಾರದಲ್ಲಿ ರವಿಶಂಕರ್ ಗುರೂಜಿ ಆರ್ಟ್ ಆಫ್ ಲಿವಿಂಗ್ ಆಶ್ರಮದ ಬೆಂಬಲಿಗರು ಹಾಗೂ ಸ್ಥಳೀಯರ ನಡುವೆ ಸೋಮವಾರ ಜಟಾಪಟಿ ನಡೆದಿದ್ದು, ಉದ್ರಿಕ್ತರ ಗುಂಪು ಎಂಟಕ್ಕೂ ಹೆಚ್ಚು ಬೈಕ್‌ಗಳಿಗೆ ಬೆಂಕಿ ಇಟ್ಟಿದೆ.

ಕಗ್ಗಲೀಪುರ ಪೊಲೀಸ್ ಠಾಣೆ ವ್ಯಾಪ್ತಿಯ ವಡೇರಹಳ್ಳಿ ಬಳಿ ಆಶ್ರಮಕ್ಕೆ ಸೇರಿದ ಐದು ಎಕರೆ ಜಾಗದಲ್ಲಿ 'ಮಧುವನ' ಇದೆ. ಇದಕ್ಕೆ ಹೊಂದಿಕೊಂಡಂತೆ ಗ್ರಾಮದ ಸರ್ವೇ ನಂಬರ್ 137ರಲ್ಲಿ ಸುಮಾರು 36 ಎಕರೆ ಜಮೀನು ಇದೆ. ಸ್ಥಳೀಯರು ಇದನ್ನು ಹತ್ತಾರು ವರ್ಷಗಳಿಂದ ಉಳುಮೆ ಮಾಡುತ್ತ ಬಂದಿದ್ದಾರೆ.

ಸೋಮವಾರ ಆಶ್ರಮದ ಸಿಬ್ಬಂದಿ ಈ ಜಾಗಕ್ಕೆ ಕಾಂಪೌಂಡ್ ನಿರ್ಮಿಸಲು ಮುಂದಾಗಿದ್ದಾರೆ ಎನ್ನಲಾಗಿದೆ. ಇದಕ್ಕೆ ಸ್ಥಳೀಯರ ಗುಂಪು ವಿರೋಧ ವ್ಯಕ್ತಪಡಿಸಿದೆ. ಇದೇ ವಿಚಾರವಾಗಿ ಎರಡು ಗುಂಪುಗಳ ನಡುವೆ ಹೊಡೆದಾಟ ನಡೆದಿದೆ. ಈ ಸಂದರ್ಭ ಮಧುವನದ ಆವರಣದಲ್ಲಿದ್ದ ಎಂಟು ಬೈಕ್‌ಗಳಿಗೆ ಬೆಂಕಿ ಹಾಕಲಾಗಿದೆ. ಜೊತೆಗೆ ಐದು ಕಾರುಗಳೂ ಜಖಂಗೊಂಡಿವೆ. ಮಧುವನದ ಕಟ್ಟಡದ ಗಾಜುಗಳೂ ಒಡೆದಿವೆ.

'ಆಶ್ರಮದ ಸಿಬ್ಬಂದಿ ಏಕಾಏಕಿ ಬಂದು ಕಾಂಪೌಂಡ್ ನಿರ್ಮಿಸಲು ಮುಂದಾಗಿದ್ದು, ಅದಕ್ಕೆ ವಿರೋಧ ವ್ಯಕ್ತಪಡಿಸಿದ ನಮ್ಮ ಮೇಲೆ ಹಲ್ಲೆ ನಡೆಸಿದೆ' ಎಂದು ಸ್ಥಳೀಯರು ಕಗ್ಗಲೀಪುರ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

## ದಲಿತರ ಏಳಿಗೆಗೆ ಕತ್ತಿ ಕುಟುಂಬ ಸದಾ ಬದ್ಧ: ಸುರೇಶ ತಳವಾರ



ಹುಕ್ಕೇರಿ : ಸಮಾಜದ ಮುಖ್ಯ ವಾಹಿನಿಗೆ ದಲಿತರನ್ನು ಗುರುತಿಸಿ ಕರೆತರುವ ಮಹತ್ತರ ಕೆಲಸವನ್ನು ಕತ್ತಿ ಕುಟುಂಬ ಮಾಡಿದೆ ಎಂದು ಎಸ್ಸಿಎಸ್ಟಿ ದೌರ್ಜನ್ಯ ನಿಯಂತ್ರಣ ಜಿಲ್ಲಾ ಸಮಿತಿ ಸದಸ್ಯ ಸುರೇಶ ತಳವಾರ ಹೇಳಿದರು.

ತಾಲೂಕಿನ ಬಸ್ತವಾಡ ಗ್ರಾಮದಲ್ಲಿ ಸೋಮವಾರ ಬಿಜೆಪಿ ಅಭ್ಯರ್ಥಿ ನಿಖಿಲ್ ಕತ್ತಿ ಅವರ ಚುನಾವಣಾ ಪ್ರಚಾರಾರ್ಥ ಏರ್ಪಡಿಸಿದ್ದ ಬೈಕ್ ರ್ಯಾಲಿ ಚಾಲನಾ ಸಮಾರಂಭದಲ್ಲಿ ಮಾತನಾಡಿದ ಅವರು, ದಲಿತ ಸಮುದಾಯದ ಸಮಗ್ರ ಏಳಿಗೆಗೆ ಕತ್ತಿ ಕುಟುಂಬಸ್ಥರು ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದರು.

ಹುಕ್ಕೇರಿಯಲ್ಲಿ ಬಹುದಿನಗಳ ಬೇಡಿಕೆಯ ಡಾ.ಬಾಬಾಸಾಹೇಬ ಅಂಬೇಡ್ಕರ ಪ್ರತಿಮೆ ಸ್ಥಾಪಿಸಿ ಈ ಪ್ರದೇಶದ ಸೌಂದರ್ಯೀಕರಣಕ್ಕೆ 25 ಲಕ್ಷ ಬಿಡುಗಡೆಗೊಳಿಸಿದ್ದಾರೆ. ಎಸ್ಸಿಎಸ್ಟಿ ಸಮಾಜದ 80 ಕ್ಕೂ ಹೆಚ್ಚು ಗುತ್ತಿಗೆದಾರರಿಗೆ ವಿವಿಧ ಕಾಮಗಾರಿಗಳನ್ನು ಗುತ್ತಿಗೆ ನೀಡಿದ್ದಾರೆ. 100 ಮಹಿಳೆಯರಿಗೆ ಸ್ವಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವು ಒದಗಿಸಿದ್ದಾರೆ. ಕೃಷಿ, ನೀರಾವರಿ, ಶಿಕ್ಷಣ, ಆರೋಗ್ಯ, ಸಂಚಾರ, ಗ್ರಾಮೀಣಾಭಿವೃದ್ಧಿ ಹೀಗೆ ಅನೇಕ ಕ್ಷೇತ್ರಗಳ ಮೂಲಕ ದಲಿತರನ್ನು ಉತ್ತೇಜಿಸುವ ಕೆಲಸವನ್ನು ದಿ.ಉಮೇಶ ಕತ್ತಿ ಮತ್ತು ಅವರ ಕುಟುಂಬ ಮಾಡಿದೆ ಎಂದು ಅವರು ಹೇಳಿದರು.

ಪ್ರಸಕ್ತ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿಸಿ ಕ್ಷೇತ್ರದ ಪ್ರತಿ ಹಳ್ಳಿಯ ಎಸ್ಸಿಎಸ್ಟಿ ಸಮುದಾಯದ ಕಾಲೋನಿಗಳಿಗೆ ತೆರಳಿ ಪ್ರಚಾರ ನಡೆಸಲಾಗುವುದು. ಕೇಂದ್ರ ಮತ್ತು ರಾಜ್ಯ ಸರ್ಕಾರ ಈ ಸಮಾಜಕ್ಕೆ ಮಾಡಿರುವ ಕೆಲಸಗಳ ಕುರಿತು ಮನವ–ರಿಕೆ ಮಾಡಿಕೊಡಲಾಗುವುದು. ಈ ಮೂಲಕ ಅಭ್ಯರ್ಥಿ ನಿಖಿಲ್ ಕತ್ತಿ ಅವರ ದಾಖಲೆ ಗೆಲುವಿಗೆ ಶ್ರಮಿಸಲಾಗುವುದು ಎಂದು ಅವರು ಹೇಳಿದರು.

ಪುರಸಭೆ ಅಧ್ಯಕ್ಷ ಎ.ಕೆ.ಪಾಟೀಲ, ಮುಖಂಡರಾದ ಬಸವರಾಜ ಮಟಗಾರ, ಗುರಪ್ಪಾ ತಳವಾರ, ಉದಯ ಹುಕ್ಕೇರಿ, ಬಸವರಾಜ ಕಲ್ಲಟ್ಟಿ, ಅಶೋಕ ಅಂಕಲಗಿ, ಮುಕುಂದ ಮಠದ, ಬಿ.ಕೆ.ಸದಾಶಿವ, ರಮೇಶ ಹುಂಜಿ, ಅಪ್ಪಣ್ಣಾ ಖಾತೇದಾರ, ರಾಜೇಂದ್ರ ಮೋಶಿ, ಮುತ್ತು ಕಾಂಬಳೆ, ಯಲ್ಲಪ್ಪ ಡಪ್ಪರಿ, ರಮೇಶ ತಳವಾರ, ಶಂಕರ ತಿಪ್ಪನಾಯಿಕ, ಮಾರುತಿ ತಳವಾರ, ಸಂತೋಷ ರುಡ್ಡಗೋಳ, ಶಿವಾನಂದ ಮರಿನಾಯಿಕ, ಸಂತೊಷ ಗಸ್ತಿ, ನಾಗೇಶ ಸಣ್ಣಕ್ಕಿ, ರೋಹಿತ ತಳವಾರ, ಗೋಪಾಲ ಕಾಳೆ ಮತ್ತಿತರರು ಉಪಸ್ಥಿತರಿದ್ದರು.

# ನನ್ನ ಆತ್ಮೀಯರ ಮೇಲೆ ಐಟಿ ರೇಡ್ ಮಾಡುವ ಹುನ್ನಾರ ನಡೆದಿದೆ: ವಿನಯ್ ಕುಲಕರ್ಣಿ



ಬೆಳಗಾವಿ: ಇವತ್ತು ಕೋರ್ಟ್ ನನಗೆ ಧಾರವಾಡ ಜಿಲ್ಲಾ ಪ್ರವೇಶಕ್ಕೆ ಅನುಮತಿ ಕೊಟ್ಟಿಲ್ಲ. ಹೊರಗಡೆ ಇದ್ದುಕೊಂಡೇ ನಾನು ಚುನಾವಣೆ ಮಾಡುತ್ತಿದ್ದೇನೆ ಎಂದು ಮಾಜಿ ಸಚಿವ ವಿನಯ್ ಕುಲಕರ್ಣಿ ಹೇಳಿದರು.

ಜಿಲ್ಲೆಯ ಕಿತ್ತೂರಿನಲ್ಲಿ ಮನೆ ಮಾಡಿಕೊಂಡು ಇರುವ ಧಾರವಾಡ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕುಲಕರ್ಣಿ, ಕ್ಷೇತ್ರದ ಜನ ಇದೀಗ ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ. ಮರಳಿ ನನಗೆ ಅವಕಾಶ ಕೊಡಲು ಉತ್ಸುಕರಾಗಿದ್ದಾರೆ ಎಂದು ತಿಳಿಸಿದರು.

ನನ್ನ ಮೇಲೆ ಬಿಜೆಪಿ ಷಡ್ಯಂತ್ರ ನಡೆಸಿದೆ ಎಂಬ ಹೇಳಿಕೆಗೆ ನಾನು ಈಗಲೂ ಬದ್ಧನಿದ್ದೇನೆ. ಏಕೆಂದರೆ ಕೋರ್ಟ್‌ನಲ್ಲಿ ಯರ್ಯಾರು ಬಂದು ಕುಳಿತಿರುತ್ತಾರೆ ಎಂಬುದನ್ನು ನೀವು ನೋಡಿದರೆ ನಿಮಗೇ ಗೊತ್ತಾಗುತ್ತದೆ.

ನಾನು ಅಷ್ಟೇ ಅಲ್ಲ ರಾಜ್ಯದ ಅನೇಕ ನಾಯಕರ ಮೇಲೆ ಬಿಜೆಪಿ ಷಡ್ಯಂತ್ರ ನಡೆಸಿದೆ. ಇಂದಿಗೂ ಅನೇಕರ ಮೇಲೆ ಐಟಿ ರೇಡ್ ಮಾಡಿಸಲಾಗುತ್ತಿದೆ.

ಕಳೆದ ಬಾರಿಯ ಚುನಾವಣೆಯಲ್ಲಿ ಬಿಜೆಪಿಯವರು ನಮ್ಮ ಪಿಎ ಮನೆಗಳ ಮೇಲೆ ಐಟಿ ದಾಳಿ ನಡೆಸಿ ಅವರು ಹೊರಗಡೆ ಬರದಂತೆ ಮಾಡಿದರು ಎಂದು ಆರೋಪಿಸಿದರು.

ನನ್ನ ಅವಧಿಯಲ್ಲಿ ಆದಂತಹ ಕೆಲಸಗಳನ್ನು ಮುಂದಿಟ್ಟುಕೊಂಡು ನನ್ನ ಪತ್ನಿ ಹಾಗೂ ಕಾರ್ಯಕರ್ತರು ಮತ ಕೇಳುತ್ತಿದ್ದಾರೆ.

ರೈತರಿಗೆ, ವಿದ್ಯಾರ್ಥಿಗಳಿಗೆ, ಯುವಕ–ರಿಗೆ ನಾವು ಕೊಟ್ಟಂತಹ ಯೋಜನೆಗಳು ಇಂದು ನನ್ನ ಕೈ ಹಿಡಿಯುತ್ತಿವೆ. ಕಳೆದ 5 ವರ್ಷಗಳ ಅವಧಿಯಲ್ಲಿ ಬಿಜೆಪಿ ಶಾಸಕರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸವನ್ನೇ ಮಾಡಿಲ್ಲ. ಒಂದೂ ಜನಸಂಪರ್ಕ ಸಭೆ ನಡೆಸಿಲ್ಲ.

ಕಾಂಗ್ರೆಸ್‌ಗೆ ಬೆಂಬಲ ನೀಡಿದಂತಹವ–ರಿಗೆ ಕಿರುಕುಳ ನೀಡುವ ಕೆಲಸ ಮಾಡಿದ್ದಾರೆ. 1 ಲಕ್ಷ ರೂ. ಕೊಟ್ಟವರಿಗೆ ಮಾತ್ರ ಮನೆ ಹಾಕಿಸಿಕೊಟ್ಟಿದ್ದಾರೆ ಎಂದರು.

ವಿನಯ್ ಕುಲಕರ್ಣಿ ಯಾರು ಎಂಬುದು ನನ್ನ ಕ್ಷೇತ್ರದ ಜನರಿಗೆ ಗೊತ್ತಿದೆ. ನ್ಯಾಯಾಂಗದ ಮೇಲೆ ನನಗೆ ಭರವಸೆ ಇದೆ. ಸತ್ಯಕ್ಕೆ ಜಯ ಸಿಕ್ಕೇ ಸಿಗುತ್ತದೆ.

ಬಿಜೆಪಿಯವರು ಹಾಲಿನಲ್ಲಿ ಹರಳು ಒಗೆಯುವ ಕೆಲಸ ಮಾಡಿದ್ದಾರೆ. ಇಂದು ಕ್ಷೇತ್ರದಲ್ಲಿ ನನ್ನ ಪತ್ನಿಗೆ ಒಳ್ಳೆಯ ಸ್ಪಂದನೆ ಸಿಗುತ್ತಿದೆ. ಎಲ್ಲರೂ ಆಕೆಯನ್ನು ಮನೆಯ ಮಗಳಂತೆ ಕಾಣುತ್ತಿದ್ದಾರೆ.

ನಾನು ಜಿಲ್ಲೆಯ ಹೊರಗಿದ್ದರೂ ಕೆಲಸ ಮಾಡುತ್ತೇನೆ. ಈ ಬಾರಿ ನನ್ನ ಕ್ಷೇತ್ರ ಮಾತ್ರವಲ್ಲ ಇಡೀ ರಾಜ್ಯದಲ್ಲೇ ಕಾಂಗ್ರೆಸ್ ಪರ ಅಲೆ ಇದೆ ಎಂದು ಹೇಳಿದರು.

ಈಗಿನ ಸರ್ಕಾರ ಮಾಡಿದಷ್ಟು ಭ್ರಷ್ಟಾಚಾರವನ್ನು ಯಾವ ಸರ್ಕಾರವೂ ಮಾಡಿಲ್ಲ.

ನಾನು ಮಾಡಿದ ಕೆರೆಗೆ ನೀರು ತುಂಬಿಸುವ ಕೆಲಸ, ಮಂದಿರ ನಿರ್ಮಾಣ ಸೇರಿದಂತೆ ಇತ್ಯಾದಿ ಕೆಲಸಗಳಿಗೆ ಬಿಜೆಪಿ ಶಾಸಕರು ತಮ್ಮ ಹೆಸರು ಹಾಕಿಸಿಕೊಳ್ಳುವ ಕೆಲಸ ಮಾಡಿದ್ದಾರೆ.

ನನ್ನ ಕ್ಷೇತ್ರಕ್ಕೆ ಯಾವುದೇ ಸ್ಟಾರ್ ಪ್ರಚಾರಕರ ಅವಶ್ಯಕತೆ ಇಲ್ಲ. ನನ್ನ ಕಾರ್ಯಕರ್ತರೇ ನನ್ನ ಸ್ಟಾರ್ ಪ್ರಚಾರಕರು. ಸಿದ್ದರಾಮಯ್ಯ ಒಬ್ಬರು ನನ್ನ ಕ್ಷೇತ್ರಕ್ಕೆ ಬರುತ್ತೇನೆ ಎಂದಿದ್ದಾರೆ. ದುಂದುವೆಚ್ಚ ಮಾಡುವವನು ನಾನಲ್ಲ ಎಂದರು.

ಸುದೀಪ್ ಅವರು ಕರೆಕ್ಟ್ ಆಗಿಯೇ ಹೇಳಿದ್ದಾರೆ. ಅಭಿವೃದ್ಧಿ ಯಾರು ಮಾಡುತ್ತಾರೋ ಅವರಿಗೆ ಮತ ಹಾಕಿ ಎಂದಿದ್ದಾರೆ. ಅದು ಕರೆಕ್ಟ್ ಆಗಿಯೇ ಇದೆ. ಇಂದಿಗೂ ನಮ್ಮ ಫೋನ್‌ಗಳನ್ನು ಟ್ಯಾಪ್ ಮಾಡಲಾಗುತ್ತಿದೆ. ಕಾಲ್ ರೆಕಾರ್ಡ್ ಮಾಡಲಾಗುತ್ತಿದೆ.

ನಾವು ಏನಾದರೂ ಮಾತನಾಡಿದರೆ ಅದು 10 ನಿಮಿಷಕ್ಕೆ ಬಿಜೆಪಿಯವರಿಗೆ ಮಾಹಿತಿ ಮುಟ್ಟುತ್ತದೆ. ಈ ದೇಶದಲ್ಲಿ ಪ್ರಜಾಪ್ರಭುತ್ವದ ಕಗ್ಗೊಲೆ ಆಗುತ್ತಿದೆ.

ಆದ್ದರಿಂದ ಪ್ರಜಾಪ್ರಭುತ್ವದ ಉಳಿವಿಗೆ ಕಾಂಗ್ರೆಸ್ ಅವಶ್ಯವಿದೆ. ಈ ಬಾರಿ ನಾವು 146 ಸೀಟುಗಳನ್ನು ಗೆಲ್ಲುತ್ತೇವೆ ಎಂದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089